# ಯೆಹೋಶುವ

## ಮುನ್ನುಡಿ

ದೇವರಿಂದ ಆಯ್ಕೆಯಾಗಿ ಹಾಗು ಮೋಶೆಯ ಉತ್ತರಾಧಿಕಾರಿಯಾಗಿ ಇಸ್ರಯೇಲ್ ಜನಾಂಗವನ್ನು ಮುನ್ನಡೆಸಿದ ಮಹಾನುಭಾವ ಯೆಹೋಶುವ. ಇವನು ಹೇಗೆ ವಾಗ್ದತ್ತ ನಾಡಾದ ಕಾನಾನನ್ನು ಜಯಿಸಿ ಆ ನಾಡನ್ನು ಇಸ್ರಯೇಲಿನ ಹನ್ನೆರಡು ಗೋತ್ರಗಳಿಗೆ ಹಂಚಿಕೊಟ್ಟ ಎಂಬುದನ್ನು ವಿವರಿಸುತ್ತದೆ ಈ ಗ್ರಂಥ.

ಇದರಲ್ಲಿ ಗಮನಾರ್ಹವಾದ ಘಟನೆಗಳು ಇವು: ಜೋರ್ಡಾನ್ ನದಿದಾಟು, ಜೆರಿಕೋ ಪಟ್ಟಣದ ಪತನ, ಆಯಿ ನಗರದ ಆಕ್ರಮಣ, ವಾಗ್ದತ್ತ ನಾಡಿನಲ್ಲಿ ನಿವಾಸ, ದೇವರೊಡನೆ ಇಸ್ರಯೇಲ್ ಸಮಾಜ ಮಾಡಿಕೊಂಡಿದ್ದ ಒಡಂಬಡಿಕೆಯ ನವೀಕರಣ. ಈ ಭಾಗದ ಗಮನಾರ್ಹ ವಾಕ್ಯವೆಂದರೆ ಇದು: "ನೀವು ಯಾರಿಗೆ ಸೇವೆ ಸಲ್ಲಿಸಬೇಕೆಂದಿದ್ದೀರಿ? ಇಂದೇ ಆರಿಸಿಕೊಳ್ಳಿ; ನಾನು ಮತ್ತು ನನ್ನ ಮನೆಯವರಾದರೋ ಸರ್ವೇಶ್ವರನಿಗೆ ಮಾತ್ರ ಸೇವೆ ಸಲ್ಲಿಸುತ್ತೇವೆ" (24.15).

## ಪರಿವಿಡಿ


| | | |
|---|---|---|
| 1. ಕಾನಾನ್ ನಾಡಿನ ವಶೀಕರಣ | – | 1.1 – 12.24 |
| 2. ಆ ನಾಡಿನ ವಿಭಜನೆ | – | 13.1 – 21.45 |
| ಅ) ಜೋರ್ಡನಿನ ಪೂರ್ವಪ್ರದೇಶ | – | 13.1 – 13.33 |
| ಆ) ಜೋರ್ಡನಿನ ಪಶ್ಚಿಮ ಪ್ರದೇಶ | – | 14.1 – 19.51 |
| ಇ) ಆಶ್ರಯ ನಗರಗಳ ಸ್ಥಾಪನೆ | – | 20.1 – 20.9 |
| ಈ) ಲೇವಿಯರ ನಿವಾಸ ನಗರಗಳು | – | 21.1 – 21.45 |
| 3. ಪೂರ್ವ ಗೋತ್ರಗಳು ಮರಳಿ ಬಂದದ್ದು | – | 22.1 – 22.34 |
| 4. ಯೆಹೋಶುವನಿಂದ ಬೀಳ್ಕೊಡುಗೆಯ ಬುದ್ಧಿವಾದ | – | 23.1 – 23.16 |
| 5. ಶೆಕೆಮಿನಲ್ಲಿ ಒಡಂಬಡಿಕೆಯ ನವೀಕರಣ | – | 24.1 – 24.33 |


### ಕಾನಾನ್ ನಾಡನ್ನು ವಶಪಡಿಸಿಕೊಳ್ಳಲು ಕರೆ

**1** ಸರ್ವೇಶ್ವರಸ್ವಾಮಿ, ತಮ್ಮ ದಾಸ ಮೋಶೆ ಮರಣಹೊಂದಿದ ಮೇಲೆ ಅವನ ಶಿಷ್ಯನಾದ ನೂನನ ಮಗ
ಯೆಹೋಶುವನಿಗ ಹೀಗೆಂದು ಆಜ್ಞಾಪಿಸಿದರು: 2"ನೀನೀಗ ಎದ್ದು ಸಮಸ್ತ ಪ್ರಜೆಯೊಂದಿಗೆ ಜೋರ್ಡನ್
ನದಿಯನ್ನು ದಾಟಿ, ನಾನು ಇಸ್ರಯೇಲರಿಗೆ ಕೊಡುವ ನಾಡಿಗೆ ಹೋಗು. 3ನಾನು ಮೋಶೆಗೆ ಹೇಳಿದಂತೆ
ನೀವು ಕಾಲಿಡುವ ಸ್ಥಳವನ್ನೆಲ್ಲಾ ನಿಮಗೆ ಕೊಟ್ಟಿದ್ದೇನೆ. 4ಬೆಂಗಾಡು ಹಾಗೂ ಲೆಬನೋನ್ ಪರ್ವತದಿಂದ
ಯೂಫ್ರೆಟಿಸ್ ಮಹಾನದಿಯವರೆಗಿರುವ ಹಿತ್ತಿಯರ ನಾಡೆಲ್ಲ ನಿಮ್ಮದಾಗುವುದು. ನಿಮ್ಮ ಸೀಮೆ ಪಶ್ಚಿಮ ದಿಕ್ಕಿನ
ಮಹಾಸಾಗರದವರೆಗೆ ವಿಸ್ತರಿಸಿಕೊಳ್ಳುವುದು. 5ನಿನ್ನ ಜೀವಮಾನವಿಡೀ ಯಾರೊಬ್ಬನು ನಿನ್ನನ್ನು ಎದುರಿಸಿ
ನಿಲ್ಲನು. ನಾನು ಮೋಶೆಯ ಸಂಗಡ ಇದ್ದ ಹಾಗೆ ನಿನ್ನ ಸಂಗಡವೂ ಇರುವೆನು. ನಿನ್ನನ್ನು ಕೈಬಿಡುವುದಿಲ್ಲ,
ನಿನ್ನನ್ನು ತೊರೆದುಬಿಡುವುದಿಲ್ಲ.

### ದೇವರ ಸಹಾಯ ಬೇಕಾದರೆ ಧರ್ಮಶಾಸ್ತ್ರವನ್ನು ಆಚರಿಸಬೇಕು

6 "ಸ್ಥಿರಚಿತ್ತನಾಗಿರು, ಧೈರ್ಯದಿಂದಿರು. ಏಕೆಂದರೆ ನಾನು ಈ ಜನರ ಪೂರ್ವಜರಿಗೆ ಪ್ರಮಾಣ
ಮಾಡಿಕೊಟ್ಟ ನಾಡನ್ನು ಇವರಿಗೆ ಸ್ವಾಧೀನಪಡಿಸಬೇಕಾದವನು ನೀನೇ. 7ನನ್ನ ದಾಸನಾದ ಮೋಶೆ ನಿನಗೆ

ಬೋಧಿಸಿದ ಧರ್ಮೋಪದೇಶವನ್ನು ಮಾತ್ರ ಧೈರ್ಯಸ್ಥೈರ್ಯದಿಂದ ಪರಿಪಾಲಿಸು. ಅದನ್ನು ಬಿಟ್ಟು ಎಡಕ್ಕಾಗಲಿ, ಬಲಕ್ಕಾಗಲಿ ಹೋಗಬೇಡ. ಆಗ ನೀನು ಎಲ್ಲಿ ಹೋದರೂ ಕೃತಾರ್ಥನಾಗುವೆ. [8]ಈ ಧರ್ಮಶಾಸ್ತ್ರ ಸದಾ ನಿನ್ನ ಬಾಯಲ್ಲಿರಲಿ. ಹಗಲಿರುಳು ಅದನ್ನು ಧ್ಯಾನಿಸು. ಅದರಲ್ಲಿ ಬರೆದಿರುವುದನ್ನೆಲ್ಲಾ ಕೈಗೊಂಡು ನಡೆ. ಆಗ ನಿನ್ನ ಕಾರ್ಯವೆಲ್ಲಾ ಕೈಗೂಡುವುದು. ನೀನು ಕೃತಾರ್ಥನಾಗುವೆ. [9]ನಾನು ನಿನಗೆ ಆಜ್ಞಾಪಿಸಿದಂತೆ ಸ್ಥಿರಚಿತ್ತನಾಗಿರು, ಧೈರ್ಯದಿಂದಿರು. ಅಂಜಬೇಡ, ಕಳವಳಗೊಳ್ಳಬೇಡ. ನೀನು ಹೋಗುವ ಎಡೆಗಳಲ್ಲೆಲ್ಲ ನಿನ್ನ ದೇವರೂ ಸರ್ವೇಶ್ವರನೂ ಆದ ನಾನು ನಿನ್ನ ಸಂಗಡ ಇರುತ್ತೇನೆ," ಎಂದು ಹೇಳಿದರು.

### ಯೆಹೋಶುವ ಜನರಿಗೆ ಕೊಟ್ಟ ಆದೇಶ

10 ಆಗ ಯೆಹೋಶುವ ಜನಾಧಿಪತಿಗಳಿಗೆ, [11]"ನೀವು ಪಾಳೆಯದ ಎಲ್ಲೆಡೆಗೆ ಹೋಗಿ ಜನರಿಗೆ, 'ನೀವು ಇನ್ನು ಮೂರು ದಿನಗಳಲ್ಲಿ ಈ ಜೋರ್ಡನ್ ನದಿಯನ್ನು ದಾಟಿ ನಿಮ್ಮ ದೇವರಾದ ಸರ್ವೇಶ್ವರ ನಿಮಗೆ ಸ್ವಂತ ಸೊತ್ತಾಗಿ ಕೊಡುವ ನಾಡನ್ನು ವಶಪಡಿಸಿಕೊಳ್ಳಲು ಹೋಗಬೇಕು. ಆದುದರಿಂದ ನಿಮಗೆ ಬೇಕಾದ ಆಹಾರ ಪದಾರ್ಥಗಳನ್ನು ಸಿದ್ಧಮಾಡಿಕೊಳ್ಳಿ' ಎಂದು ತಿಳಿಸಿರಿ," ಎಂದನು.

12 ಬಳಿಕ ರೂಬೇನ್ಯರಿಗೂ ಗಾದ್ಯರಿಗೂ ಹಾಗೂ ಮನಸ್ಸೆಕುಲದ ಅರ್ಧಜನರಿಗೂ ಯೆಹೋಶುವನು ಹೇಳಿದ್ದೇನೆಂದರೆ: [13]"ಸರ್ವೇಶ್ವರಸ್ವಾಮಿಯ ದಾಸ ಮೋಶೆ ನಿಮಗೆ ಆಜ್ಞಾಪಿಸಿದ್ದನ್ನು ನೆನಪಿಗೆ ತಂದುಕೊಳ್ಳಿ: ನಿಮ್ಮ ದೇವರಾದ ಸರ್ವೇಶ್ವರ ಈ ನಾಡನ್ನು ನಿಮಗೆ ಕೊಟ್ಟು ನೆಮ್ಮದಿಯನ್ನು ಉಂಟು ಮಾಡಿದ್ದಾರೆ. [14]ನಿಮ್ಮ ಮಡದಿಮಕ್ಕಳು ಮತ್ತು ದನಕುರಿಗಳು ಮೋಶೆ ನಿಮಗೆ ಜೋರ್ಡನಿನ ಆಚೆ ಕೊಟ್ಟ ನಾಡಿನಲ್ಲೇ ಇರಲಿ. ಆದರೆ ನಿಮ್ಮ ಯೋಧರೆಲ್ಲರು ಯುದ್ಧಸನ್ನದ್ಧರಾಗಿ ನಿಮ್ಮ ಸಹೋದರರಿಗೆ ಮುಂದಾಗಿ ಹೊರಟು, ನದಿದಾಟಿ, ಅವರಿಗೆ ನೆರವಾಗಬೇಕು. [15]ನಿಮ್ಮ ದೇವರಾದ ಸರ್ವೇಶ್ವರ ನಿಮ್ಮ ಹಾಗೆಯೇ ನಿಮ್ಮ ಸಹೋದರರನ್ನೂ ನೆಮ್ಮದಿಪಡಿಸಿ, ಸರ್ವೇಶ್ವರನಾದ ದೇವರು ತಮಗೆ ನೀಡುವ ನಾಡನ್ನು ಅವರು ಸ್ವತಂತ್ರಿಸಿಕೊಳ್ಳುವವರೆಗೆ ಅವರಿಗೆ ಸಹಾಯ ಮಾಡಲಿ. ತರುವಾಯ ಸರ್ವೇಶ್ವರನ ದಾಸ ಮೋಶೆ ಜೋರ್ಡನ್ನಿಗೆ ಈಚೆ ಸೂರ್ಯೋದಯದ ದಿಕ್ಕಿನಲ್ಲಿ, ನಿಮಗೆ ಕೊಟ್ಟ ಸ್ವಂತ ನಾಡಿಗೆ ಹಿಂದಿರುಗಿ ಬಂದು ಅದನ್ನು ಅನುಭವಿಸಬಹುದು." [16]ಅವರು ಯೆಹೋಶುವನಿಗೆ, "ನೀವು ನಮಗೆ ಆಜ್ಞಾಪಿಸಿದ್ದನ್ನೆಲ್ಲಾ ಮಾಡುತ್ತೇವೆ. ಎಲ್ಲಿಗೆ ಕಳಿಸಿದರೂ ಹೋಗುತ್ತೇವೆ. [17]ಮೋಶೆಯ ಮಾತುಗಳನ್ನೆಲ್ಲ ಕೇಳಿದಂತೆ ನಿಮ್ಮ ಮಾತುಗಳನ್ನೂ ಕೇಳುತ್ತೇವೆ. ದೇವರಾದ ಸರ್ವೇಶ್ವರ ಮೋಶೆಯ ಸಂಗಡ ಇದ್ದ ಹಾಗೆ ನಿಮ್ಮ ಸಂಗಡವೂ ಇರಲಿ. [18]ನಿಮ್ಮ ಆಜ್ಞೆಗಳಲ್ಲಿ ಒಂದನ್ನಾದರೂ ಅಲಕ್ಷ್ಯಮಾಡಿ ನಿಮ್ಮ ವಿಧಿಗಳನ್ನು ಎದುರಿಸುವವನು ಮರಣ ದಂಡನೆಗೆ ಗುರಿಯಾಗತಕ್ಕವನು. ಆದುದರಿಂದ ಧೈರ್ಯ ಸ್ಥೈರ್ಯದಿಂದಿರಿ," ಎಂದರು.

### ಜೆರಿಕೋವಿನಲ್ಲಿ ಗೂಢಚಾರರು

**2** ನೂನನ ಮಗನಾದ ಯೆಹೋಶುವನು ಕಾನಾನ್ ನಾಡನ್ನೂ ಜೆರಿಕೊ ನಗರವನ್ನೂ ನೋಡುವುದಕ್ಕೋಸ್ಕರ ಶಿಟ್ಟೀಮಿನಿಂದ ಇಬ್ಬರು ಗೂಢಚಾರರನ್ನು ಕಳುಹಿಸಿದನು. ಅವರು ಹೊರಟು ಹೋಗಿ ರಾಹಾಬಳೆಂಬ ವೇಶ್ಯೆಯ ಮನೆಯಲ್ಲಿ ಇಳಿದುಕೊಂಡರು. [2]ಇಸ್ರಯೇಲಿನ ಕೆಲವು ಜನರು ನಮ್ಮ ನಾಡಿನಲ್ಲಿ ಸಂಚರಿಸಿ ನೋಡಲು ಈ ರಾತ್ರಿ ನಗರಕ್ಕೆ ಬಂದಿದ್ದಾರೆಂದು ಜೆರಿಕೋವಿನ ಅರಸನಿಗೆ ತಿಳಿಸಲಾಯಿತು.
[3]ಅವನು ರಾಹಾಬಳಿಗೆ, "ನಿನ್ನ ಮನೆಯಲ್ಲಿ ಇಳಿದುಕೊಂಡಿರುವ ಆ ವ್ಯಕ್ತಿಗಳನ್ನು ತಂದೊಪ್ಪಿಸು. ಅವರು ನಾಡನ್ನೆಲ್ಲಾ ಸಂಚರಿಸಿ ಬೇಹು ಮಾಡಲು ಬಂದವರು" ಎಂದು ಹೇಳಿ ಕಳಿಸಿದನು. [4]ವೇಶ್ಯೆ ಆ ಇಬ್ಬರನ್ನು ಅಡಗಿಸಿಟ್ಟು, ಕೇಳಲು ಬಂದವರಿಗೆ, "ಆ ವ್ಯಕ್ತಿಗಳು ನನ್ನ ಬಳಿಗೆ ಬಂದದ್ದೇನೋ ನಿಜ. ಅವರು ಎಲ್ಲಿಯವರೆಂದು ನನಗೆ ತಿಳಿಯದೆ ಹೋಗಿದೆ. [5]ಊರಬಾಗಿಲನ್ನು ಮುಚ್ಚುವ ಹೊತ್ತಿಗೆ ಕತ್ತಲಲ್ಲೇ ಹೊರಟು ಹೋದರು. ಎಲ್ಲಿಗೆ ಹೋದರೆಂಬುದೂ ನನಗೆ ಗೊತ್ತಿಲ್ಲ. ಬೇಗನೆ ಅವರ ಬೆನ್ನಟ್ಟಿರಿ. ಅವರು ನಿಮಗೆ ಸಿಕ್ಕುವರು," ಎಂದು ಹೇಳಿದಳು.

6 ಆದರೆ ಅವಳು ಆ ವ್ಯಕ್ತಿಗಳನ್ನು ಮಾಳಿಗೆಯ ಮೇಲೆ ಹತ್ತಿಸಿ, ಅಲ್ಲಿ ಸಾಲಾಗಿ ಇಟ್ಟಿದ್ದ ಸೆಣಬಿನ ಹೊರೆಗಳೊಳಗೆ ಬಚ್ಚಿಟ್ಟಿದ್ದಳು. [7]ಅರಸನ ಆಳುಗಳು ಜೋರ್ಡನ್ ದಾರಿ ಹಿಡಿದು ಹೋಗಿ ನದಿದಾಟುವ ಸ್ಥಳದವರೆಗೂ ಹುಡುಕಿದರು. ಹುಡುಕುವವರು ಹೊರಟಕೂಡಲೆ ಊರಬಾಗಿಲನ್ನು ಮುಚ್ಚಲಾಯಿತು.

**ರಾಹಾಬಳಿಗೂ ಗೂಢಚಾರರಿಗೂ ಆದ ಒಪ್ಪಂದ**

8 ಆ ಗೂಢಚಾರರು ಮಲಗಿಕೊಳ್ಳುವ ಮೊದಲೇ ಆಕೆ ಮಾಳಿಗೆ ಹತ್ತಿ, ಅವರ ಬಳಿಗೆ ಬಂದು,
[9]"ಸರ್ವೇಶ್ವರ ಈ ನಾಡನ್ನು ನಿಮಗೆ ಕೊಟ್ಟಿದ್ದಾರೆಂದು ನಾನು ಬಲ್ಲೆ; ನಿಮ್ಮ ವಿಷಯದಲ್ಲಿ ನಮಗೆ ಮಹಾಭೀತಿ
ಉಂಟಾಗಿದೆ. ನಾಡಿನ ನಿವಾಸಿಗಳೆಲ್ಲರೂ ಕಂಗೆಟ್ಟು ಹೋಗಿದ್ದಾರೆ. [10]ನೀವು ಈಜಿಪ್ಟಿನಿಂದ ಹೊರಟುಬಂದ
ಮೇಲೆ ಸರ್ವೇಶ್ವರ ನಿಮ್ಮ ಮುಂದೆ ಕೆಂಪುಸಮುದ್ರವನ್ನು ಬತ್ತಿಸಿಬಿಟ್ಟರೆಂದು ಕೇಳಿದ್ದೇವೆ. ಅಲ್ಲದೆ
ಜೋರ್ಡನ್ನಿನ ಆಚೆ ಇರುವ ಅಮೋರಿಯರ ಅರಸರಿಬ್ಬರನ್ನು ಅಂದರೆ, ಸೀಹೋನ್ ಮತ್ತು ಓಗ್
ಎಂಬುವರನ್ನು ನೀವು ನಾಶಮಾಡಿದಿರೆಂದು ಕೇಳಿದ್ದೇವೆ. [11]ಇದನ್ನೆಲ್ಲಾ ಕೇಳಿ ನಮ್ಮ ಎದೆ ಒಡೆದು ಹೋಗಿದೆ.
ನಿಮ್ಮನ್ನು ಎದುರಿಸುವ ಧೈರ್ಯ ಯಾರಿಗೂ ಇಲ್ಲ. ನಿಮ್ಮ ದೇವರಾದ ಸರ್ವೇಶ್ವರರೊಬ್ಬರೇ
ಪರಲೋಕದಲ್ಲೂ ಭೂಲೋಕದಲ್ಲೂ ದೇವರು. [12]ಆದುದರಿಂದ ಈಗ ನೀವು ನನಗೆ ನಂಬತಕ್ಕ ಒಂದು
ಗುರುತನ್ನು ಕೊಡಬೇಕು. ನಾನು ನಿಮಗೆ ದಯೆ ತೋರಿದಂತೆ ನೀವೂ ನನ್ನ ತಂದೆಯ ಮನೆಯವರಿಗೆ
ದಯೆ ತೋರಬೇಕು. [13]ನನ್ನ ತಂದೆ ತಾಯಿಗಳನ್ನೂ ಸಹೋದರ ಸಹೋದರಿಯರನ್ನೂ
ಅವರಿಗಿರುವುದೆಲ್ಲವನ್ನೂ ನಾಶಮಾಡದೆ ಉಳಿಸುವುದಾಗಿ ಸರ್ವೇಶ್ವರನ ಹೆಸರಿನಲ್ಲಿ ಪ್ರಮಾಣ
ಮಾಡಬೇಕೆಂದು ಬೇಡಿಕೊಳ್ಳುತ್ತೇನೆ," ಎಂದಳು.

14 ಆಗ ಆ ಗೂಢಚಾರರು, "ನೀವು ನಮ್ಮ ಸಂಗತಿಯನ್ನು ಹೊರಪಡಿಸದಿದ್ದರೆ, ನಾವು ನಿಮ್ಮ ಪ್ರಾಣಕ್ಕೆ ಹೊಣೆಯಾಗಿರುತ್ತೇವೆ. ಸರ್ವೇಶ್ವರಸ್ವಾಮಿ ಈ ನಾಡನ್ನು ನಮಗೆ ಅನುಗ್ರಹಿಸಿದ ಮೇಲೆ ನಾವು ಕೊಟ್ಟ ಮಾತಿನಂತೆ ದಯೆಯಿಂದ ನಡೆದುಕೊಳ್ಳುತ್ತೇವೆ," ಎಂದರು.

15 ಅವಳ ಮನೆ ಊರಗೋಡೆಯ ಮೇಲಿತ್ತು. ಆದ್ದರಿಂದ ಅವರನ್ನು ಹಗ್ಗದ ಮೂಲಕ
ಕಿಟಕಿಯಿಂದ ಕೆಳಕ್ಕೆ ಇಳಿಸಿದಳು. [16]ಅಲ್ಲದೆ ಅವರಿಗೆ, "ನಿಮ್ಮನ್ನು ಹಿಂದಟ್ಟುವವರಿಗೆ ನೀವು ಸಿಕ್ಕದಂತೆ ಆ
ಬೆಟ್ಟಕ್ಕೆ ಓಡಿಹೋಗಿ, ಮೂರುದಿನ ಅವಿತುಕೊಂಡಿರಿ. ಅವರು ಹಿಂದಿರುಗಿದ ಮೇಲೆ ನಿಮ್ಮ ದಾರಿ ಹಿಡಿದು
ಹೋಗಿ," ಎಂದಳು.

17 ಆಗ ಅವರು ಆಕೆಗೆ, "ನೀನು ನಮ್ಮಿಂದ ಮಾಡಿಸಿದ ಪ್ರಮಾಣದಂತೆ ನಡೆದುಕೊಳ್ಳುತ್ತೇವೆ.
[18]ನಾವು ಈ ನಾಡನ್ನು ಪ್ರವೇಶಿಸುವಾಗ ನೀನು ನಮ್ಮನ್ನು ಇಳಿಸಿದ ಕಿಟಕಿಗೆ ಈ ಕೆಂಪುದಾರವನ್ನು ಕಟ್ಟಬೇಕು
ಮತ್ತು ನಿನ್ನ ತಂದೆತಾಯಿಗಳನ್ನು, ಅಣ್ಣತಮ್ಮಂದಿರನ್ನು, ಎಲ್ಲಾ ಬಂಧುಬಳಗದವರನ್ನು ನಿನ್ನ ಮನೆಯಲ್ಲೇ
ಸೇರಿಸಿಕೊಂಡಿರಬೇಕು. [19]ಅವರಲ್ಲಿ ಯಾರಾದರೂ ಮನೆಬಿಟ್ಟು ಬೀದಿಗೆ ಬಂದರೆ ಅವರ ಮರಣಕ್ಕೆ ಅವರೇ
ಕಾರಣರು ಆಗುವರು. ಅದಕ್ಕೆ ನಾವು ಹೊಣೆಗಾರರಲ್ಲ. ಆದರೆ ನಿನ್ನೊಡನೆ ಮನೆಯಲ್ಲಿದ್ದವರ ಮೇಲೆ
ಯಾರಾದರೂ ಕೈಮಾಡಿದ್ದಾದರೆ ಆ ರಕ್ತಾಪರಾಧ ನಮ್ಮ ತಲೆಯ ಮೇಲಿರುವುದು. [20]ನೀನೇನಾದರೂ ಈ
ನಮ್ಮ ವಿಷಯವನ್ನು ಬಹಿರಂಗಪಡಿಸಿದ್ದೇ ಆದರೆ ನಮ್ಮಿಂದ ಮಾಡಿಸಿದ ಪ್ರಮಾಣದಿಂದ ನಾವು
ಬಿಡುಗಡೆಯಾಗಿರುತ್ತೇವೆ," ಎಂದು ಹೇಳಿದರು. [21]ಅದಕ್ಕವಳು, "ನಿಮ್ಮ ಮಾತಿನಂತೆಯೇ ಆಗಲಿ," ಎಂದು
ಹೇಳಿ ಅವರನ್ನು ಕಳುಹಿಸಿದಳು. ಅವರು ಹೊರಟುಹೋದ ಮೇಲೆ ಆ ಕೆಂಪುದಾರವನ್ನು ಕಿಟಕಿಗೆ ಕಟ್ಟಿದಳು.

22 ಗೂಢಚಾರರು ಆ ಬೆಟ್ಟವನ್ನು ಸೇರಿ ಬೆನ್ನಟ್ಟುವವರು ಹಿಂದಿರುಗುವತಕ ಮೂರು ದಿನ ಅಲ್ಲೇ
ತಂಗಿದ್ದರು. ಬೆನ್ನಟ್ಟುವವರು ಅವರನ್ನು ದಾರಿಯುದ್ದಕ್ಕೂ ಹುಡುಕಿ ಕಾಣದೆ ಹಿಂದಿರುಗಿದರು. [23]ಆಗ
ಅವರಿಬ್ಬರೂ ಬೆಟ್ಟದಿಂದಿಳಿದು, ನದಿದಾಟಿ, ನೂನನ ಮಗ ಯೆಹೋಶುವನ ಬಳಿಗೆ ಬಂದು ತಮಗೆ
ಸಂಭವಿಸಿದ್ದನ್ನೆಲ್ಲಾ ತಿಳಿಸಿದರು. [24]ಇದಲ್ಲದೆ, ಅವರು ಯೆಹೋಶುವನಿಗೆ, "ಸರ್ವೇಶ್ವರಸ್ವಾಮಿ ನಿಜವಾಗಿ ಈ
ನಾಡನ್ನೆಲ್ಲಾ ನಮಗೆ ಕೊಟ್ಟಿದ್ದಾರೆ. ಅದರ ನಿವಾಸಿಗಳೆಲ್ಲ ನಮ್ಮನ್ನು ಕಂಡು ನಡುಗುತ್ತ ಇದ್ದಾರೆ," ಎಂದು
ತಿಳಿಸಿದರು.

## ಜೋರ್ಡನ್ ನದಿಯನ್ನು ದಾಟಿದ್ದು

**3** ಯೆಹೋಶುವನು ಬೆಳಗಿನ ಜಾವದಲ್ಲೇ ಎದ್ದನು. ಅವನೊಂದಿಗೆ ಇಸ್ರಯೇಲರು ಎಲ್ಲರೂ ಶಿಟ್ಟೀಮನ್ನು
ಬಿಟ್ಟು ಜೋರ್ಡನ್ನಿನ ಹತ್ತಿರಕ್ಕೆ ಬಂದು ಅದನ್ನು ದಾಟುವ ಮೊದಲು ಅಲ್ಲೇ ಇಳಿದುಕೊಂಡರು. [2]ಮೂರು
ದಿನಗಳಾದ ಮೇಲೆ ಜನನಾಯಕರು ಪಾಳೆಯದ ಎಲ್ಲಾ ಕಡೆಗೂ ಹೋಗಿ ಜನರಿಗೆ, [3]“ನಿಮ್ಮ ದೇವರಾದ
ಸರ್ವೇಶ್ವರನ ಒಡಂಬಡಿಕೆಯ ಮಂಜೂಷವನ್ನು ಯಾಜಕರಾದ ಲೇವಿಯರು ಹೊತ್ತಿರುವುದನ್ನು ನೀವು
ಕಂಡಕೂಡಲೆ ನೀವು ಕೂಡ ನಿಮ್ಮ ನಿಮ್ಮ ಸ್ಥಳವನ್ನು ಬಿಟ್ಟು ಅದರ ಹಿಂದೆ ಹೋಗಿ. [4]ಆದರೆ ಅದರ ಹತ್ತಿರ
ನೀವು ಹೋಗಬಾರದು. ನಿಮಗೂ ಮಂಜೂಷಕ್ಕೂ ಸುಮಾರು ಒಂದು ಕಿಲೋಮೀಟರ್ ಅಂತರವಿರಬೇಕು.
ಹೀಗೆ ನೀವು ಹೋಗಬೇಕಾದ ಮಾರ್ಗ ನಿಮಗೆ ಗೊತ್ತಾಗುವುದು. ಏಕೆಂದರೆ ನೀವು ಆ ಮಾರ್ಗವಾಗಿ
ಇಲ್ಲಿಯವರೆಗೆ ಪ್ರಯಾಣ ಮಾಡಿದ್ದಿಲ್ಲ,” ಎಂದು ತಿಳಿಸಿದರು.

5 ಇದಲ್ಲದೆ, ಯೆಹೋಶುವನು ಜನರಿಗೆ, “ಸರ್ವೇಶ್ವರ ನಾಳೆ ನಿಮ್ಮ ಮಧ್ಯೆ ಅದ್ಭುತಗಳನ್ನು
ಮಾಡಲಿದ್ದಾರೆ. ಆದುದರಿಂದ ನಿಮ್ಮನ್ನೇ ಶುದ್ಧೀಕರಿಸಿಕೊಳ್ಳಿ,” ಎಂದು ಹೇಳಿದನು. [6]ಯಾಜಕರಿಗೆ,
“ಒಡಂಬಡಿಕೆಯ ಮಂಜೂಷವನ್ನು ಹೊತ್ತುಕೊಂಡು ಜನರ ಮುಂದಾಗಿ ನಡೆದು ನದಿದಾಟಿರಿ,” ಎಂದು
ಆಜ್ಞಾಪಿಸಿದನು. ಅವರು ಅಂತೆಯೇ ಮಂಜೂಷವನ್ನು ಹೊತ್ತುಕೊಂಡು ಹೋದರು.

7 ಆಗ ಸರ್ವೇಶ್ವರ, ಯೆಹೋಶುವನಿಗೆ: “ನಾನು ಇಂದಿನಿಂದ ನಿನ್ನನ್ನು ಇಸ್ರಯೇಲರ ಮುಂದೆ
ಮಹಾತ್ಮನನ್ನಾಗಿಸುವೆನು. ನಾನು ಮೋಶೆಯ ಸಂಗಡ ಇದ್ದಹಾಗೆ ನಿನ್ನ ಸಂಗಡವೂ ಇರುವೆನೆಂದು ಅವರಿಗೆ
ಗೊತ್ತಾಗುವುದು. [8]ಒಡಂಬಡಿಕೆಯ ಮಂಜೂಷವನ್ನು ಹೊತ್ತ ಯಾಜಕರು ಜೋರ್ಡನ್ ನದಿಯ ಅಂಚಿಗೆ
ಬಂದ ಕೂಡಲೆ ಅಲ್ಲೇ ನಿಲ್ಲಬೇಕೆಂದು ಆಜ್ಞಾಪಿಸು,” ಎಂದರು.

9 ಆಗ ಯೆಹೋಶುವನು ಇಸ್ರಯೇಲರಿಗೆ, “ಇಲ್ಲಿಗೆ ಬಂದು ನಿಮ್ಮ ದೇವರಾದ ಸರ್ವೇಶ್ವರ
ಸ್ವಾಮಿಯ ಮಾತುಗಳನ್ನು ಕೇಳಿ: [10]ಚೈತನ್ಯ ಸ್ವರೂಪರಾದ ದೇವರು ನಿಮ್ಮ ಮಧ್ಯೆ ಇದ್ದಾರೆಂದು ನಿಮಗೆ
ಈಗ ತಿಳಿಯುವುದು. ಅದೇ ಕಾನಾನ್ಯರನ್ನು, ಹಿತ್ತಿಯರನ್ನು, ಹಿವ್ವಿಯರನ್ನು, ಪೆರಿಜೀಯರನ್ನು,
ಗಿರ್ಗಾಷಿಯರನ್ನು, ಅಮೋರಿಯರನ್ನು ಹಾಗೂ ಯೆಬೂಸಿಯರನ್ನು ನಿಮ್ಮ ಮುಂದಿನಿಂದ
ಓಡಿಸಿಬಿಡುವರೆಂದು ನಿಮಗೆ ಗೊತ್ತಾಗುವುದು. [11]ಹೇಗೆಂದರೆ – ಸರ್ವಲೋಕದ ಒಡೆಯನ ಒಡಂಬಡಿಕೆಯ
ಮಂಜೂಷವು ನಿಮ್ಮ ಮುಂದಾಗಿ ಹೋಗಿ ಜೋರ್ಡನಿನಲ್ಲಿ ಇಳಿಯುವುದು. [12]ಆಗ ನೀವು ಇಸ್ರಯೇಲ್
ಕುಲಗಳಿಂದ ಕುಲಕ್ಕೆ ಒಬ್ಬನಂತೆ ಹನ್ನೆರಡು ಮಂದಿಯನ್ನು ಆರಿಸಿಕೊಳ್ಳಬೇಕು. [13]ಸರ್ವಲೋಕದ
ಒಡೆಯನಾದ ಸರ್ವೇಶ್ವರನ ಒಡಂಬಡಿಕೆಯ ಮಂಜೂಷವನ್ನು ಹೊರುವ ಯಾಜಕರು ತಮ್ಮ ಕಾಲುಗಳನ್ನು
ಜೋರ್ಡನ್ ನದಿಯ ನೀರಿನಲ್ಲಿ ಇಡುತ್ತಲೇ ಮೇಲಿಂದ ಹರಿದು ಬರುವ ನೀರು ಮುಂದೆ ಸಾಗದೆ ಅಲ್ಲೇ
ರಾಶಿಯಾಗಿ ನಿಂತುಕೊಳ್ಳುವುದು,” ಎಂದು ತಿಳಿಸಿದನು.

14 ಜನರು ಜೋರ್ಡನ್ ನದಿಯನ್ನು ದಾಟಲು ತಮ್ಮ ತಮ್ಮ ಡೇರೆಗಳಿಂದ ಹೊರಟರು.
ಒಡಂಬಡಿಕೆಯ ಮಂಜೂಷವನ್ನು ಹೊತ್ತ ಯಾಜಕರು ಅವರ ಮುಂದೆ ಇದ್ದರು. [15]ಮಂಜೂಷವನ್ನು ಹೊತ್ತ
ಯಾಜಕರು ಜೋರ್ಡನಿಗೆ ಬಂದರು. ಅದು ಸುಗ್ಗಿಯ ಕಾಲ. ನದಿ ದಡಮೀರಿ ಹರಿಯುತ್ತಿತ್ತು. ಯಾಜಕರು
ಬಂದು ನೀರಿನಲ್ಲಿ ತಮ್ಮ ಕಾಲುಗಳನ್ನು ಇಡುತ್ತಲೇ ಹರಿಯುತ್ತಿದ್ದ ಜೋರ್ಡನ್ ನದಿಯ ನೀರು
ನಿಂತುಹೋಯಿತು. [16]ಮೇಲಿಂದ ಬರುತ್ತಿದ್ದ ನೀರು ಬಹುದೂರದಲ್ಲಿದ್ದ ಚಾರೆತಾನಿನ ಬಳಿಯಿರುವ ಆದಾಮ್
ಊರಿನ ತನಕ ರಾಶಿಯಾಗಿ ನಿಂತುಕೊಂಡಿತು. ಕೆಳಗಿನ ನೀರು ಅರಾಬಾ ತಗ್ಗಿನಲ್ಲಿರುವ ಲವಣಸಮುದ್ರಕ್ಕೆ
ಹರಿದು ಹೋಯಿತು. ಜನರು ಜೆರಿಕೋವಿನ ಎದುರಿನಲ್ಲಿ ನದಿ ದಾಟಿದರು. [17]ಸರ್ವೇಶ್ವರನ ಒಡಂಬಡಿಕೆಯ
ಮಂಜೂಷವನ್ನು ಹೊತ್ತ ಯಾಜಕರು ಜೋರ್ಡನಿನ ನಡುವೆ ನೆಲದ ಮೇಲೆ ನಿಂತಿದ್ದರು. ಅಷ್ಟರಲ್ಲಿ
ಇಸ್ರಯೇಲರೆಲ್ಲರೂ ಒಣನೆಲದ ಮೇಲೆ ನಡೆದು ಹೋದರು. ಹೀಗೆ ಜನರೆಲ್ಲರೂ ಜೋರ್ಡನಿನ ಆಚೆಗೆ
ಸೇರಿದರು.

## ಹನ್ನೆರಡು ಸ್ಮಾರಕ ಸ್ತಂಭಗಳು

**4** ಜನರೆಲ್ಲರು ಜೋರ್ಡನಿನ ಆಚೆ ಕಡೆಗೆ ಸೇರಿದ ಮೇಲೆ ಸರ್ವೇಶ್ವರಸ್ವಾಮಿ ಯೆಹೋಶುವನಿಗೆ
ಹೀಗೆಂದರು: 2“ಜನರಲ್ಲಿ ಕುಲಕ್ಕೆ ಒಬ್ಬನಂತೆ ಹನ್ನೆರಡು ಮಂದಿಯನ್ನು ಆರಿಸಿಕೊ. 3ಅವರಿಗೆ, ‘ನೀವು
ಜೋರ್ಡನಿನ ಮಧ್ಯದಲ್ಲಿ ಯಾಜಕರು ನಿಂತ ಸ್ಥಳದಿಂದ ಹನ್ನೆರಡು ಕಲ್ಲುಗಳನ್ನು ಎತ್ತಿ, ಅವುಗಳನ್ನು ನಿಮ್ಮ
ಸಂಗಡ ಈಚೆ ದಡಕ್ಕೆ ತಂದು ನೀವು ಈ ರಾತ್ರಿ ತಂಗುವ ಸ್ಥಳದಲ್ಲಿ ನಿಲ್ಲಿಸಿ’ ಎಂದು ಆಜ್ಞಾಪಿಸು,” ಎಂದರು.

4 ಆಗ ಯೆಹೋಶುವನು ತಾನು ಇಸ್ರಯೇಲರಿಂದ ಕುಲಕ್ಕೆ ಒಬ್ಬನಂತೆ ಆರಿಸಿಕೊಂಡ ಹನ್ನೆರಡು
ಮಂದಿಯನ್ನು ಕರೆದು ಅವರಿಗೆ, 5“ನೀವು ನಮ್ಮ ದೇವರಾದ ಸರ್ವೇಶ್ವರನ ಮಂಜೂಷದ ಮುಂದಾಗಿ
ಜೋರ್ಡನಿನ ಮಧ್ಯಕ್ಕೆ ಹೋಗಿ ಇಸ್ರಯೇಲ್ ಕುಲಗಳ ಸಂಖ್ಯೆಗೆ ಸರಿಯಾಗಿ ಪ್ರತಿಯೊಬ್ಬನು ಒಂದೊಂದು
ಕಲ್ಲನ್ನು ಹೆಗಲ ಮೇಲೆ ಹೊತ್ತುಕೊಂಡು ಬನ್ನಿ. 6ಅವು ನಿಮ್ಮ ಮಧ್ಯೆ ಸ್ಮಾರಕ ಆಗಿರುವುವು. ಮುಂದಿನ
ಕಾಲದಲ್ಲಿ ನಿಮ್ಮ ಮಕ್ಕಳು, ‘ಈ ಕಲ್ಲುಗಳು ಏನನ್ನು ಸೂಚಿಸುತ್ತವೆ?’ ಎಂದು ಕೇಳುವಾಗ ನೀವು ಅವರಿಗೆ,
7‘ಸರ್ವೇಶ್ವರನ ಒಡಂಬಡಿಕೆಯ ಮಂಜೂಷವು ಜೋರ್ಡನನ್ನು ದಾಟುವಾಗ ಅದರ ಮುಂದೆ ಜೋರ್ಡನಿನ
ನೀರು ನಿಂತುಹೋಯಿತು,’ ಎಂದು ಹೇಳಿರಿ. ಅದರ ನೀರು ನಿಂತುಹೋಯಿತೆಂಬುದಕ್ಕೆ ಈ ಕಲ್ಲುಗಳು
ಇಸ್ರಯೇಲರಿಗೆ ಚಿರಸ್ಮಾರಕಗಳಾಗಿರುವುವು,” ಎಂದು ಹೇಳಿದನು.

8 ಇಸ್ರಯೇಲರು ಯೆಹೋಶುವನು ಆಜ್ಞಾಪಿಸಿದಂತೆಯೇ ಮಾಡಿದರು. ಸರ್ವೇಶ್ವರಸ್ವಾಮಿ
ಯೆಹೋಶುವನಿಗೆ ಹೇಳಿದ ಪ್ರಕಾರ ಅವರು ಇಸ್ರಯೇಲರ ಕುಲಸಂಖ್ಯೆಗೆ ಅನುಸಾರವಾಗಿ ಜೋರ್ಡನಿನ
ಮಧ್ಯದಿಂದ ಹನ್ನೆರಡು ಕಲ್ಲುಗಳನ್ನು ಎತ್ತಿ ತಮ್ಮ ಬಿಡಾರದ ಸ್ಥಳಕ್ಕೆ ತಂದು ಅಲ್ಲಿ ಅವುಗಳನ್ನು ನಿಲ್ಲಿಸಿದರು.
9ಇದಲ್ಲದೆ ಯೆಹೋಶುವನು ಹನ್ನೆರಡು ಕಲ್ಲುಗಳನ್ನು ತೆಗೆದುಕೊಂಡು, ಜೋರ್ಡನಿನ ಮಧ್ಯೆ ಒಡಂಬಡಿಕೆಯ
ಮಂಜೂಷವನ್ನು ಹೊತ್ತ ಯಾಜಕರು ನಿಂತಿದ್ದ ಸ್ಥಳದಲ್ಲಿ ನಿಲ್ಲಿಸಿದನು. ಅವು ಇಂದಿನವರೆಗೂ ಅಲ್ಲೇ ಇವೆ.
10ಮೋಶೆ ಆಜ್ಞಾಪಿಸಿದಂತೆ ಯೆಹೋಶುವನು ಜನರಿಗೆ ತಿಳಿಸಿದ ಸರ್ವೇಶ್ವರನ ಅಪ್ಪಣೆಗಳನ್ನೆಲ್ಲ ಅವರು
ನೆರವೇರಿಸುವ ತನಕ ಮಂಜೂಷವನ್ನು ಹೊತ್ತ ಯಾಜಕರು ಜೋರ್ಡನಿನ ಮಧ್ಯದಲ್ಲೇ ನಿಂತರು.

11 ಜನರು ಬೇಗನೆ ನದಿ ದಾಟಿದರು. ಅವರೆಲ್ಲರು ಆಚೆಗೆ ಸೇರಿದ ಮೇಲೆ ಯಾಜಕರು ಸರ್ವೇಶ್ವರನ
ಮಂಜೂಷದೊಡನೆ ನದಿ ದಾಟಿ ಜನರ ಮುಂದುಗಡೆಯೇ ಹೋದರು. 12ರೂಬೇನ್ಯರು, ಗಾದ್ಯರು ಹಾಗೂ
ಮನಸ್ಸೆ ಕುಲದ ಅರ್ಧ ಜನರು ಮೋಶೆ ತಮಗೆ ಆಜ್ಞಾಪಿಸಿದಂತೆ ಯುದ್ಧ ಸನ್ನದ್ಧರಾಗಿ ಮಿಕ್ಕ
ಇಸ್ರಯೇಲರಿಗಿಂತ ಮುಂದಾಗಿ ಹೊರಟು ನದಿ ದಾಟಿದರು. 13ಸುಮಾರು ನಾಲ್ವತ್ತು ಸಾವಿರ ಯೋಧರಿಂದ
ಕೂಡಿದ ಅವರು ಸರ್ವೇಶ್ವರನ ಸಮ್ಮುಖದಲ್ಲಿ ನದಿ ದಾಟಿ ಯುದ್ಧ ಮಾಡುವುದಕ್ಕಾಗಿ ಜೆರಿಕೋವಿನ
ಬಯಲಿಗೆ ಬಂದರು. 14ಆ ದಿನ ಸರ್ವೇಶ್ವರ ಯೆಹೋಶುವನನ್ನು ಇಸ್ರಯೇಲರೆಲ್ಲರ ದೃಷ್ಟಿಯಲ್ಲಿ ಇಷ್ಟು
ಘನಪಡಿಸಿದ್ದರಿಂದ ಅವರು ಮೋಶೆಯಲ್ಲಿ ಹೇಗೋ ಹಾಗೆಯೇ ಇವನಲ್ಲಿಯೂ, ಇವನು ಜೀವದಿಂದಿದ್ದ
ಕಾಲವೆಲ್ಲ ಗೌರವವುಳ್ಳವರು ಆಗಿದ್ದರು.

15 ಸರ್ವೇಶ್ವರ ಯೆಹೋಶುವನಿಗೆ: 16“ಆಜ್ಞಾಶಾಸನಗಳ ಮಂಜೂಷವನ್ನು ಹೊತ್ತ ಯಾಜಕರಿಗೆ
ಜೋರ್ಡನಿನಿಂದ ಮೇಲೆ ಬರಬೇಕೆಂದು ಆಜ್ಞಾಪಿಸು,” ಎಂದರು. 17ಆತ ಅವರಿಗೆ ಅಂತೆಯೇ ವಿಧಿಸಿದನು.
18ಸರ್ವೇಶ್ವರನ ಒಡಂಬಡಿಕೆಯ ಮಂಜೂಷವನ್ನು ಹೊತ್ತ ಯಾಜಕರು ಜೋರ್ಡನಿನಿಂದ ಮೇಲೆ ಬಂದು
ಒಣನೆಲದಲ್ಲಿ ಕಾಲಿಟ್ಟ ಕೂಡಲೇ ನೀರು ಮುಂಚಿನಂತೆ ಬಂದು ಜೋರ್ಡನ್ ನದಿಯ ದಡಮೀರಿ
ಹರಿಯಿತು.

## ಗಿಲ್ಗಾಲಿಗೆ ಆಗಮನ

19 ಜನರು ಮೊದಲನೇ ತಿಂಗಳಿನ ಹತ್ತನೆಯ ದಿನ ಜೋರ್ಡನನ್ನು ದಾಟಿ ಜೆರಿಕೋವಿನ ಪೂರ್ವ
ಗಡಿಯಲ್ಲಿರುವ ಗಿಲ್ಗಾಲೆಂಬಲ್ಲಿಗೆ ಬಂದು ತಂಗಿದರು. 20ಯೆಹೋಶುವನು ಜೋರ್ಡನಿನಿಂದ
ತೆಗೆದುಕೊಂಡು ಬಂದ ಹನ್ನೆರಡು ಕಲ್ಲುಗಳನ್ನು ಗಿಲ್ಗಾಲಿನಲ್ಲೇ ನಿಲ್ಲಿಸಿದನು. 21ಆತ ಇಸ್ರಯೇಲರಿಗೆ,
“ಮುಂದಿನ ಕಾಲದಲ್ಲಿ ನಿಮ್ಮ ಮಕ್ಕಳು ಈ ಕಲ್ಲುಗಳನ್ನು ಏಕೆ ನೆಟ್ಟಿದ್ದಾರೆಂದು ಕೇಳಿದರೆ ನೀವು ಅವರಿಗೆ,

[22]‘ಇಸ್ರಯೇಲರು ಒಣನೆಲವಾಗಿದ್ದ ಈ ಜೋರ್ಡನನ್ನು ದಾಟಿ ಬಂದುದಕ್ಕಾಗಿ’ ಎಂದು ಹೇಳಿ. [23]ನಿಮ್ಮ ದೇವರಾದ ಸರ್ವೇಶ್ವರ ನಮ್ಮ ಕಣ್ಮುಂದೆ ಕೆಂಪುಸಮುದ್ರವನ್ನು ಬತ್ತಿಸಿ, ನಮ್ಮನ್ನು ದಾಟಿಸಿದಂತೆ ಈಗ ನಿಮ್ಮ ಕಣ್ಮುಂದೆಯೇ ಈ ಜೋರ್ಡನನ್ನು ಬತ್ತಿಸಿ, ನಿಮ್ಮನ್ನು ದಾಟಿಸಿದ್ದಾರೆ. [24]ಇದರಿಂದ ಭೂನಿವಾಸಿಗಳೆಲ್ಲರು ಸರ್ವೇಶ್ವರನ ಹಸ್ತವು ಪರಾಕ್ರಮವುಳ್ಳದ್ದೆಂದು ತಿಳಿದುಕೊಳ್ಳುವರು. ನಿಮ್ಮ ದೇವರಾದ ಸರ್ವೇಶ್ವರನಲ್ಲಿ ಯಾವಾಗಲೂ ಭಯಭಕ್ತಿಯುಳ್ಳವರಾಗಿರುವರು.

### ಇಸ್ರಯೇಲರ ಬಗ್ಗೆ ಇತರರಿಗೆ ಭಯಭೀತಿ

**5** ಜೋರ್ಡನಿನ ಪಶ್ಚಿಮದಲ್ಲಿದ್ದ ಅಮೋರಿಯರ ಎಲ್ಲ ಅರಸರು ಮತ್ತು ಸಮುದ್ರದ ಬಳಿಯಿದ್ದ ಸರ್ವ ಕಾನಾನ್‌ರಾಜರು ಸರ್ವೇಶ್ವರಸ್ವಾಮಿ ಇಸ್ರಯೇಲರ ಕಣ್ಮುಂದೆಯೇ ಜೋರ್ಡನನ್ನು ಬತ್ತಿಸಿ ಆ ನದಿ ದಾಟಿಸಿದರೆಂದು ಕೇಳಿದರು. ಆಗ ಅವರ ಎದೆ ಒಡೆದುಹೋಯಿತು. ಇಸ್ರಯೇಲರ ಮುಂದೆ ಅವರಿಗೆ ಧೈರ್ಯವಿಲ್ಲದೆ ಹೋಯಿತು.

### ಗಿಲ್ಗಾಲಿನಲ್ಲಿ ಇಸ್ರಯೇಲರಿಗೆ ಮಾಡಲಾದ ಸುನ್ನತಿ

2 ಆಗ ಸರ್ವೇಶ್ವರ ಯೆಹೋಶುವನಿಗೆ, “ನೀನು ಕಲ್ಲಿನ ಚೂರಿಗಳನ್ನು ಮಾಡಿಕೊಂಡು ಇಸ್ರಯೇಲರಿಗೆ ಸುನ್ನತಿ ಮಾಡು,” ಎಂದು ಹೇಳಿದರು. [3]ಅಂತೆಯೇ ಅವನು ಕಲ್ಲಿನ ಚೂರಿಗಳನ್ನು ಮಾಡಿಕೊಂಡು ಸುನ್ನತಿಗುಡ್ಡದಲ್ಲಿ ಇಸ್ರಯೇಲರಿಗೆ ಸುನ್ನತಿ ಮಾಡಿದನು. [4]ಹೀಗೆ ಯೆಹೋಶುವನು ಸುನ್ನತಿ ಮಾಡುವುದಕ್ಕೆ ಕಾರಣ ಏನೆಂದರೆ – ಈಜಿಪ್ಟಿನಿಂದ ಹೊರಟುಬಂದ ಗಂಡಸರಲ್ಲಿ ಯುದ್ಧವೀರರೆಲ್ಲರು ಆ ದೇಶವನ್ನು ಬಿಟ್ಟು, ಅನಂತರ ಅರಣ್ಯದಲ್ಲಿ ಸತ್ತುಹೋದರು. [5]ಅಲ್ಲಿಂದ ಬಂದ ಗಂಡಸರೆಲ್ಲರಿಗೆ ಸುನ್ನತಿ ಆಗಿತ್ತು. ಈಜಿಪ್ಟನ್ನು ಬಿಟ್ಟ ಅನಂತರ ಅರಣ್ಯ ಪ್ರಯಾಣದಲ್ಲಿ ಹುಟ್ಟಿದ ಗಂಡುಮಕ್ಕಳಿಗೆ ಸುನ್ನತಿಯಾಗಿರಲಿಲ್ಲ. [6]ಈಜಿಪ್ಟಿನಿಂದ ಬಂದ ಇಸ್ರಯೇಲರು ಸರ್ವೇಶ್ವರನ ಮಾತನ್ನು ಕೇಳದೆ ಹೋದುದರಿಂದ ಅವರು, ತಮ್ಮ ಯೋಧರೆಲ್ಲರು ಸಂಹಾರವಾಗುವ ತನಕ ನಾಲ್ವತ್ತು ವರ್ಷ ಅರಣ್ಯದಲ್ಲೇ ಅಲೆಯುತ್ತಿರಬೇಕಾಯಿತು. ಸರ್ವೇಶ್ವರ, ತಾವು ಅವರ ಪೂರ್ವಜರಿಗೆ ವಾಗ್ದಾನಮಾಡಿದ್ದ ಹಾಲೂ ಜೇನೂ ಹರಿಯುವ ದೇಶದಲ್ಲಿ ಅವರನ್ನು ಸೇರಿಸುವುದಿಲ್ಲವೆಂದು ಆಣೆಯಿಟ್ಟಿದ್ದರು. [7]ಅವರಿಗೆ ಬದಲಾಗಿ ಹುಟ್ಟಿದ ಅವರ ಗಂಡುಮಕ್ಕಳಿಗೆ ಯೆಹೋಶುವ ಸುನ್ನತಿ ಮಾಡಿದನು. ದಾರಿಯಲ್ಲಿ ಯಾರೂ ಅವರಿಗೆ ಸುನ್ನತಿ ಮಾಡಿರಲಿಲ್ಲ. ಆದ್ದರಿಂದ ಅವರು ಸುನ್ನತಿಯಿಲ್ಲದವರಾಗಿದ್ದರು.

8 ಸುನ್ನತಿಯಾದ ಮೇಲೆ ವಾಸಿಯಾಗುವವರೆಗೆ ಜನರೆಲ್ಲರು ಪಾಳೆಯದ ತಮ್ಮ ತಮ್ಮ ಸ್ಥಳಗಳಲ್ಲೇ ಇದ್ದರು. [9]ಸರ್ವೇಶ್ವರಸ್ವಾಮಿ ಯೆಹೋಶುವನಿಗೆ, “ನಾನು ಈಜಿಪ್ಟಿನ ಕಳಂಕವನ್ನು ಈ ದಿನ ನಿಮ್ಮಿಂದ ನಿವಾರಿಸಿಬಿಟ್ಟಿದ್ದೇನೆ,” ಎಂದು ಹೇಳಿದ್ದರಿಂದ ಆ ಸ್ಥಳಕ್ಕೆ ಇಂದಿನವರೆಗೂ ಗಿಲ್ಗಾಲ್ ಎಂಬ ಹೆಸರಿಡಲಾಗಿದೆ.

10 ಇಸ್ರಯೇಲರು ಗಿಲ್ಗಾಲಿನಲ್ಲಿ ತಂಗಿದ್ದಾಗ ಮೊದಲನೆಯ ತಿಂಗಳಿನ ಹದಿನಾಲ್ಕನೆಯ ದಿನದ ಸಂಜೆ ಜೆರಿಕೋವಿನ ಬಯಲಿನಲ್ಲಿ ಪಾಸ್ಕಹಬ್ಬವನ್ನಾಚರಿಸಿದರು. [11]ಮಾರನೆಯ ದಿನದಿಂದ ಕಾನಾನಿನ ಧಾನ್ಯವನ್ನು ಊಟಕ್ಕೆ ಬಳಸಲು ತೊಡಗಿದರು – ಹುಳಿಯಿಲ್ಲದ ರೊಟ್ಟಿಗಳನ್ನು ಮತ್ತು ಸುಟ್ಟ ತೆನೆಗಳನ್ನು ತಿನ್ನತೊಡಗಿದರು. [12]ಆ ನಾಡಿನ ಹುಟ್ಟುವಳಿಯನ್ನು ಊಟಮಾಡಿದ ಮರುದಿನವೇ ಮನ್ನವು ನಿಂತುಹೋಯಿತು. ಅದು ಅವರಿಗೆ ಮತ್ತೆ ಸಿಕ್ಕಲೇ ಇಲ್ಲ. ಇಸ್ರಯೇಲರು ಈ ವರ್ಷವೆಲ್ಲ ಕಾನಾನ್ ನಾಡಿನ ಉತ್ಪನ್ನವನ್ನೇ ಅನುಭವಿಸಿದರು.

### ಯೆಹೋಶುವನಿಗಾದ ದಿವ್ಯದರ್ಶನ

13 ಯೆಹೋಶುವನು ಜೆರಿಕೋವಿಗೆ ಹತ್ತಿರವಿದ್ದಾಗ, ಒಮ್ಮೆ ಕಣ್ಣೆತ್ತಿ ನೋಡಿದನು. ಇಗೋ, ಒಬ್ಬ ವ್ಯಕ್ತಿ ಕಾಣಿಸಿಕೊಂಡನು. ಹಿರಿದ ಕತ್ತಿಯನ್ನು ಕೈಯಲ್ಲಿ ಹಿಡಿದು ನಿಂತಿದ್ದನು. ಯೆಹೋಶುವ ಅವನನ್ನು ಸಮೀಪಿಸಿ, “ನೀನು ನಮ್ಮವನೋ ಅಥವಾ ಶತ್ರು ಕಡೆಯವನೋ?” ಎಂದು ಕೇಳಿದನು. [14]ಆಗ ಆ ವ್ಯಕ್ತಿ,

"ನಾನು ಅಂಥವನಲ್ಲ; ನಾನು ಸರ್ವೇಶ್ವರನ ಸೇನಾಪತಿ. ಇದೀಗಲೆ ಬಂದವನು," ಎಂದು ಉತ್ತರಿಸಿದನು. ಕೂಡಲೆ ಯೆಹೋಶುವ ಅವನಿಗೆ ಸಾಷ್ಟಾಂಗವೆರಗಿ, "ಒಡೆಯಾ, ತಮ್ಮ ದಾಸನಾದ ನನಗೆ ಏನು ಆಜ್ಞಾಪಿಸಬೇಕೆಂದಿದ್ದೀರಿ?" ಎಂದನು. 15ಆಗ ಸರ್ವೇಶ್ವರನ ಸೇನಾಪತಿ, "ನಿನ್ನ ಕಾಲಿನಿಂದ ಕೆರಗಳನ್ನು ತೆಗೆದುಹಾಕು. ಏಕೆಂದರೆ ನೀನು ನಿಂತಿರುವ ಸ್ಥಳ ಪವಿತ್ರವಾದುದು," ಎಂದು ಹೇಳಿದರು. ಯೆಹೋಶುವ ಅಂತೆಯೇ ಮಾಡಿದನು.

**ಜೆರಿಕೊ ನಗರದ ಪತನ**

**6** ಜೆರಿಕೋದ ಜನರು ಇಸ್ರಯೇಲರಿಗೆ ಹೆದರಿ ತಮ್ಮ ನಗರದ ಬಾಗಿಲುಗಳನ್ನು ಭದ್ರವಾಗಿ ಮುಚ್ಚಿದ್ದರು.
ಯಾರೂ ಹೊರಗೆ ಬರುತ್ತಿರಲಿಲ್ಲ, ಒಳಗೆ ಹೋಗುತ್ತಿರಲಿಲ್ಲ. 2ಆಗ ಸರ್ವೇಶ್ವರಸ್ವಾಮಿ ಯೆಹೋಶುವನಿಗೆ,
"ನೋಡು, ನಾನು ಜೆರಿಕೋವನ್ನು, ಅದರ ಅರಸನನ್ನು ಹಾಗೂ ಅದರ ಯುದ್ಧವೀರರನ್ನು ನಿನ್ನ ಕೈಗೆ
ಒಪ್ಪಿಸಿದ್ದೇನೆ. 3ನಿನ್ನ ಯೋಧರೆಲ್ಲ ಆರು ದಿವಸಗಳವರೆಗೆ ದಿನಕ್ಕೆ ಒಂದು ಸಾರಿ ನಗರವನ್ನು ಸುತ್ತಲಿ.
4ಏಳುಮಂದಿ ಯಾಜಕರು ಕೊಂಬುಗಳನ್ನು ಹಿಡಿದುಕೊಂಡು ಮಂಜೂಷದ ಮುಂದೆ ನಡೆಯಲಿ. ಏಳನೆಯ
ದಿವಸ ನೀವು ಪಟ್ಟಣವನ್ನು ಏಳುಸಾರಿ ಸುತ್ತಬೇಕು. ಯಾಜಕರು ಕೊಂಬುಗಳನ್ನು ಊದಬೇಕು. 5ಅವರು
ದೀರ್ಘವಾಗಿ ಊದುವ ಕೊಂಬಿನ ಧ್ವನಿ ಕೇಳಿಸುತ್ತಲೇ ನೀವೆಲ್ಲರು ಗಟ್ಟಿಯಾಗಿ ಕೇಕೆ ಹಾಕಿ ಆರ್ಭಟಿಸಿರಿ.
ಆಗ ನಗರದ ಗೋಡೆ ತಾನೇ ತಾನಾಗಿ ಬಿದ್ದು ಹೋಗುವುದು. ಆಗ ಪ್ರತಿಯೊಬ್ಬನು ನೆಟ್ಟಗೆ
ಒಳನುಗ್ಗಬಹುದು," ಎಂದು ಹೇಳಿದರು.

6 ನೂನನ ಮಗ ಯೆಹೋಶುವನು ಯಾಜಕರನ್ನು ಕರೆದು ಅವರಿಗೆ, "ನೀವು ಒಡಂಬಡಿಕೆಯ
ಮಂಜೂಷವನ್ನು ಹೊತ್ತುಕೊಂಡು ಹೋಗಿರಿ. ಏಳು ಮಂದಿ ಯಾಜಕರು ಕೊಂಬುಗಳನ್ನು ಹಿಡಿದುಕೊಂಡು
ಸರ್ವೇಶ್ವರನ ಮಂಜೂಷದ ಮುಂದೆ ನಡೆಯಲಿ," ಎಂದು ತಿಳಿಸಿದನು. 7ಅಂತೆಯೆ ಜನರಿಗೆ, "ನೀವು
ಮುಂದೆ ಹೋಗಿ ನಗರವನ್ನು ಸುತ್ತುವರೆಯಿರಿ. ಯುದ್ಧಸನ್ನದ್ಧರೆಲ್ಲರೂ ಸರ್ವೇಶ್ವರನ ಮಂಜೂಷದ ಮುಂದೆ
ಹೋಗಲಿ," ಎಂದು ಹೇಳಿದನು.

8 ಯೆಹೋಶುವನು ಆಜ್ಞಾಪಿಸಿದಂತೆಯೇ ಏಳು ಮಂದಿ ಯಾಜಕರು ಕೊಂಬುಗಳನ್ನು
ಹಿಡಿದುಕೊಂಡು ಊದುತ್ತಾ ಸರ್ವೇಶ್ವರನ ಮುಂದೆ ನಡೆದರು. ಸರ್ವೇಶ್ವರನ ಒಡಂಬಡಿಕೆಯ ಮಂಜೂಷವು
ಅವರ ಹಿಂದೆ ಹೋಯಿತು. 9ಯುದ್ಧಸನ್ನದ್ಧರಾದವರು ಕೊಂಬುಗಳನ್ನು ಊದುತ್ತಿದ್ದ ಯಾಜಕರ ಮುಂದೆ
ಇದ್ದರು. ಹಿಂಬದಿಯ ದಂಡು ಮಂಜೂಷದ ಹಿಂದಿತ್ತು. ಕೊಂಬುಗಳು ಮೊಳಗುತ್ತಲೇ ಅವರು ಹೊರಟರು.

10ಯೆಹೋಶುವನು ಜನರಿಗೆ, "ನೀವು ಈಗ ಆರ್ಭಟಿಸಬಾರದು. ನಿಮ್ಮ ಧ್ವನಿ ಕೇಳಿಸದಿರಲಿ. ನಿಮ್ಮ
ಬಾಯಿಂದ ಒಂದು ಮಾತೂ ಬರಕೂಡದು. ಆರ್ಭಟಿಸಿರೆಂದು ನಾನು ಹೇಳುವಾಗ ಮಾತ್ರ ನೀವು
ಆರ್ಭಟಿಸಬೇಕು," ಎಂದು ಆಜ್ಞಾಪಿಸಿದನು.

11 ಸರ್ವೇಶ್ವರನ ಮಂಜೂಷವನ್ನು ಒಂದು ಸಾರಿ ನಗರ ಪ್ರದಕ್ಷಿಣೆ ಮಾಡಿಸಿದ ಮೇಲೆ, ಅವರು
ಪಾಳೆಯಕ್ಕೆ ಹಿಂದಿರುಗಿ ಬಂದು ರಾತ್ರಿಯನ್ನು ಕಳೆದರು. 12ಯೆಹೋಶುವನು ಬೆಳಗಿನ ಜಾವದಲ್ಲೇ ಎದ್ದನು.
ಯಾಜಕರು ಮಂಜೂಷವನ್ನು ಹೊತ್ತುಕೊಂಡು ಹೊರಟರು. 13ಏಳು ಮಂದಿ ಯಾಜಕರು ಕೊಂಬುಗಳನ್ನು
ಊದುತ್ತಾ ಸರ್ವೇಶ್ವರನ ಮಂಜೂಷದ ಮುಂದೆ ನಡೆದರು. ಯುದ್ಧಸನ್ನದ್ಧರು ಅವರ ಮುಂದಿದ್ದರು.
ಹಿಂಬದಿಯ ದಂಡು ಮಂಜೂಷದ ಹಿಂದಿತ್ತು. ಕೊಂಬುಗಳು ಮೊಳಗುತ್ತಲೇ ಅವರು ಹೊರಟರು. 14ಹೀಗೆ
ಎರಡನೆಯ ದಿನದಲ್ಲೂ ನಗರವನ್ನು ಸುತ್ತಿ ಪಾಳೆಯಕ್ಕೆ ಹಿಂದಿರುಗಿದರು. ಆರು ದಿನ ಹೀಗೆಯೇ ಮಾಡಿದರು.

15 ಏಳನೆಯ ದಿನದಲ್ಲಿ ಅವರು ಸೂರ್ಯೋದಯವಾಗುತ್ತಲೇ ಎದ್ದು ಅದೇ ಕ್ರಮದಲ್ಲಿ ನಗರವನ್ನು
ಏಳುಸಾರಿ ಸುತ್ತಿದರು. 16ಏಳನೆಯ ಸಾರಿ ಸುತ್ತುವಾಗ ಯಾಜಕರು ಕೊಂಬುಗಳನ್ನು ಊದಿದರು.
ಯೆಹೋಶುವ ಜನರಿಗೆ, "ಆರ್ಭಟಿಸಿರಿ, ಸರ್ವೇಶ್ವರಸ್ವಾಮಿ ನಿಮಗೆ ಈ ನಗರವನ್ನು ಕೊಟ್ಟಿದ್ದಾರೆ. 17ಇದೂ
ಇದರಲ್ಲಿರುವುದೆಲ್ಲವೂ ಸರ್ವೇಶ್ವರನಿಗೆ ಮೀಸಲಾಗಿ ಆಹುತಿಯಾಗತಕ್ಕದೆಂದು ತಿಳಿಯಿರಿ. ವೇಶ್ಯೆಯಾದ
ರಾಹಾಬಳು ಮತ್ತು ಅವಳ ಸಂಗಡ ಮನೆಯಲ್ಲಿರುವವರೆಲ್ಲರು ಉಳಿಯಲಿ. ಏಕೆಂದರೆ ನಾವು ಕಳಿಸಿದ

ಗೂಢಚಾರರನ್ನು ಅವಳು ಬಚ್ಚಿಟ್ಟಿದ್ದಳು. 18ನೀವಾದರೋ ಸರ್ವೇಶ್ವರನಿಗೆ ಮೀಸಲಾದ ವಸ್ತುಗಳ ವಿಷಯದಲ್ಲಿ
ಜಾಗರೂಕತೆಯಿಂದಿರಬೇಕು. ನೀವು ಅವುಗಳಲ್ಲಿ ಯಾವುದನ್ನಾದರೂ ತೆಗೆದುಕೊಂಡರೆ ಇಸ್ರಯೇಲರ
ಪಾಳೆಯವೇ ಶಾಪಕ್ಕೆ ಗುರಿಯಾಗಿ ನಾಶವಾದೀತು. 19ಎಲ್ಲ ಬೆಳ್ಳಿ ಬಂಗಾರ ಹಾಗೂ ತಾಮ್ರ ಕಬ್ಬಿಣಗಳ
ಪಾತ್ರೆಗಳು ಸರ್ವೇಶ್ವರಸ್ವಾಮಿಗೆ ಮೀಸಲಾಗಿದ್ದು ಅವರ ಭಂಡಾರಕ್ಕೆ ಸೇರತಕ್ಕವುಗಳು," ಎಂದನು.

20 ಕೂಡಲೆ ಜನರು ಆರ್ಭಟಿಸಿದರು. ಕೊಂಬುಗಳು ಮೊಳಗಿದವು. ಕೊಂಬಿನ ಧ್ವನಿ ಕೇಳಿ ಜನರು
ಇನ್ನೂ ಗಟ್ಟಿಯಾಗಿ ಆರ್ಭಟಿಸಿದರು. ನಗರದ ಗೋಡೆ ತಾನಾಗಿ ಬಿದ್ದುಹೋಯಿತು. ಪ್ರತಿ ಒಬ್ಬನೂ ನೆಟ್ಟಗೆ
ನಗರಕ್ಕೆ ನುಗ್ಗಿದನು. ಅದು ಅವರ ಸ್ವಾಧೀನವಾಯಿತು. 21ಅಲ್ಲಿದ್ದ ಗಂಡಸರು, ಹೆಂಗಸರು, ಯುವಕರು,
ಮುದಕರು, ದನ, ಕುರಿ, ಕತ್ತೆ ಇವುಗಳನ್ನೆಲ್ಲಾ ನಿಶ್ಶೇಷವಾಗಿ ಕತ್ತಿಯಿಂದ ಸಂಹರಿಸಿಬಿಟ್ಟರು.

22 ಯೆಹೋಶುವನು ಆ ನಾಡಿನಲ್ಲಿ ಬೇಹುಗಾರಿಕೆ ನಡೆಸಿದ್ದ ಇಬ್ಬರು ವ್ಯಕ್ತಿಗಳನ್ನು ಕರೆದು, "ನೀವು
ಆ ವೇಶ್ಯೆಯ ಮನೆಗೆ ಹೋಗಿ, ಅವಳಿಗೆ ಪ್ರಮಾಣ ಮಾಡಿದಂತೆ ಅವಳನ್ನೂ ಅವಳಿಗಿರುವುದೆಲ್ಲವನ್ನೂ
ಹೊರಗೆ ತೆಗೆದುಕೊಂಡು ಬನ್ನಿ," ಎಂದು ಹೇಳಿದನು. 23ಅಂತೆಯೇ ಅವರು ಹೋಗಿ ರಾಹಾಬಳನ್ನೂ
ಅವಳ ತಂದೆತಾಯಿಗಳನ್ನೂ ಸಹೋದರರನ್ನೂ ಅವಳಿಗಿದ್ದುದೆಲ್ಲವನ್ನೂ ಅವಳ ಎಲ್ಲಾ ಸಂಬಂಧಿಕರನ್ನೂ
ತಂದು ಇಸ್ರಯೇಲರ ಪಾಳೆಯದ ಹೊರಗಡೆ ಸುಭದ್ರವಾಗಿರಿಸಿದರು. 24ಬಳಿಕ ನಗರವನ್ನೂ –
ಅದರಲ್ಲಿದ್ದುದೆಲ್ಲವನ್ನೂ ಬೆಂಕಿಯಿಂದ ಸುಟ್ಟುಹಾಕಿದರು. ಆದರೆ ಬೆಳ್ಳಿ ಬಂಗಾರವನ್ನು, ಕಂಚುಕಬ್ಬಿಣಗಳ
ಪಾತ್ರೆಗಳನ್ನು ಸರ್ವೇಶ್ವರನ ಆಲಯದ ಭಂಡಾರಕ್ಕೆ ಒಪ್ಪಿಸಿದರು. 25ವೇಶ್ಯೆಯಾದ ರಾಹಾಬಳು,
ಜೆರಿಕೋನಗರದಲ್ಲಿ ಸಂಚರಿಸಿ ನೋಡಲು ಬಂದಿದ್ದ ಯೆಹೋಶುವನ ಗೂಢಚಾರರನ್ನು ಬಚ್ಚಿಟ್ಟಿದ್ದರಿಂದ
ಅವಳನ್ನೂ ಅವಳ ತಂದೆಯ ಮನೆಯವರನ್ನೂ ಅವಳಿಗಿದ್ದುದೆಲ್ಲವನ್ನೂ ಉಳಿಸಿದರು. ಅವಳು
ಇಂದಿನವರೆಗೂ ಇಸ್ರಯೇಲರಲ್ಲೇ ವಾಸವಾಗಿದ್ದಾಳೆ.

26 ಅದೇ ಸಮಯಕ್ಕೆ ಯೆಹೋಶುವನು ಇಸ್ರಯೇಲರಿಂದ ಪ್ರಮಾಣಮಾಡಿಸಿ ಅವರಿಗೆ,

"ಜೆರಿಕೋ ಎಂಬ ಈ ನಗರವನ್ನು
    ಕಟ್ಟುವುದಕ್ಕೆ ಕೈಹಾಕುವವನು
ಸರ್ವೇಶ್ವರನ ದೃಷ್ಟಿಯಲ್ಲಿ
    ಶಾಪಗ್ರಸ್ತನಾಗಿರಲಿ !
ಅಂಥವನು ಅದಕ್ಕೆ ಅಸ್ತಿವಾರ
    ಹಾಕುವಾಗ ಹಿರಿಯ ಮಗನನ್ನೂ
ಬಾಗಿಲುಗಳನ್ನಿಡುವಾಗ ಕಿರಿಯ ಮಗನನ್ನೂ
    ಕಳೆದುಕೊಳ್ಳಲಿ,"

ಎಂದು ಹೇಳಿದನು. 27ಸರ್ವೇಶ್ವರಸ್ವಾಮಿ ಯೆಹೋಶುವನ ಸಂಗಡ ಇದ್ದುದರಿಂದ ಅವನ ಕೀರ್ತಿ
ನಾಡಿನಲ್ಲೆಲ್ಲಾ ಹರಡಿತು.

### ಆಕಾನನ ಪಾಪ

**7** ಆಕಾನನು ಯೆಹೂದ್ಯ ಕುಲದವನು, ಜೆರಹನ ಗೋತ್ರದವನು, ಕರ್ಮೀಯ ಮಗನೂ ಜಬ್ದೀಯ
ಕುಟುಂಬದವನೂ ಆಗಿದ್ದನು. ಸರ್ವೇಶ್ವರಸ್ವಾಮಿಗೆ ಮೀಸಲಾಗಿಟ್ಟ ವಸ್ತುಗಳಲ್ಲಿ ಈತ ಕೆಲವನ್ನು
ಕದ್ದುಕೊಂಡನು. ಈ ಕಾರಣ ಇಸ್ರಯೇಲರೆಲ್ಲರು ದ್ರೋಹಿಗಳಾದರು. ಸರ್ವೇಶ್ವರನ ಕೋಪ ಅವರ ಮೇಲೆ
ಉರಿಯಹತ್ತಿತು.

2 ಯೆಹೋಶುವನು ಕೆಲವು ಜನರನ್ನು ಕರೆದು, "ನೀವು ಬೇತೇಲಿನ ಪೂರ್ವಕ್ಕೂ ಬೇತಾವೆನಿನ
ಸಮೀಪದಲ್ಲೂ ಇರುವ 'ಆಯಿ' ಎಂಬ ಪ್ರಾಂತ್ಯಕ್ಕೆ ಹೋಗಿ ಬೇಹುನೋಡಿ ಬನ್ನಿ," ಎಂದು ಹೇಳಿ ಅವರನ್ನು
ಜೆರಿಕೋವಿನಿಂದ ಕಳಿಸಿದನು. ಅವರು ಹೋಗಿ ಆಯಿ ಎಂಬ ಊರನ್ನು ಸಂಚರಿಸಿ ಬೇಹು ನೋಡಿ
ಹಿಂದಿರುಗಿ ಬಂದರು. 3ಬಂದ ಬಳಿಕ ಯೆಹೋಶುವನಿಗೆ, "ಎಲ್ಲಾ ಜನರು ಹೋಗುವುದು ಅವಶ್ಯವಿಲ್ಲ.

ಎರಡು ಅಥವಾ ಮೂರು ಸಾವಿರ ಮಂದಿ ಹೋದರೆ ಸಾಕು. ಅವರೇ ಆ ನಗರವನ್ನು ಜಯಿಸಬಹುದು. ಎಲ್ಲರನ್ನು ಕಳುಹಿಸಿ ಸುಮ್ಮನೆ ದಣಿಸುವುದೇಕೆ? ಅಲ್ಲಿ ಸ್ವಲ್ಪಮಂದಿ ಮಾತ್ರ ಇದ್ದಾರೆ," ಎಂದು ವರದಿ ಮಾಡಿದರು.
4ಅದರಂತೆಯೇ ಸುಮಾರು ಮೂರುಸಾವಿರ ಮಂದಿ ಹೋದರು. ಆದರೆ ಅವರು ಆಯಿ ಎಂಬ ಊರಿನವರನ್ನು ಎದುರಿಸಲಾಗದೆ ಓಡಿಬರಬೇಕಾಯಿತು.
5ಆಯಿ ಊರಿನವರು ಅವರನ್ನು ಊರ ಬಾಗಿಲಿನಿಂದ ಕಲ್ಲುಗಣಿಯವರೆಗೂ ಹಿಂದಟ್ಟಿ ಇಳಿನೆಲದಲ್ಲಿ ಅವರನ್ನು ಸೋಲಿಸಿ ಸುಮಾರು ಮೂವತ್ತಾರು ಮಂದಿಯನ್ನು ಕೊಂದುಹಾಕಿದರು. ಇದರಿಂದ ಇಸ್ರಯೇಲರ ಧೈರ್ಯ ಕರಗಿ ನೀರಾಯಿತು.

## ಯೆಹೋಶುವನ ಪ್ರಾರ್ಥನೆ

6 ಆಗ ಯೆಹೋಶುವನು ಮತ್ತು ಇಸ್ರಯೇಲರ ಹಿರಿಯರು ದುಃಖ ತಾಳಲಾರದೆ ತಮ್ಮ ಬಟ್ಟೆಗಳನ್ನು ಹರಿದುಕೊಂಡು, ತಲೆಯ ಮೇಲೆ ಬೂದಿಯನ್ನು ಸುರಿದುಕೊಂಡು ಸಾಯಂಕಾಲದವರೆಗೆ ಸರ್ವೇಶ್ವರನ ಮಂಜೂಷದ ಮುಂದೆ ಅಧೋಮುಖರಾಗಿ ಬಿದ್ದಿದ್ದರು.
7ಯೆಹೋಶುವನು, "ಅಯ್ಯೋ, ಸ್ವಾಮಿ ಸರ್ವೇಶ್ವರಾ, ನೀವು ಈ ಜನರನ್ನು ಜೋರ್ಡನ್ ನದಿ ದಾಟಿಸಿದ್ದೇಕೆ? ನಮ್ಮನ್ನು ಅಮೋರಿಯರ ಕೈಗೊಪ್ಪಿಸಿ ನಾಶ ಮಾಡಬೇಕೆಂದಿರುವಿರಾ? ನಾವು ಇಷ್ಟೇ ಸಾಕೆಂದು ಜೋರ್ಡನ್ ನದಿಯ ಆಚೆ ಕಡೆಯಲ್ಲೇ ಇದ್ದಿದ್ದರೆ ಎಷ್ಟೋ ಒಳ್ಳೆಯದಾಗಿತ್ತು.
8ಸರ್ವೇಶ್ವರಾ, ಇಸ್ರಯೇಲರು ಶತ್ರುಗಳಿಗೆ ಬೆನ್ನು ತೋರಿಸಿದ್ದಾರಲ್ಲಾ! ನಾನು ಏನು ತಾನೇ ಹೇಳಲಿ!
9ಕಾನಾನ್ಯರು ಮತ್ತು ನಾಡಿನ ಬೇರೆ ಎಲ್ಲಾ ನಿವಾಸಿಗಳೂ ಇದನ್ನು ಕೇಳಿ ನಮ್ಮನ್ನು ಸುತ್ತುವರೆದು ಲೋಕದಲ್ಲಿ ನಮ್ಮ ಹೆಸರೇ ಉಳಿಯದಂತೆ ಮಾಡುವರು. ಆಗ ನಿಮ್ಮ ಮಹತ್ತಾದ ಹೆಸರನ್ನು ಉಳಿಸಿಕೊಳ್ಳಲು ಏನು ಮಾಡುವಿರಿ?" ಎಂದನು.

## ಸರ್ವೇಶ್ವರನ ಉತ್ತರ

10 ಸರ್ವೇಶ್ವರ ಯೆಹೋಶುವನಿಗೆ ಹೀಗೆ ಎಂದರು: "ನೀನು ಅಧೋಮುಖನಾಗಿ ಬಿದ್ದು ಇರುವುದೇಕೆ, ಏಳು.
11ಇಸ್ರಯೇಲರು ನನ್ನ ಕಟ್ಟಳೆಯನ್ನು ಮೀರಿ ಪಾಪಿಷ್ಠರಾಗಿದ್ದಾರೆ. ಮೋಸಲಾದ ವಸ್ತುಗಳನ್ನು ತೆಗೆದುಕೊಂಡು ಕಳ್ಳರಾಗಿದ್ದಾರೆ. ಅವುಗಳನ್ನು ತಮ್ಮ ಸಲಕರಣೆಗಳಲ್ಲಿ ಬಚ್ಚಿಟ್ಟುಕೊಂಡು ವಂಚಕರಾಗಿದ್ದಾರೆ.
12ಆದುದರಿಂದಲೇ ಇಸ್ರಯೇಲರು ಶತ್ರುಗಳ ಮುಂದೆ ನಿಲ್ಲಲಾರದೆ ಬೆನ್ನು ತೋರಿಸಿದ್ದಾರೆ. ಅವರು ಶಾಪಗ್ರಸ್ತರೇ ಸರಿ. ಶಾಪಕ್ಕೆ ಕಾರಣವಾದುದನ್ನು ನಿಮ್ಮ ಮಧ್ಯೆಯಿಂದ ತೆಗೆದುಹಾಕುವ ತನಕ ನಾನು ನಿಮ್ಮ ಸಂಗಡ ಬರುವುದಿಲ್ಲ.
13ನೀನೆದ್ದು ಜನರನ್ನು ಶುದ್ಧೀಕರಿಸು. ನೀನು ಅವರಿಗೆ, 'ಇಸ್ರಯೇಲರೇ, ನಾಳೆ ನಿಮ್ಮನ್ನೇ ಶುದ್ಧೀಕರಿಸಿಕೊಳ್ಳಿ ನಿಮ್ಮ ಮಧ್ಯೆ ಶಾಪಕ್ಕೆ ಕಾರಣವಾದದ್ದು ಉಂಟು. ಅದನ್ನು ನೀವು ತೆಗೆದು ಹಾಕುವ ತನಕ ಶತ್ರುಗಳ ಮುಂದೆ ನಿಲ್ಲಲಾರಿರಿ ಎಂದು ನಿಮ್ಮ ದೇವರಾದ ಸರ್ವೇಶ್ವರಸ್ವಾಮಿಯೇ ಹೇಳಿದ್ದಾರೆ.
14ನಾಳೆ ಬೆಳಿಗ್ಗೆ ನೀವು ಕುಲ ಕುಲವಾಗಿ ನನ್ನ ಬಳಿಗೆ ಬನ್ನಿ. ಸರ್ವೇಶ್ವರ ಯಾವ ಕುಲವನ್ನು ಸೂಚಿಸುತ್ತಾರೋ ಆ ಕುಲವು ಗೋತ್ರ ಗೋತ್ರವಾಗಿ, ಯಾವ ಗೋತ್ರವನ್ನು ಸೂಚಿಸುತ್ತಾರೋ ಆ ಗೋತ್ರವು ಕುಟುಂಬ ಕುಟುಂಬವಾಗಿ, ಯಾವ ಕುಟುಂಬವನ್ನು ಸೂಚಿಸುತ್ತಾರೋ ಆ ಕುಟುಂಬದವರು ಒಬ್ಬೊಬ್ಬರಾಗಿ ಬರಬೇಕು.
15ಯಾವನು ಮೋಸಲಾದ ವಸ್ತುವನ್ನು ತೆಗೆದುಕೊಂಡವನೆಂದು ಹಿಡಿಯಲ್ಪಡುತ್ತಾನೋ ಅವನು ತನ್ನ ಆಸ್ತಿ ಪಾಸ್ತಿ ಸಹಿತವಾಗಿ ಸುಡಲ್ಪಡಬೇಕು. ಏಕೆಂದರೆ ಅವನು ಸರ್ವೇಶ್ವರನ ಕಟ್ಟಳೆಯನ್ನು ಮೀರಿ ಇಸ್ರಯೇಲರಲ್ಲಿ ಭ್ರಷ್ಟಾಚಾರವನ್ನು ನಡೆಸಿದ್ದಾನೆ,' ಎಂದು ಹೇಳು."

16 ಯೆಹೋಶುವನು ಬೆಳಿಗ್ಗೆ ಎದ್ದು ಇಸ್ರಯೇಲ್ ಕುಲಗಳನ್ನು ಒಂದೊಂದಾಗಿ ಬರಮಾಡಿದನು. ಯೆಹೂದಕುಲ ಸಿಕ್ಕಿಕೊಂಡಿತು.
17ಅದರ ಗೋತ್ರಗಳನ್ನು ಕರೆದಾಗ ಜೆರಹನ ಗೋತ್ರ ಸಿಕ್ಕಿಕೊಂಡಿತು. ಆ ಗೋತ್ರದ ಕುಟುಂಬಗಳನ್ನು ಕರೆದಾಗ ಜಬ್ದೀಯ ಕುಟುಂಬ ಸಿಕ್ಕಿಕೊಂಡಿತು.
18ಆ ಕುಟುಂಬದವರಲ್ಲಿ ಒಬ್ಬನಾದ ಮೇಲೆ ಒಬ್ಬನನ್ನು ಕರೆದಾಗ ಆಕಾನನು ಸಿಕ್ಕಿಕೊಂಡನು. ಯೆಹೂದ ಕುಲದವನೂ ಜೆರಹನ ಗೋತ್ರದವನೂ ಜಬ್ದಿಯ ಕುಟುಂಬದವನೂ ಹಾಗೂ ಕರ್ಮೀಯ ಮಗನೂ ಇವನೇ.
19ಆಕಾನನಿಗೆ ಯೆಹೋಶುವನು, "ಮಗನೇ, ನೀನು ಇಸ್ರಯೇಲ್ ದೇವರಾದ ಸರ್ವೇಶ್ವರನನ್ನು ಸ್ತುತಿಸಿ ಸ್ತೋತ್ರ ಸಲ್ಲಿಸು. ನೀನು ಮಾಡಿದ್ದನ್ನು ಮುಚ್ಚುಮರೆಯಿಲ್ಲದೆ ನನಗೆ ತಿಳಿಸು, ಎಂದನು.
20ಅವನಿಗೆ ಆಕಾನನು, "ನಾನು ಇಂಥ

ಕಾರ್ಯವನ್ನು ಮಾಡಿ ಇಸ್ರಯೇಲ್ ದೇವರಾದ ಸರ್ವೇಶ್ವರನಿಗೆ ವಿರುದ್ಧ ಪಾಪಮಾಡಿದ್ದು ನಿಜ, [21]ನಾನು ಕೊಳ್ಳೆಯಲ್ಲಿ ಶಿನಾರ್ ನಾಡಿನ ಒಂದು ಉತ್ತಮವಾದ ನಿಲುವಂಗಿಯನ್ನೂ ಎರಡು ಕಿಲೋಗ್ರಾಂ ತೂಕದ ಬೆಳ್ಳಿಯನ್ನೂ ಅರ್ಧ ಕಿಲೋಗ್ರಾಂ ತೂಕದ ಬಂಗಾರದ ಗಟ್ಟಿಯನ್ನೂ ಕಂಡು, ಆಶೆಯಿಂದ ಅವನ್ನು ತೆಗೆದುಕೊಂಡೆ. ಅವುಗಳನ್ನು ನನ್ನ ಗುಡಾರದ ಮಧ್ಯದಲ್ಲಿ ಹೂತಿಟ್ಟಿದ್ದೇನೆ; ಬೆಳ್ಳಿಯು ಅಂಗಿಯ ಕೆಳಗಿದೆ," ಎಂದು ಉತ್ತರಕೊಟ್ಟನು.

22 ಆಗ ಯೆಹೋಶುವನು ಆಳುಗಳನ್ನು ಕಳುಹಿಸಲು ಅವರು ಓಡಿಹೋಗಿ ಹುಡುಕಿದರು. ಆ ನಿಲುವಂಗಿಯನ್ನು ಗುಡಾರದಲ್ಲಿ ಹೂತಿಡಲಾಗಿತ್ತು. ಅದರ ಕೆಳಗೆ ಬೆಳ್ಳಿ ಇತ್ತು. [23]ಆಳುಗಳು ಅವುಗಳನ್ನು ಗುಡಾರದಿಂದ ತೆಗೆದುಕೊಂಡು ಯೆಹೋಶುವನೂ ಇಸ್ರಯೇಲರೂ ಇದ್ದಲ್ಲಿಗೆ ಬಂದು ಸರ್ವೇಶ್ವರಸ್ವಾಮಿಯ ಮುಂದಿಟ್ಟರು. [24]ಜೆರಹನ ಮಗನಾದ ಆಕಾನನನ್ನು ಹಿಡಿದು ಬೆಳ್ಳಿ, ನಿಲುವಂಗಿ, ಬಂಗಾರದ ಗಟ್ಟಿಯನ್ನು, ಅವನ ಗಂಡುಹೆಣ್ಣು ಮಕ್ಕಳನ್ನು, ದನ, ಕರು, ಕತ್ತೆ, ಆಡುಕುರಿಗಳನ್ನು ಮತ್ತು ಗುಡಾರವನ್ನು ಆಕೋರ್ ಎಂಬ ಕಣಿವೆಗೆ ಒಯ್ಯಲಾಯಿತು. ಯೆಹೋಶುವನೂ ಇಸ್ರಯೇಲರೆಲ್ಲರೂ ಅಲ್ಲಿಗೆ ಬಂದರು. [25]ಯೆಹೋಶುವನು ಆಕಾನನಿಗೆ "ನೀನು ನಮ್ಮನ್ನು ಆಪತ್ತಿಗೆ ಗುರಿಮಾಡಿದ್ದೇಕೆ? ಈ ದಿನ ಸರ್ವೇಶ್ವರ ನಿನ್ನ ಮೇಲೆ ಆಪತ್ತು ಬರಮಾಡುವರು," ಎಂದ ಕೂಡಲೆ ಇಸ್ರಯೇಲರೆಲ್ಲರೂ ಅವನನ್ನು ಕಲ್ಲೆಸೆದು ಕೊಂದರು. ಕಲ್ಲೆಸೆದದ್ದು ಮಾತ್ರವಲ್ಲ, ಅವನಿಗೆ ಇದ್ದುದೆಲ್ಲವನ್ನೂ ಬೆಂಕಿಯಿಂದ ಸುಟ್ಟರು. [26]ಅವನ ಮೇಲೆ ಕಲ್ಲುಗಳ ಒಂದು ದೊಡ್ಡ ಗುಡ್ಡೆಯನ್ನು ಹಾಕಿದರು. ಅದು ಇಂದಿನವರೆಗೂ ಇದೆ. ಬಳಿಕ ಸರ್ವೇಶ್ವರನ ಕೋಪಾಗ್ನಿ ತಣ್ಣಗಾಯಿತು. ಈ ಘಟನೆಯಿಂದಾಗಿ ಆ ಸ್ಥಳಕ್ಕೆ 'ಆಕೋರಿನ ಕಣಿವೆ' ಎಂಬ ಹೆಸರು ಬಂದಿತು.

### ಆಯಿ ನಗರದ ಆಕ್ರಮಣ

**8** ಸರ್ವೇಶ್ವರಸ್ವಾಮಿ ಯೆಹೋಶುವನಿಗೆ, "ಅಂಜಬೇಡ, ಕಳವಳಗೊಳ್ಳಬೇಡ; ಯೋಧರೆಲ್ಲರನ್ನು ನಿನ್ನೊಡನೆ ಕರೆದುಕೊಂಡು ಆಯಿಗೆ ಹೋಗು. ಆಯಿ ಎಂಬ ಊರಿನ ರಾಜ, ಪ್ರಜೆ, ನಗರ, ನಾಡು ಇವೆಲ್ಲವನ್ನು ನಿನಗೆ ಕೊಟ್ಟಿದ್ದೇನೆ, ಹೋಗು. [2]ಜೆರಿಕೋವಿಗೂ ಅದರ ಅರಸನಿಗೂ ಮಾಡಿದಂತೆಯೇ ಆಯಿಗೂ ಅದರ ಅರಸನಿಗೂ ಮಾಡು. ಆದರೆ ಕೊಳ್ಳೆಯನ್ನೂ ಪಶುಪ್ರಾಣಿಗಳನ್ನೂ ಈ ಸಾರಿ ನೀವೇ ಇಟ್ಟುಕೊಳ್ಳಬಹುದು. ನಿಮ್ಮಲ್ಲಿ ಕೆಲವರು ಆ ಊರಿನ ಹಿಂಬದಿಯಲ್ಲಿ ಹೊಂಚುಹಾಕಿ ಕೂಡಿರಲಿ," ಎಂದು ಆಜ್ಞಾಪಿಸಿದರು.

3ಅಂತೆಯೇ ಯೆಹೋಶುವನು ಯೋಧರೆಲ್ಲರ ಸಹಿತವಾಗಿ ಆಯಿಗೆ ಹೊರಡಲು ಸಿದ್ಧನಾದನು. ಮೂವತ್ತು ಸಾವಿರ ಯುದ್ಧವೀರರನ್ನು ಆರಿಸಿಕೊಂಡನು. [4]ಅವರಿಗೆ, "ನೀವು ನಗರದ ಹಿಂಭಾಗದಲ್ಲಿ ಹೊಂಚುಹಾಕಿ ಕುಳಿತಿರಬೇಕು. ನಗರದಿಂದ ಬಹುದೂರವಾಗಿರಬೇಡಿ. ಎಲ್ಲರೂ ಸಿದ್ಧವಾಗಿರಿ. [5]ನಾನು ಮತ್ತು ನನ್ನ ಸಂಗಡದವರೆಲ್ಲರು ನಗರದ ಸಮೀಪಕ್ಕೆ ಹೋಗುತ್ತೇವೆ. ಆಯಿಯ ಜನರು ಮುಂಚಿನಂತೆ ನಮ್ಮೊಡನೆ ಯುದ್ಧಕ್ಕೆ ಬರುವರು. ಕೂಡಲೆ ನಾವು ಅಲ್ಲಿಂದ ಓಡಿಹೋಗುತ್ತೇವೆ. [6]'ಇವರು ಮುಂಚಿನಂತೆ ನಮಗೆ ಹೆದರಿ ಓಡಿ ಹೋಗುತ್ತಿದ್ದಾರೆ' ಎಂದು ಭಾವಿಸಿ, ಅವರು ನಮ್ಮನ್ನು ಹಿಂದಟ್ಟುವರು. ನಾವು ಓಡುತ್ತಲೇ ಇರುತ್ತೇವೆ. [7]ನಾವು ಮತ್ತು ಅವರು ನಗರಕ್ಕೆ ದೂರವಾದ ಮೇಲೆ ನೀವು ಹೊಂಚಿ ನೋಡುವ ಸ್ಥಳದಿಂದ ಎದ್ದು ನಗರದೊಳಗೆ, ನುಗ್ಗಿ ಅದನ್ನು ಸ್ವಾಧೀನ ಮಾಡಿಕೊಳ್ಳಿ. ನಿಮ್ಮ ದೇವರಾದ ಸರ್ವೇಶ್ವರ ಅದನ್ನು ನಿಮ್ಮ ಕೈಗೆ ಒಪ್ಪಿಸುವರು. [8]ನೀವು ನಗರವನ್ನು ಹಿಡಿದ ಕೂಡಲೇ ಅದಕ್ಕೆ ಬೆಂಕಿ ಹೊತ್ತಿಸಿರಿ. ಸರ್ವೇಶ್ವರನ ಮಾತಿನಂತೆ ನಡೆಯಿರಿ. ಇದೇ ನಾನು ನಿಮಗೆ ಕೊಡುವ ಆಜ್ಞೆ," ಎಂದು ಹೇಳಿ ಅವರನ್ನು ರಾತ್ರಿಯಲ್ಲೇ ಕಳಿಸಿದನು. [9]ಅವರು ಹೊಂಚುಹಾಕುವ ಸಲುವಾಗಿ ಬೇತೇಲಿಗೂ ಆಯಿಗೂ ನಡುವೆ ಆಯಿಯ ಪಶ್ಚಿಮಕ್ಕೆ ಹೋಗಿ ಅಡಗಿಕೊಂಡರು. ಯೆಹೋಶುವನು ಆ ರಾತ್ರಿಯನ್ನು ಜನರ ಮಧ್ಯೆ ಕಳೆದನು.

10 ಬೆಳಿಗ್ಗೆ ಅವನೆದ್ದು ಇಸ್ರಯೇಲರ ಹಿರಿಯರ ಸಂಗಡ ಸೈನ್ಯವನ್ನು ಕೂಡಿಸಿ ಅವರ ಮುಂದೆ ಆಯಿಗೆ ಹೊರಟನು. [11]ಅವನೊಂದಿಗಿದ್ದ ಯೋಧರೆಲ್ಲರು ನಗರದ ಸಮೀಪಕ್ಕೆ ಏರಿಬಂದು ಅದರ ಉತ್ತರ ದಿಕ್ಕಿನಲ್ಲಿ ಇಳಿದುಕೊಂಡರು. ಅವರಿಗೂ ಆಯಿಗೂ ನಡುವೆ ಒಂದು ಕಣಿವೆ ಇತ್ತು. [12]ಯೆಹೋಶುವ ಸುಮಾರು ಐದು ಸಾವಿರ ಜನರನ್ನು ಆರಿಸಿಕೊಂಡು ಬೇತೇಲಿಗೂ ಆಯಿಗೂ ನಡುವೆ ನಗರದ ಪಶ್ಚಿಮದಲ್ಲಿ

ಹೊಂಚಿನೋಡುವುದಕ್ಕಾಗಿ ಇರಿಸಿದನು. 13ನಗರದ ಉತ್ತರದಲ್ಲಿದ್ದ ಸಮಸ್ತ ಸೈನ್ಯವನ್ನು, ನಗರದ ಪಶ್ಚಿಮದಲ್ಲಿ
ಹೊಂಚಿನೋಡುತ್ತಿದ್ದ ಸೈನ್ಯವನ್ನು ಕ್ರಮಪಡಿಸಿದ ನಂತರ ಅವನು ಆ ರಾತ್ರಿಯನ್ನು ಕಣಿವೆಯಲ್ಲಿ ಕಳೆದನು.
14ಬೆಳಿಗ್ಗೆ ಆಯಿ ಊರಿನರಸನು ಈ ಸಮಾಚಾರವನ್ನು ತಿಳಿದು ತ್ವರೆಯಾಗಿ ಜನರೆಲ್ಲರ ಸಹಿತ ಇಸ್ರಯೇಲರ
ಸಂಗಡ ಯುದ್ಧಮಾಡಲು ಹೊರಟನು. ಅವನೂ ಅವನ ಜನರೂ ಅರಾಬಾ ಎಂಬ ಸ್ಥಳಕ್ಕೆ ಎದುರಾಗಿದ್ದ
ಆ ಕಣಿವೆಗೆ ಬಂದರು. ನಗರದ ಹಿಂಭಾಗದಲ್ಲಿ ಹೊಂಚಿ ನೋಡುತ್ತಿರುವವರ ವಿಷಯ ಅವನಿಗೆ
ಗೊತ್ತಿರಲಿಲ್ಲ. 15ಯೆಹೋಶುವನೂ ಅವನ ಸಂಗಡ ಇದ್ದ ಇಸ್ರಯೇಲರೆಲ್ಲರೂ ತಾವು ಸೋತವರೋ
ಎಂಬಂತೆ ಅರಣ್ಯಮಾರ್ಗವಾಗಿ ಓಡತೊಡಗಿದರು. 16ಆಯಿ ನಗರದವರು ಊರಿನಲ್ಲಿದ್ದ ತಮ್ಮ ಎಲ್ಲ
ಜನರನ್ನು ಕರೆದುಕೊಂಡು ಯೆಹೋಶುವನನ್ನು ಹಿಂದಟ್ಟುತ್ತಾ ನಗರದಿಂದ ದೂರದೂರ ಆದರು. 17ಇತ್ತ
ಆಯಿಯಲ್ಲಿ ಹಾಗೂ ಬೇತೇಲಿನಲ್ಲಿ ಗಂಡಸರು ಇರಲಿಲ್ಲ. ಊರಬಾಗಿಲುಗಳನ್ನು ತೆರೆದಿಟ್ಟು ಎಲ್ಲರೂ
ಇಸ್ರಯೇಲರನ್ನು ಹಿಂದಟ್ಟಿ ಹೋಗಿದ್ದರು.

18 ಆಗ ಸರ್ವೇಶ್ವರ ಯೆಹೋಶುವನಿಗೆ, "ನಿನ್ನ ಕೈಯಲ್ಲಿರುವ ಈಟಿಯನ್ನು ಆಯಿಕಡೆಗೆ ಚಾಚು.
ಆ ನಗರವನ್ನು ನಿನ್ನ ಕೈಗೆ ಒಪ್ಪಿಸಿದ್ದೇನೆ," ಎಂದರು. ಅವನು ಅಂತೆಯೇ ಚಾಚಿದನು. 19ಚಾಚಿದ ಕೂಡಲೆ
ಹೊಂಚುಗಾರರು ತಾವಿದ್ದ ಸ್ಥಳದಿಂದ ಎದ್ದು ಓಡಿಬಂದು ನಗರದೊಳಕ್ಕೆ ನುಗ್ಗಿ ಒಡನೆ ಬೆಂಕಿ ಹೊತ್ತಿಸಿದರು.
20ಆಯಿಯ ಜನರು ಹಿಂದಿರುಗಿ ನೋಡಿದಾಗ ನಗರದ ಹೊಗೆ ಆಕಾಶಕ್ಕೆ ಏರುತ್ತಿತ್ತು. ಯಾವ
ಮಾರ್ಗದಿಂದಲೂ ಅವರಿಗೆ ತಪ್ಪಿಸಿಕೊಳ್ಳಲು ಆಗಲಿಲ್ಲ. ಏಕೆಂದರೆ ಅರಣ್ಯದ ಕಡೆಗೆ ಓಡಿ ಹೋಗುತ್ತಿದ್ದ
ಇಸ್ರಯೇಲರು ಹಿಂದಟ್ಟಿ ಬರುವವರ ಕಡೆಗೆ ತಿರುಗಿದ್ದರು. 21ನಗರವು ಹೊಂಚುಗಾರರಿಗೆ
ಸ್ವಾಧೀನವಾದುದನ್ನೂ ಹೊಗೆ ಆಕಾಶಕ್ಕೆ ಏರುತ್ತಿದ್ದುದನ್ನೂ ನೋಡಿದ ಯೆಹೋಶುವ ಹಾಗೂ ಇಸ್ರಯೇಲರು
ಹಿಂದಿರುಗಿ ಆಯಿ ಜನರ ಮೇಲೆ ಬಿದ್ದರು. 22ನಗರಕ್ಕೆ ನುಗ್ಗಿದವರೂ ಹೊರಗೆ ಬಂದು ಆ ಜನರ ಮೇಲೆ
ಎರಗಿದರು. ಹೀಗೆ ಆ ಕಡೆಯಿಂದಲೂ ಈ ಕಡೆಯಿಂದಲೂ ಇಸ್ರಯೇಲರ ಕೈಗೆ ಸಿಕ್ಕಿಬಿದ್ದರು. ಎಲ್ಲರನ್ನು
ಸದೆಬಡಿಯಲಾಯಿತು. ಒಬ್ಬನಾದರೂ ಉಳಿಯಲಿಲ್ಲ. ಯಾವನೂ ತಪ್ಪಿಸಿಕೊಳ್ಳಲಿಲ್ಲ. 23ಆಯಿಯ ಅರಸನನ್ನು
ಮಾತ್ರ ಜೀವಸಹಿತ ಹಿಡಿದು ಯೆಹೋಶುವನ ಬಳಿಗೆ ಕರೆದುಕೊಂಡು ಬಂದರು.

24 ಇಸ್ರಯೇಲರು ತಮ್ಮನ್ನು ಅರಣ್ಯದವರೆಗೂ ಬೆನ್ನಟ್ಟಿ ಬಂದ ಆಯಿ ಜನರನ್ನು ಅಲ್ಲೇ ಕತ್ತಿಯಿಂದ
ಸಂಹರಿಸಿದ ನಂತರ ಅವರೆಲ್ಲರು ನಗರಕ್ಕೆ ಹೋಗಿ ಅಲ್ಲಿದ್ದವರನ್ನೂ ಕೊಂದರು. 25ಆ ದಿನ ಆಯಿ ಜನರಲ್ಲಿ
ಸತ್ತ ಗಂಡಸರ ಮತ್ತು ಹೆಂಗಸರ ಸಂಖ್ಯೆ ಹನ್ನೆರಡು ಸಾವಿರ. 26ಆ ನಗರದವರೆಲ್ಲರು ಹತರಾಗುವವರೆಗೆ
ಯೆಹೋಶುವ ಈಟಿ ಹಿಡಿದು ಚಾಚಿದ ಕೈಯನ್ನು ಹಿಂದೆಗೆಯಲಿಲ್ಲ. 27ಸರ್ವೇಶ್ವರ ಯೆಹೋಶುವನಿಗೆ
ಆಜ್ಞಾಪಿಸಿದಂತೆ ಇಸ್ರಯೇಲರು ಆ ನಗರದಿಂದ ಪಶುಪ್ರಾಣಿ ಮೊದಲಾದವುಗಳನ್ನು ಮಾತ್ರ ಕೊಳ್ಳೆಯಾಗಿ
ತೆಗೆದುಕೊಂಡರು. 28ಯೆಹೋಶುವನು ಆಯಿ ನಗರವನ್ನು ಸುಟ್ಟು ಅದು ಎಂದಿಗೂ ಮರಳಿ ಕಟ್ಟಲಾಗದಂತೆ
ಹಾಳು ದಿಬ್ಬವಾಗಿಸಿಬಿಟ್ಟನು. ಅದು ಇಂದಿನವರೆಗೂ ಹಾಗೆಯೆ ಉಳಿದಿದೆ. 29ಆಯಿಯ ಅರಸನನ್ನು
ಸಂಜೆಯವರೆಗೂ ಮರಕ್ಕೆ ನೇತುಹಾಕಿಸಿದನು. ಸೂರ್ಯನು ಅಸ್ತಮಿಸುತ್ತಲೆ ಅವನ ಶವವನ್ನು ಕೆಳಗಿಳಿಸಿ
ಅದನ್ನು ಊರಬಾಗಿಲಲ್ಲಿ ಹಾಕಿಸಿ ಅದರ ಮೇಲೆ ಕಲ್ಲಿನ ದೊಡ್ಡ ರಾಶಿಯನ್ನು ಮಾಡಿಸಿದನು. ಅದು
ಇಂದಿನವರೆಗೂ ಹಾಗೆಯೇ ಇದೆ.

## ಏಬಾಲ್ ಬೆಟ್ಟದಲ್ಲಿ ಧರ್ಮಶಾಸ್ತ್ರದ ಪಾರಾಯಣ

30 ಸರ್ವೇಶ್ವರನ ದಾಸ ಮೋಶೆ ಇಸ್ರಯೇಲರಿಗೆ ಆಜ್ಞಾಪಿಸಿದ್ದಂತೆ ಹಾಗೂ ಮೋಶೆಯ
ಧರ್ಮಶಾಸ್ತ್ರದಲ್ಲಿ ಬರೆದಿರುವಂತೆ ಯೆಹೋಶುವನು ಇಸ್ರಯೇಲ್ ದೇವರಾದ ಸರ್ವೇಶ್ವರನಿಗೆ ಏಬಾಲ್
ಬೆಟ್ಟದಲ್ಲಿ ಒಂದು ಬಲಿಪೀಠವನ್ನು ಕಟ್ಟಿಸಿದನು. ಯಾವ ಕಬ್ಬಿಣವೂ ಮುಟ್ಟದ ಹುಟ್ಟುಕಲ್ಲುಗಳಿಂದಲೇ ಅದನ್ನು
ಕಟ್ಟಿಸಿದನು. 31ಜನರು ಅದರ ಮೇಲೆ ಸರ್ವೇಶ್ವರನಿಗೆ ದಹನ ಹೋಮಬಲಿಗಳನ್ನೂ ಸಮಾಧಾನಬಲಿಗಳನ್ನೂ
ಸಮರ್ಪಿಸಿದರು. 32ಯೆಹೋಶುವನು ಅಲ್ಲಿದ್ದ ಕಲ್ಲುಗಳ ಮೇಲೆ ಜನರೆಲ್ಲರ ಸಮಕ್ಷಮದಲ್ಲಿ ಮೋಶೆಯ
ಧರ್ಮಶಾಸ್ತ್ರದ ಒಂದು ಪ್ರತಿಯನ್ನು ಬರೆದನು. 33ಎಲ್ಲ ಇಸ್ರಯೇಲರು, ಅಂದರೆ ಹಿರಿಯರು, ಅಧಿಕಾರಿಗಳು,
ನ್ಯಾಯಾಧಿಪತಿಗಳು, ಅನ್ಯದೇಶೀಯರು ಹಾಗೂ ಸ್ವದೇಶೀಯರು ಸರ್ವೇಶ್ವರನ ಒಡಂಬಡಿಕೆಯ

ಮಂಜೂಷದ ಎಡಬಲಗಳಲ್ಲಿ ನಿಂತರು. ಆ ಮಂಜೂಷವನ್ನು ಹೊತ್ತು ಲೇವಿಯರಾದ ಯಾಜಕರಿಗೆ ಅಭಿಮುಖರಾಗಿ ನಿಂತರು. ಗೆರಿಜ್ಜೀಮ್ ಬೆಟ್ಟದ ಕಡೆ ಅರ್ಧ ಜನ, ಏಬಾಲ್ ಬೆಟ್ಟದ ಕಡೆ ಅರ್ಧ ಜನ, ಹೀಗೆ ಸರ್ವೇಶ್ವರನ ದಾಸ ಮೋಶೆ ಮೊದಲೇ ಹೇಳಿದ್ದಂತೆ ಆಶೀರ್ವಾದಗಳನ್ನು ಪಡೆಯುವುದಕ್ಕೋಸ್ಕರ
ನಿಂತರು. [34]ಅನಂತರ ಯೆಹೋಶುವನು ಧರ್ಮಶಾಸ್ತ್ರದ ಎಲ್ಲಾ ಆಶೀರ್ವಾದ ಹಾಗು ಶಾಪವಾಕ್ಯಗಳನ್ನು ಆ
ಗ್ರಂಥದಲ್ಲಿ ಇದ್ದ ಹಾಗೆಯೇ ಓದಿದನು. [35]ಮೋಶೆ ಆಜ್ಞಾಪಿಸಿದ್ದರಲ್ಲಿ ಒಂದನ್ನೂ ಬಿಡದೆ ಮಹಿಳೆಯರಿಗೂ
ಮಕ್ಕಳಿಗೂ ಅನ್ಯದೇಶೀಯರಿಗೂ ಕೇಳಿಸುವಂತೆ ಸರ್ವಸಮೂಹದ ಮುಂದೆ ಓದಿದನು.

### ಗಿಬೋನ್ಯರಿಗೂ ಇಸ್ರಯೇಲರಿಗೂ ಆದ ಒಪ್ಪಂದ

**9** ಜೋರ್ಡನ್ ಹೊಳೆಯ ಆಚೆ ಬೆಟ್ಟದ ಪ್ರದೇಶ, ಕಣಿವೆ ಪ್ರದೇಶ, ಲೆಬನೋನಿನ ಎದುರಿಗಿರುವ ಮಹಾಸಾಗರದ ತೀರಪ್ರದೇಶ ಇವುಗಳಲ್ಲಿ ವಾಸವಾಗಿದ್ದ ಅಮೋರಿಯ, ಹಿತ್ತಿಯ, ಕಾನಾನ್, ಪೆರಿಜ್ಜೀಯ, ಹಿವ್ವಿಯ, ಯೆಬೂಸಿಯ ರಾಜರು ನಡೆದ ಸಂಗತಿಯನ್ನು ಕೇಳಿದರು. [2]ಯೆಹೋಶುವನಿಗೂ
ಇಸ್ರಯೇಲರಿಗೂ ವಿರುದ್ಧ ಯುದ್ಧಮಾಡಬೇಕೆಂದು ಒಮ್ಮನಸ್ಸಿನಿಂದ ಕೂಡಿಕೊಂಡರು.

3 ಜೆರಿಕೋದವರನ್ನು ಮತ್ತು ಆಯಿ ಜನರನ್ನು ಯೆಹೋಶುವನು ಸಂಹರಿಸಿದ ಸುದ್ದಿ ಗಿಬ್ಯೋನಿನ
ನಿವಾಸಿಗಳಿಗೆ ಮುಟ್ಟಿತು. [4]ಅವರು ಒಂದು ಉಪಾಯವನ್ನು ಹೂಡಿದರು. ಅದೇನೆಂದರೆ – ಅವರು ತಮ್ಮ
ಕತ್ತೆಗಳ ಮೇಲೆ ಹಳೆಯ ಗೋಣಿ ತಟ್ಟುಗಳನ್ನು ಹಾಕಿ ಅವುಗಳ ಮೇಲೆ ತೇಪೆ ಹಾಕಿದ ದ್ರಾಕ್ಷಾರಸದ ಹಳೆಯ
ಬುದ್ದಲಿಗಳನ್ನು ಹೇರಿದರು. [5]ಹರಿದುಹೋಗಿದ್ದ ಹಳೆಯ ಕೆರಗಳನ್ನು ಮೆಟ್ಟಿಕೊಂಡರು. ಹಳೆಯ
ಬಟ್ಟೆಬರೆಗಳನ್ನು ಹಾಕಿಕೊಂಡರು. ಒಣರೊಟ್ಟಿ ಚೂರುಗಳನ್ನು ಬುತ್ತಿಯಾಗಿ ಕಟ್ಟಿಕೊಂಡರು. [6]ತಾವೂ
ರಾಯಭಾರಿಗಳೆಂದು ಗಿಲ್ಗಾಲಿನಲ್ಲಿದ್ದ ಯೆಹೋಶುವನ ಪಾಳೆಯಕ್ಕೆ ಬಂದರು. ಅವನಿಗೂ ಇಸ್ರಯೇಲರಿಗೂ
"ನಾವು ದೂರದೇಶದಿಂದ ಬಂದವರು. ನೀವು ನಮ್ಮ ಸಂಗಡ ಒಂದು ಒಪ್ಪಂದ ಮಾಡಿಕೊಳ್ಳಿ," ಎಂದು
ಕೇಳಿಕೊಂಡರು.

7 ಆಗ ಇಸ್ರಯೇಲರು ಹಿವ್ವಿಯರಾದ ಅವರಿಗೆ, "ಬಹುಶಃ ನೀವು ನಮ್ಮ ನಾಡಿನ ನಿವಾಸಿಗಳೇ
ಆಗಿರಬಹುದು. ಆದುದರಿಂದ ನಾವು ನಿಮ್ಮ ಸಂಗಡ ಒಪ್ಪಂದ ಮಾಡಿಕೊಳ್ಳುವುದು ಹೇಗೆ?" ಎಂದು
ಉತ್ತರಿಸಿದರು. [8]ಅವರು ಯೆಹೋಶುವನಿಗೆ, "ನಾವು ನಿಮ್ಮ ಸೇವಕರು" ಎಂದರು. "ನೀವು ಯಾರು?
ಎಲ್ಲಿಯವರು?" ಎಂದು ಆತ ವಿಚಾರಿಸಲು [9]ಅವರು, "ನಿಮ್ಮ ಸೇವಕರಾದ ನಾವು ನಿಮ್ಮ ದೇವರಾದ
ಸರ್ವೇಶ್ವರನ ನಾಮ ಮಹತ್ತನ್ನು ಕೇಳಿ ಬಹುದೂರ ದೇಶದಿಂದ ಬಂದಿದ್ದೇವೆ. ಆ ನಿಮ್ಮ ದೇವರು
ಈಜಿಪ್ಟಿನಲ್ಲಿ ನಡೆಸಿದ ಮಹತ್ಕಾರ್ಯಗಳ ಸುದ್ದಿಯನ್ನು ನಮ್ಮ ಹಿರಿಯರೂ ದೇಶ ನಿವಾಸಿಗಳೂ ಕೇಳಿದ್ದಾರೆ.
[10]ಹೆಷ್ಬೋನಿನ ಅರಸ ಸೀಹೋನ್ ಮತ್ತು ಅಷ್ಟರೋತಿನಲ್ಲಿ ವಾಸವಾಗಿದ್ದ ಬಾಷಾನಿನ ಅರಸ ಓಗ್ ಎಂಬ
ಈ ಇಬ್ಬರು ಅಮೋರಿಯರಿಗೆ ಆ ದೇವರು ಮಾಡಿದ್ದೆಲ್ಲವನ್ನು ಕೇಳಿದ್ದಾರೆ. [11]ಅವರು ನಮ್ಮನ್ನು ಇಲ್ಲಿಗೆ
ಕಳಿಸುತ್ತಾ, 'ನೀವು ಪ್ರಯಾಣಕ್ಕಾಗಿ ಬುತ್ತಿ ಕಟ್ಟಿಕೊಂಡು ಹೋಗಿ ಇಸ್ರಯೇಲರನ್ನು ಎದುರುಗೊಳ್ಳಿ – ನಾವು
ನಿಮ್ಮ ಸೇವಕರು, ನೀವು ನಮ್ಮ ಸಂಗಡ ಒಪ್ಪಂದ ಮಾಡಿಕೊಳ್ಳಿ ಎಂದು ವಿನಂತಿಸಿ,' ಎಂದು ಹೇಳಿದರು.
[12]ನಾವು ನಿಮ್ಮನ್ನು ಭೇಟಿಯಾಗುವುದಕ್ಕಾಗಿ ಮನೆಬಿಟ್ಟು ಹೊರಟಾಗ ಪ್ರಯಾಣಕ್ಕೆಂದು ತೆಗೆದುಕೊಂಡ ಈ
ರೊಟ್ಟಿ ಬಿಸಿಯಾಗಿತ್ತು. ಈಗ ಒಣಗಿ ಚೂರು ಚೂರಾಗಿದೆ ನೋಡಿ. [13]ದ್ರಾಕ್ಷಾರಸ ತುಂಬಿಸಿಕೊಂಡಿದ್ದ ಈ
ಬುದ್ಧಲಿಗಳು ಹೊಸದಾಗಿದ್ದವು. ಈಗ ಹರಿದುಹೋಗಿವೆ. ನಮ್ಮ ಬಟ್ಟೆಬರೆಗಳು ಹಾಗೂ ಕೆರಗಳು ದೀರ್ಘ
ಪ್ರಯಾಣದಿಂದ ಸವೆದು ಹೋಗಿವೆ," ಎಂದು ವಿವರಿಸಿದರು.

14 ಆಗ ಇಸ್ರಯೇಲರು ಅವರ ಬುತ್ತಿಯಲ್ಲಿ ಸ್ವಲ್ಪ ತೆಗೆದುಕೊಂಡರು. ಆದರೆ ಸರ್ವೇಶ್ವರ ಸ್ವಾಮಿಯ
ಅಪ್ಪಣೆಯನ್ನು ಕೇಳಲಿಲ್ಲ. [15]ಯೆಹೋಶುವ ಅವರೊಡನೆ, "ನಿಮ್ಮ ಜೀವವನ್ನು ಕಾಪಾಡುತ್ತೇವೆ" ಎಂದು
ಶಾಂತಿಸಂಧಾನ ಮಾಡಿಕೊಂಡನು. ಸಭೆಯ ನಾಯಕರೂ ಅಂತೆಯೇ ಪ್ರಮಾಣ ಮಾಡಿದರು.

16 ಈ ಒಪ್ಪಂದವಾದ ಮೂರು ದಿನಗಳ ಮೇಲೆ ಅವರು ತಮ್ಮ ನೆರೆಯವರೆಂದೂ ತಮ್ಮ ಮಧ್ಯೆ
ವಾಸಿಸುವವರೆಂದೂ ಇಸ್ರಯೇಲರಿಗೆ ಗೊತ್ತಾಯಿತು. [17]ಹೇಗೆಂದರೆ ಮೂರನೆಯ ದಿನದಂದು ಇಸ್ರಯೇಲರು

ಹೊರಟು ಗಿಬ್ಯೋನ್, ಕೆಫೀರಾ, ಬೇರೋತ್, ಕಿರ್ಯತ್ಯಾರೀಮ್ ಎಂಬ ಊರುಗಳನ್ನು ಸೇರಿದರು. ಆಗ
ಆ ಊರುಗಳು ಆ ಜನರದ್ದೇ ಎಂದು ಗೊತ್ತಾಯಿತು. [18]ಸಭೆಯ ನಾಯಕರು ಇಸ್ರಯೇಲ್ ದೇವರಾದ
ಸರ್ವೇಶ್ವರನ ಹೆಸರಿನಲ್ಲಿ ಆ ಜನರಿಗೆ ಪ್ರಮಾಣ ಮಾಡಿದ್ದರಿಂದ ಇಸ್ರಯೇಲರು ಅವರನ್ನು ಕೊಲ್ಲಲಿಲ್ಲ.
ಆದರೆ ಸಭಿಕರೆಲ್ಲರು ಅವರನ್ನು ಕೊಲ್ಲಲಿಲ್ಲ. ಆದರೆ ಸಭಿಕರೆಲ್ಲರು ತಮ್ಮ ನಾಯಕರಿಗೆ ವಿರುದ್ಧ
ಗೊಣಗುಟ್ಟಿದರು. [19]ಆಗ ನಾಯಕರೆಲ್ಲರು ಸಭೆಯ ಎಲ್ಲ ಸದಸ್ಯರಿಗೆ, "ನಾವು ಇಸ್ರಯೇಲ್ ದೇವರಾದ
ಸರ್ವೇಶ್ವರನ ಹೆಸರಿನಲ್ಲಿ ಅವರಿಗೆ ಪ್ರಮಾಣ ಮಾಡಿದ್ದರಿಂದ ಅವರನ್ನು ಮುಟ್ಟಲಾಗದು. [20]ನಾವು ಇಟ್ಟ
ಆಣೆಯ ನಿಮಿತ್ತ ದೇವರ ಕೋಪ ನಮ್ಮ ಮೇಲೆ ಬಾರದಂತೆ ಅವರನ್ನು ಜೀವದಿಂದ ಉಳಿಸಬೇಕು. ನಾವು
ಹೀಗೆ ಮಾಡೋಣ: ಅವರನ್ನು ಬದುಕಲು ಬಿಟ್ಟುಬಿಡಿ. [21]ಆದರೆ ನಮ್ಮ ಜನರಿಗೆ ಅವರು ಕಟ್ಟಿಗೆ
ಕಡಿಯುವವರೂ ನೀರು ತರುವವರೂ ಆಗಿರಲಿ," ಎಂದು ಹೇಳಿದರು. ನಾಯಕರ ಮಾತಿನಂತೆಯೇ
ಆಯಿತು. [22]ಯೆಹೋಶುವನು ಗಿಬ್ಯೋನ್ಯರನ್ನು ಕರೆಸಿ, "ನೀವು ನಮ್ಮ ನಡುವೆ ವಾಸಿಸುವವರಾಗಿದ್ದರೂ
ಬಹು ದೂರದವರೆಂದು ಹೇಳಿ ನಮ್ಮನ್ನು ವಂಚಿಸಿದ್ದೇಕೆ? [23]ಇದರಿಂದಾಗಿ ನೀವು ಶಾಪಗ್ರಸ್ತರು! ನೀವು
ಯಾವಾಗಲೂ ಊಳಿಗದವರಾಗಿದ್ದು, ನನ್ನ ದೇವರ ಮಂದಿರಕ್ಕೆ ಕಟ್ಟಿಗೆ ಕಡಿಯುವವರೂ ನೀರು
ತರುವವರೂ ಆಗಿರಬೇಕು," ಎಂದನು.

24 ಅವರು ಯೆಹೋಶುವನಿಗೆ, "ನಿಮ್ಮ ದೇವರಾದ ಸರ್ವೇಶ್ವರ ತಮ್ಮ ದಾಸ ಮೋಶೆಗೆ, 'ನಾನು
ನಿಮಗೆ ಈ ದೇಶವನ್ನೆಲ್ಲ ಕೊಡುವಾಗ ನೀವು ಇದರ ನಿವಾಸಿಗಳನ್ನೆಲ್ಲಾ ಸಂಹರಿಸಬೇಕು,' ಎಂದು
ಆಜ್ಞಾಪಿಸಿದ್ದಾರೆಂದು ಕೇಳಿ ನಮ್ಮ ಪ್ರಾಣ ತೆಗೆಯುವಿರೆಂದು ಹೆದರಿ ಹೀಗೆ ಮಾಡಿದೆವು. [25]ಇಗೋ, ಈಗ
ನಾವು ನಿಮ್ಮ ಕೈಯಲ್ಲಿ ಇದ್ದೇವೆ. ನಿಮಗೆ ಯಾವುದು ಒಳ್ಳೆಯದು, ನ್ಯಾಯವಾದುದು ಎಂದು ತೋರುತ್ತದೋ
ಅದರಂತೆ ನಮಗೆ ಮಾಡಿ," ಎಂದು ಉತ್ತರಕೊಟ್ಟರು. [26]ಯೆಹೋಶುವನು ತಾನು ಮೊದಲೇ ಹೇಳಿದಂತೆ
ಮಾಡಿದನು. ಅವರನ್ನು ಇಸ್ರಯೇಲರ ಕೈಯಿಂದ ಹತರಾಗದಂತೆ ತಪ್ಪಿಸಿದನು. [27]ಸಭೆಗೂ ಸರ್ವೇಶ್ವರ
ಆಯ್ದುಕೊಂಡ ಸ್ಥಳದಲ್ಲಿ ಕಟ್ಟಲಾಗುವ ಬಲಿಪೀಠಕ್ಕೂ ಕಟ್ಟಿಗೆ ಕಡಿಯುವವರನ್ನಾಗಿ ಹಾಗೂ ನೀರು
ತರುವವರನ್ನಾಗಿ ನೇಮಿಸಿದನು. ಅವರು ಇಂದಿನವರೆಗೂ ಅದೇ ಊಳಿಗದಲ್ಲಿದ್ದಾರೆ.

### ಅಮೋರಿಯಾದ ಐವರು ಅರಸರ ಮೇಲೆ ಜಯ

**10** ಯೆಹೋಶುವನು ಆಯಿ ನಗರವನ್ನು, ಅದರ ಅರಸನನ್ನು ಹಿಡಿದು ಜೆರಿಕೋವನ್ನೂ ಅದರ
ಅರಸನನ್ನೂ ಹೇಗೋ ಹಾಗೆ ಸಂಹರಿಸಿಬಿಟ್ಟನೆಂದು ಜೆರುಸಲೇಮಿನ ಅರಸ ಅದೋನೀಚೆದೆಕನು
ತಿಳಿದುಕೊಂಡನು. [2]ಆಯಿ ನಗರಕ್ಕಿಂತ ದೊಡ್ಡದೂ ಒಂದು ರಾಜಧಾನಿಯಷ್ಟು ಶ್ರೇಷ್ಠವೂ ಆಗಿದ್ದ ಗಿಬ್ಯೋನ್
ನಗರದಲ್ಲಿ ಇರುವ ಜನರೆಲ್ಲರು ಯುದ್ಧವೀರರಾಗಿದ್ದರೂ ಇಸ್ರಯೇಲರ ನಡುವೆ ಜೀವದಿಂದುಳಿಯಲು ಅವರ
ಸಂಗಡ ಸಂಧಾನ ಮಾಡಿಕೊಂಡಿದ್ದಾರೆ ಎಂಬುದನ್ನು ಕೂಡ ಕೇಳಿ ಅವನು ಬಹಳವಾಗಿ ಭಯಪಟ್ಟನು.
[3]ಆದುದರಿಂದ ಹೆಬ್ರೋನಿನ ಅರಸ ಹೋಹಾಮ್, ಯರ್ಮೂತಿನ ಅರಸ ಪಿರಾಮ್, ಲಾಕೀಷಿನ ಅರಸ
ಯಾಫೀಯ, ಎಗ್ಲೋನಿನ ಅರಸ ದೆಬೀರ್ ಇವರ ಬಳಿಗೆ ದೂತರನ್ನು ಕಳುಹಿಸಿದನು. [4]"ನೀವು ಬಂದು
ನನಗೆ ಸಹಾಯ ಮಾಡಿ, ನಾವು ಯೆಹೋಶುವನೊಂದಿಗೂ ಇಸ್ರಯೇಲರೊಂದಿಗೂ ಒಪ್ಪಂದ
ಮಾಡಿಕೊಂಡು ಗಿಬ್ಯೋನ್ಯರನ್ನು ಸೋಲಿಸೋಣ," ಎಂದು ಹೇಳಿಕಳಿಸಿದನು. [5]ಅಂತೆಯೇ ಜೆರುಸಲೇಮ್,
ಹೆಬ್ರೋನ್, ಯರ್ಮೂತ್, ಲಾಕೀಷ್, ಎಗ್ಲೋನ್ ಎಂಬ ನಗರಗಳ ಐದು ಮಂದಿ ಅಮೋರಿಯ ರಾಜರು
ದಂಡೆತ್ತಿ ಕೂಡಿ ಬಂದರು. ಗಿಬ್ಯೋನಿಗೆ ಮುತ್ತಿಗೆ ಹಾಕಿ ಯುದ್ಧ ಮಾಡಿದರು.

6 ಗಿಬ್ಯೋನ್ಯರು ಗಿಲ್ಗಾಲಿನಲ್ಲಿದ್ದ ಯೆಹೋಶುವನ ಪಾಳೆಯಕ್ಕೆ ದೂತರನ್ನು ಕಳಿಸಿದರು. "ನಿಮ್ಮ
ಸೇವಕರಾದ ನಮ್ಮನ್ನು ಕೈಬಿಡಬೇಡಿ. ಬೇಗನೆ ಬಂದು ಸಹಾಯ ಮಾಡಿ. ನಮಗೆ ವಿರುದ್ಧ ಕೂಡಿಬಂದಿರುವ
ಈ ಬೆಟ್ಟದ ಸೀಮೆಯ ಎಲ್ಲ ಅಮೋರಿಯ ರಾಜರಿಂದ ನಮ್ಮನ್ನು ತಪ್ಪಿಸಿ," ಎಂದು ಬೇಡಿಕೊಂಡರು.

7 ಆಗ ಯೆಹೋಶುವ ಎಲ್ಲಾ ಯೋಧರ ಮತ್ತು ಯುದ್ಧವೀರರ ಸಮೇತ ಗಿಲ್ಗಾಲಿನಿಂದ
ಹೊರಟನು. [8]ಸರ್ವೇಶ್ವರಸ್ವಾಮಿ ಯೆಹೋಶುವನಿಗೆ "ಹೆದರಬೇಡ, ಅವರನ್ನು ನಿನ್ನ ಕೈಗೆ ಒಪ್ಪಿಸಿದ್ದೇನೆ.

ಅವರಲ್ಲಿ ಒಬ್ಬನೂ ನಿನ್ನ ಮುಂದೆ ನಿಲ್ಲುವುದಿಲ್ಲ," ಎಂದರು. [9]ಯೆಹೋಶುವನು ಗಿಲ್ಗಾಲ್ ಬಿಟ್ಟು ರಾತ್ರಿಯೆಲ್ಲಾ
ಪ್ರಯಾಣ ಮಾಡಿ ತಟ್ಟನೆ ಅವರ ಮೇಲೆ ಬಿದ್ದನು. [10]ಆ ಅಮೋರಿಯರಲ್ಲಿ ಇಸ್ರಯೇಲರ ಬಗ್ಗೆ ಸರ್ವೇಶ್ವರ
ಭಯ ಹುಟ್ಟಿಸಿದರು. ಆದುದರಿಂದ ಯೆಹೋಶುವನು ಅವರನ್ನು ಗಿಬ್ಯೋನಿನ ಹತ್ತಿರ ಸಂಪೂರ್ಣವಾಗಿ
ಸೋಲಿಸಿ ಬೇತ್‍ಹೋರೋನ್ ಎಂಬ ಮೇಡು ದಾರಿಯಲ್ಲಿ ಅಜೇಕ, ಮಕ್ಕೇದ ಎಂಬ ಊರುಗಳವರೆಗೆ
ಅವರನ್ನು ಹಿಂದಟ್ಟಿ ಸಂಹರಿಸಿದನು. [11]ಅವರು ಇಸ್ರಯೇಲರಿಗೆ ಬೆಂಗೊಟ್ಟು ಬೇತ್‍ಹೋರೋನಿನ
ಇಳಿಜಾರಿನಲ್ಲಿ ಓಡುತ್ತಾ ಅಜೇಕವನ್ನು ಮುಟ್ಟುವವರೆಗೂ ಸರ್ವೇಶ್ವರ ಆಕಾಶದಿಂದ ದೊಡ್ಡ ಕಲ್ಮಳೆಯನ್ನು
ಸುರಿಸಿದರು. ಈ ಕಾರಣ ಅನೇಕರು ಸತ್ತರು. ಇಸ್ರಯೇಲರ ಕತ್ತಿಗೆ ಈಡಾದವರಿಗಿಂತ ಕಲ್ಮಳೆಯಿಂದ
ನಾಶವಾದವರೇ ಹೆಚ್ಚುಮಂದಿ.

12 ಸರ್ವೇಶ್ವರ ಅಮೋರಿಯರನ್ನು ಇಸ್ರಯೇಲರಿಗೆ ವಶಪಡಿಸಿದ ದಿನದಂದು ಯೆಹೋಶುವನು
ಸರ್ವೇಶ್ವರನಲ್ಲಿ ಒಂದು ವಿಜ್ಞಾಪನೆ ಮಾಡಿ ಇಸ್ರಯೇಲರ ಕಣ್ಮುಂದೆಯೇ,

"ಸೂರ್ಯನೇ, ನೀ ನಿಲ್ಲು
ಗಿಬ್ಯೋನಿನಲ್ಲೇ;
ಚಂದ್ರನೇ, ನೀ ನಿಲ್ಲು
ಅಯ್ಯಾಲೋನ್ ಕಣಿವೆಯಲ್ಲೇ"

ಎಂದು ಆಜ್ಞಾಪಿಸಿದನು. [13]ಇಸ್ರಯೇಲರು ತಮ್ಮ ಶತ್ರುಗಳಿಗೆ ಮುಯ್ಯಿ ತೀರಿಸುವ ತನಕ ಸೂರ್ಯ ಚಂದ್ರರು
ಹಾಗೆಯೇ ನಿಂತರು. ಇದನ್ನು 'ಯಾಷಾರ್' ಗ್ರಂಥದಲ್ಲಿ ಬರೆದಿದೆಯಲ್ಲವೆ? ಹೀಗೆ ಸೂರ್ಯ ಮುಳುಗಲು
ಆತುರಪಡದೆ ಹೆಚ್ಚುಕಡಿಮೆ ಒಂದು ದಿನವೆಲ್ಲ ಆಕಾಶದ ಮಧ್ಯದಲ್ಲೆ ನಿಂತಿತು. [14]ಆ ಪ್ರಕಾರ ಹಿಂದೆಯಾಗಲಿ
ಮುಂದೆಯಾಗಲಿ ಸರ್ವೇಶ್ವರ ಒಬ್ಬ ಮನುಷ್ಯನ ಮಾತಿಗೆ ಕಿವಿಗೊಟ್ಟಂಥ ದಿವಸ ಇಲ್ಲವೇ ಇಲ್ಲ!
ಸರ್ವೇಶ್ವರಸ್ವಾಮಿ ತಾವೇ ಇಸ್ರಯೇಲರ ಪರವಾಗಿ ಯುದ್ಧಮಾಡುತ್ತಿದ್ದರು. [15]ಯೆಹೋಶುವನು
ಇಸ್ರಯೇಲರೆಲ್ಲರೊಂದಿಗೆ ಗಿಲ್ಗಾಲಿನ ಪಾಳೆಯಕ್ಕೆ ಹಿಂದಿರುಗಿದನು.

**ಐದುಮಂದಿ ಅರಸರ ವಿನಾಶ**

16 ಆ ಐದು ಮಂದಿ ಅರಸರು ಓಡಿಹೋಗಿ ಮಕ್ಕೇದದ ಗವಿಯಲ್ಲಿ ಅವಿತುಕೊಂಡರು [17]ಜನರು
ಯೆಹೋಶುವನಿಗೆ, "ಆ ಐದುಮಂದಿ ನಮಗೆ ಸಿಕ್ಕಿದ್ದಾರೆ. ಅವರು ಮಕ್ಕೇದದ ಗವಿಯಲ್ಲಿ
ಅವಿತುಕೊಂಡಿದ್ದಾರೆ," ಎಂದು ತಿಳಿಸಿದರು. [18]ಆಗ ಯೆಹೋಶುವನು ಅವರಿಗೆ, "ಆ ಗವಿಯ ಬಾಯಿಗೆ
ದೊಡ್ಡ ಕಲ್ಲುಗಳನ್ನು ಹೊರಳಿಸಿ ಕಾಯುವುದಕ್ಕೆ ಕೆಲವರನ್ನಿಡಿ. ನೀವಾದರೋ ಅಲ್ಲೇ ನಿಂತುಕೊಳ್ಳಬೇಡಿ.
ಬೇಗನೆ ಹಿಂದಟ್ಟಿ ಹಿಂದಾದ ವ್ಯಕ್ತಿಗಳನ್ನು ಹತಮಾಡುತ್ತಾ ಹೋಗಿ. [19]ಅವರನ್ನು ಅವರ ನಗರಗಳಲ್ಲಿ
ಸೇರಗೊಡಿಸಬೇಡಿ. ನಿಮ್ಮ ದೇವರಾದ ಸರ್ವೇಶ್ವರ ಅವರನ್ನು ನಿಮ್ಮ ಕೈಗೆ ಒಪ್ಪಿಸಿದ್ದಾರಲ್ಲವೆ?" ಎಂದನು.
[20]ಹೀಗೆ ಯೆಹೋಶುವನು ಹಾಗೂ ಇಸ್ರಯೇಲರು ಅವರನ್ನು ಸಂಪೂರ್ಣವಾಗಿ ಸೋಲಿಸಿ ಸಂಹರಿಸಿದರು.
ಕೆಲವರು ಮಾತ್ರ ತಪ್ಪಿಸಿಕೊಂಡು ಕೋಟೆ ಕೊತ್ತಲಗಳಿದ್ದ ಪಟ್ಟಣಗಳನ್ನು ಸೇರಿಕೊಂಡರು.
[21]ಇಸ್ರಯೇಲರಾದರೋ ಮಕ್ಕೇದದಲ್ಲಿದ್ದ ಯೆಹೋಶುವನ ಬಳಿಗೆ ಸುರಕ್ಷಿತವಾಗಿ ಬಂದರು. ಇಸ್ರಯೇಲರ
ವಿರುದ್ಧ ಯಾರೊಬ್ಬನೂ ನಾಲಿಗೆ ಮಸೆಯಲಿಲ್ಲ.

22 ಅನಂತರ ಯೆಹೋಶುವನು ಜನರಿಗೆ, "ಗವಿಯ ಬಾಯನ್ನು ತೆರೆದು ಆ ಐದು ಮಂದಿ
ಅರಸರನ್ನು ನನ್ನ ಬಳಿಗೆ ತನ್ನಿ," ಎಂದನು. [23]ಅವರು ಹೋಗಿ ಜೆರುಸಲೇಮ್, ಹೆಬ್ರೋನ್, ಯರ್ಮೂತ್,
ಲಾಕೀಷ್ ಮತ್ತು ಎಗ್ಲೋನ್ ಎಂಬ ನಗರಗಳ ಐದು ಮಂದಿ ಅರಸರನ್ನು ಗವಿಯಿಂದ ಎಳೆದು ಅವನ
ಬಳಿಗೆ ತಂದರು. [24]ತಂದ ಮೇಲೆ ಯೆಹೋಶುವನು ಎಲ್ಲಾ ಇಸ್ರಯೇಲರನ್ನು ಕರೆಸಿ ತನ್ನ ಜೊತೆಯಲ್ಲಿ
ಬಂದಿದ್ದ ಸೇನಾಧಿಪತಿಗಳಿಗೆ, "ಹತ್ತಿರ ಬಂದು ಆ ಅರಸರ ಕೊರಳಿನ ಮೇಲೆ ನಿಮ್ಮ ಪಾದಗಳನ್ನಿಡಿ," ಎಂದು
ಹೇಳಿದನು. ಅಂತೆಯೇ ಅವರು ಹತ್ತಿರ ಬಂದು ಕುತ್ತಿಗೆಯ ಮೇಲೆ ಕಾಲಿಟ್ಟರು. [25]ಆಗ ಅವನು ಅವರಿಗೆ,
"ಅಂಜಬೇಡಿ, ಕಳವಳಗೊಳ್ಳಬೇಡಿ, ಸ್ಥಿರಚಿತ್ತರಾಗಿರಿ, ಧೈರ್ಯದಿಂದಿರಿ. ನಿಮ್ಮೊಡನೆ ಯುದ್ಧಕ್ಕೆ ಬರುವ ಎಲ್ಲ
ಶತ್ರುಗಳಿಗೂ ಸರ್ವೇಶ್ವರ ಹೀಗೆಯೇ ಮಾಡುವರು," ಎಂದು ಹೇಳಿದರು. [26]ಅನಂತರ ಆ ಅರಸರನ್ನು

ಕೊಲ್ಲಿಸಿ ಐದು ಮರಗಳಿಗೆ ನೇತು ಹಾಕಿಸಿದನು. ಅವರ ಶವಗಳು ಸಾಯಂಕಾಲದವರೆಗೂ ಅಲ್ಲೇ ತೂಗಾಡುತ್ತಿದ್ದವು. [27]ಸೂರ್ಯಾಸ್ತಮಾನದ ಹೊತ್ತಿಗೆ ಜನರು ಯೆಹೋಶುವನ ಅಪ್ಪಣೆಯಂತೆ ಅವುಗಳನ್ನು ಮರಗಳಿಂದ ಕೆಳಗಿಳಿಸಿ ಅವರು ಅಡಗಿಕೊಂಡಿದ್ದ ಗವಿಯಲ್ಲೇ ಹಾಕಿ ಅದರ ಬಾಯಿಗೆ ದೊಡ್ಡ ಕಲ್ಲುಗಳನ್ನು ಹೊರಳಿಸಿದರು. ಆ ಕಲ್ಲುಗಳು ಇಂದಿನವರೆಗೂ ಅಲ್ಲೇ ಇವೆ.

### ಕಾನಾನ್ ನಾಡಿನ ದಕ್ಷಿಣಭಾಗ ಇಸ್ರಯೇಲರ ವಶ

28 ಅದೇ ದಿನ ಯೆಹೋಶುವನು ಮಕ್ಕೇದವನ್ನು ಸ್ವಾಧೀನಪಡಿಸಿಕೊಂಡನು. ಅದರ ರಾಜನನ್ನೂ ಪ್ರಜೆಗಳೆಲ್ಲರನ್ನೂ ಕತ್ತಿಗೆ ತುತ್ತಾಗಿಸಿದನು.

29 ಯೆಹೋಶುವನು ಜನರೆಲ್ಲರ ಸಮೇತ ಮಕ್ಕೇದದಿಂದ ಲಿಬ್ನಕ್ಕೆ ಹೋಗಿ ಅಲ್ಲಿಯವರೊಡನೆ
ಯುದ್ಧಮಾಡಿದನು. [30]ಸರ್ವೇಶ್ವರ ಅದನ್ನೂ ಅದರ ಅರಸನನ್ನೂ ಇಸ್ರಯೇಲರ ಕೈವಶಮಾಡಿದರು. ಅವರು
ಅದರಲ್ಲಿದ್ದ ಜನರಲ್ಲಿ ಒಬ್ಬನನ್ನೂ ಉಳಿಸದೆ ಎಲ್ಲರನ್ನೂ ಕತ್ತಿಗೆ ತುತ್ತಾಗಿಸಿದರು. ಜೆರಿಕೋವಿನ ಅರಸನಿಗಾದ ಗತಿಯೇ ಇವರ ಅರಸನಿಗೂ ಆಯಿತು.

31 ಅಲ್ಲಿಂದ ಯೆಹೋಶುವನು ಇಸ್ರಯೇಲರ ಸಹಿತ ಲಾಕೀಷಿಗೆ ಹೋಗಿ ಮುತ್ತಿಗೆ ಹಾಕಿ
ಯುದ್ಧಮಾಡಿದನು. [32]ಸರ್ವೇಶ್ವರ ಇದನ್ನೂ ಇಸ್ರಯೇಲರ ಕೈಗೊಪ್ಪಿಸಿದರು. ಎಂದೇ ಅವರು ಅದನ್ನು
ಎರಡನೆಯ ದಿನದಲ್ಲಿ ಸ್ವಾಧೀನ ಮಾಡಿಕೊಂಡು ಅದನ್ನೂ ಅದರ ಜನರನ್ನೂ ಸಂಹರಿಸಿಬಿಟ್ಟರು. ಲಿಬ್ನದವರಿಗಾದ ಗತಿಯೇ ಇವರಿಗೂ ಆಯಿತು.

33 ಇದಲ್ಲದೆ ಯೆಹೋಶುವನು ಲಾಕೀಷಿನವರ ಸಹಾಯಕ್ಕೆ ಬಂದ ಗೆಜೆರಿನ ಅರಸನಾದ ಹೋರಾಮನನ್ನೂ ಅವನ ಪ್ರಜೆಗಳೆಲ್ಲರನ್ನೂ ಸದೆಬಡಿದನು. ಒಬ್ಬನೂ ಉಳಿಯಲಿಲ್ಲ.

34 ತರುವಾಯ ಯೆಹೋಶುವನು ಲಾಕೀಷನ್ನು ಬಿಟ್ಟು ಇಸ್ರಯೇಲರೆಲ್ಲರ ಸಹಿತ ಎಗ್ಲೋನಿಗೆ
ಬಂದು ಮುತ್ತಿಗೆಹಾಕಿ ಯುದ್ಧಮಾಡಿದನು. [35]ಅವರು ಅದೇ ದಿನದಲ್ಲಿ ಅದನ್ನು ಹಿಡಿದು ಲಾಕೀಷಿನಲ್ಲಿ
ಮಾಡಿದಂತೆಯೇ ಅದನ್ನೂ ಅದರ ಜನರೆಲ್ಲರನ್ನೂ ಕೊಂದು ನಾಶಮಾಡಿದರು.

36 ಅನಂತರ ಯೆಹೋಶುವನು ಮತ್ತು ಇಸ್ರಯೇಲರು ಎಗ್ಲೋನನ್ನು ಬಿಟ್ಟು ಹೆಬ್ರೋನಿಗೆ ಹೋಗಿ
ಅದಕ್ಕೆ ವಿರುದ್ಧ ಯುದ್ಧಮಾಡಿದರು. [37]ಅದನ್ನೂ ಅದಕ್ಕೆ ಸೇರಿದ ಊರುಗಳನ್ನೂ ಅದರ
ರಾಜಪ್ರಜೆಗಳೆಲ್ಲರನ್ನೂ ಕತ್ತಿಗೆ ಈಡಾಗಿಸಿದರು. ಎಗ್ಲೋನಿನಲ್ಲಿ ಹೇಗೋ ಹಾಗೆಯೇ ಇಲ್ಲಿಯೂ ಒಬ್ಬನನ್ನೂ ಉಳಿಸಲಿಲ್ಲ. ನಗರವನ್ನೂ ಜನರನ್ನೂ ನಾಶಮಾಡಿದರು.

38 ಅಲ್ಲಿಂದ ಯೆಹೋಶುವನು ಹಾಗು ಎಲ್ಲ ಇಸ್ರಯೇಲರು ದೆಬೀರಿಗೆ ಬಂದು ಅಲ್ಲಿಯವರೊಡನೆ
ಯುದ್ಧಮಾಡಿದರು. [39]ಅದನ್ನು ಹಾಗು ಅದಕ್ಕೆ ಸೇರಿದ ಊರುಗಳನ್ನು ಹಿಡಿದುಕೊಂಡರು. ಅದರ
ರಾಜಪ್ರಜೆಗಳೆಲ್ಲರನ್ನೂ ಕತ್ತಿಯಿಂದ ನಾಶಮಾಡಿದರು. ಒಬ್ಬನನ್ನೂ ಉಳಿಸಲಿಲ್ಲ. ಹೆಬ್ರೋನಿಗೂ ಅದರ ಅರಸನಿಗೂ ಆದ ಗತಿಯೇ ದೆಬೀರಿಗೂ ಅದರ ಅರಸನಿಗೂ ಆಯಿತು.

40 ಹೀಗೆ ಯೆಹೋಶುವನು ಮಲೆನಾಡಿನ ಪ್ರದೇಶ, ದಕ್ಷಿಣಪ್ರಾಂತ್ಯ, ಇಳಿಜಾರಿನ ಪ್ರದೇಶ,
ಬೆಟ್ಟಗುಡ್ಡಗಳ ಬುಡ ಪ್ರದೇಶ ಇವುಗಳನ್ನು ಸ್ವತಂತ್ರಿಸಿಕೊಂಡು ಇವುಗಳ ರಾಜಪ್ರಜೆಗಳನ್ನು ಸಂಹರಿಸಿಬಿಟ್ಟನು.
ಒಬ್ಬನನ್ನೂ ಉಳಿಸಲಿಲ್ಲ. ಇಸ್ರಯೇಲ್ ದೇವರಾದ ಸರ್ವೇಶ್ವರನ ಆಜ್ಞೆಯಂತೆ ಜೀವವಿರುವುದೆಲ್ಲವನ್ನು
ಶಾಪನಾಶಕ್ಕೆ ಗುರಿಮಾಡಿದನು. [41]ಕಾದೇಶ್ ಬರ್ನೇಯದಿಂದ ಗಾಜಾ ಊರಿನವರೆಗೂ ಗೋಷನ್
ಪ್ರಾಂತ್ಯದಿಂದ ಗಿಬ್ಯೋನಿನವರೆಗೂ ಎಲ್ಲರನ್ನು ಸೋಲಿಸಿದನು. [42]ಇಸ್ರಯೇಲ್ ದೇವರಾದ ಸರ್ವೇಶ್ವರ ಅವರ
ಪರವಾಗಿ ಯುದ್ಧಮಾಡಿದ್ದರಿಂದ ಯೆಹೋಶುವನು ಈ ಎಲ್ಲಾ ರಾಜರನ್ನೂ ರಾಜ್ಯಗಳನ್ನೂ ಏಕಕಾಲದಲ್ಲಿ
ವಶಮಾಡಿಕೊಂಡನು. [43]ಇದಾದ ಮೇಲೆ ಯೆಹೋಶುವನು ಎಲ್ಲ ಇಸ್ರಯೇಲರೊಡನೆ ಗಿಲ್ಗಾಲಿನಲ್ಲಿದ್ದ ತನ್ನ
ಪಾಳೆಯಕ್ಕೆ ಹಿಂದಿರುಗಿದನು.

## ಕಾನಾನ್ ನಾಡಿನ ಉತ್ತರಭಾಗ ಇಸ್ರಯೇಲರ ವಶ

**11** ಹಾಚೋರಿನ ಅರಸ ಯಾಬೀನನು ಇದನ್ನೆಲ್ಲಾ ಕೇಳಿ ಯೋಬಾಬನೆಂಬ ಮದೋನಿನ ಅರಸನಿಗೂ
ಶಿಮ್ರೋನಿನ ಅರಸನಿಗೂ ಹಾಗು ಅಕ್ಷಾಫಿನ ಅರಸನಿಗೂ ಕರೆಕಳಿಸಿದನು. 2ಉತ್ತರದಿಕ್ಕಿನ ಪರ್ವತಪ್ರದೇಶ,
ಕಿನ್ನೆರೋತ್ ಸಮುದ್ರದ ದಕ್ಷಿಣದಲ್ಲಿನ ಕಣಿವೆ ಪ್ರದೇಶ, ಇಳಿಜಾರು ಪ್ರದೇಶ, ದೋರ್ ಊರಿನ ಪಶ್ಚಿಮದಲ್ಲಿದ್ದ
ಮಲೆನಾಡಿನ ಪ್ರದೇಶ, ಇವುಗಳ ಅರಸರಿಗೂ 3ಪೂರ್ವ ಪಶ್ಚಿಮಗಳಲ್ಲಿರುವ ಕಾನಾನ್ಯರು, ಅಮೋರಿಯರು,
ಹಿತ್ತಿಯರು, ಪೆರಿಜ್ಜೀಯರು, ಮಲೆನಾಡಿನ ಪ್ರದೇಶದಲ್ಲಿದ್ದ ಯೆಬೂಸಿಯರು, ಹೆರ್ಮೋನಿನ ಬುಡದಲ್ಲಿ
ಮಿಚ್ಪಾ ನಾಡಿನಲ್ಲಿದ್ದ ಹಿವ್ವಿಯರು ಇವರಿಗೂ ಹೇಳಿ ಕಳಿಸಿದನು. 4ಅವರು ಒಡನೆ ಬಹುರಥಾಶ್ವಗಳಿಂದ
ಕೂಡಿದ್ದ ತಮ್ಮ ಸರ್ವಸೈನ್ಯಗಳನ್ನು ತೆಗೆದುಕೊಂಡು ಹೊರಟರು. ಸೈನಿಕರು ಸಮುದ್ರ ತೀರದ ಮರಳಿನಂತೆ
ಅಸಂಖ್ಯರಾಗಿದ್ದರು. 5ಇಸ್ರಯೇಲರೊಡನೆ ಯುದ್ಧಮಾಡಲು ಅರಸರೆಲ್ಲರು ಒಟ್ಟುಗೂಡಿ ಮೇರೋಮ್
ಜಲಾಶಯದ ಬಳಿ ಇಳಿದುಕೊಂಡರು.

6 ಆಗ ಸರ್ವೇಶ್ವರಸ್ವಾಮಿ ಯೆಹೋಶುವಿಗೆ, "ನೀನು ಅವರಿಗೆ ಹೆದರಬೇಡ; ನಾಳೆ ಇದೇ ವೇಳೆಗೆ
ಅವರನ್ನು ಇಸ್ರಯೇಲರಿಗೆ ಒಪ್ಪಿಸುವೆನು. ಇಸ್ರಯೇಲರು ಅವರನ್ನು ಹತಿಸಿಬಿಡುವರು. ನೀನು ಅವರ
ಕುದುರೆಗಳ ಹಿಂಗಾಲಿನ ನರಗಳನ್ನು ಕಡಿದು ರಥಗಳನ್ನು ಸುಟ್ಟುಬಿಡಬೇಕು," ಎಂದರು. 7ಯೆಹೋಶುವನು
ತನ್ನ ಎಲ್ಲ ಯೋಧರೊಡನೆ ಹೊರಟು ಮೇರೋಮ್ ಜಲಾಶಯದ ಬಳಿಯಲ್ಲಿದ್ದ ಶತ್ರುಗಳ ಮೇಲೆ ಬಿದ್ದನು.
8ಸರ್ವೇಶ್ವರ ಅವರನ್ನು ಇಸ್ರಯೇಲರ ಕೈವಶ ಮಾಡಿದರು. ಇವರು ಅವರನ್ನು ದೊಡ್ಡ ಚೀದೋನ್ ಹಾಗು
ಮಿಸ್ರೆ ಫೋತ್ಮಯಿಮ್ ಎಂಬ ಊರುಗಳವರೆಗೂ ಮತ್ತು ಪೂರ್ವ ದಿಕ್ಕಿನಲ್ಲಿರುವ ಮಿಚ್ಪೆಯ
ಬಯಲಿನವರೆಗೂ ಹಿಂದಟ್ಟಿ, ಒಬ್ಬನೂ ಉಳಿಯದಂತೆ ಸದೆಬಡಿದರು. 9ಯೆಹೋಶುವನು ಸರ್ವೇಶ್ವರನ
ಅಪ್ಪಣೆಗನುಸಾರವಾಗಿ ಅವರ ಕುದುರೆಗಳ ಹಿಂಗಾಲಿನ ನರಗಳನ್ನು ಕಡಿದು ರಥಗಳನ್ನು ಸುಟ್ಟುಬಿಟ್ಟನು.

10 ಕೂಡಲೆ ಯೆಹೋಶುವನು ಹಿಂದಿರುಗಿ ಹಾಚೋರನ್ನೂ ಅದರ ಅರಸನನ್ನೂ ಕತ್ತಿಯಿಂದ
ಸಂಹರಿಸಿದನು. ಏಕೆಂದರೆ ಹಾಚೋರ್ ಪೂರ್ವಕಾಲದಲ್ಲಿ ಆ ರಾಜ್ಯಗಳಲ್ಲೆಲ್ಲಾ ಶ್ರೇಷ್ಠವಾದುದು.
11ಇಸ್ರಯೇಲರು ಅದರಲ್ಲಿದ್ದ ಜನರನ್ನೆಲ್ಲಾ ಕತ್ತಿಗೆ ಈಡಾಗಿಸಿ ಹಾಚೋರ್ ನಗರವನ್ನು, ಪ್ರಾಣಿಯೊಂದೂ
ಉಳಿಯದಂತೆ ಸುಟ್ಟುಬಿಟ್ಟರು.

12 ಯೆಹೋಶುವನು ಆ ಬೇರೆ ಅರಸರನ್ನು, ಅವರ ಎಲ್ಲ ನಗರಗಳನ್ನು ಹಿಡಿದು ಸರ್ವೇಶ್ವರನ
ದಾಸ ಮೋಶೆಯ ಆಜ್ಞೆಯಂತೆ ಅವರನ್ನು ಕತ್ತಿಯಿಂದ ನಾಶಮಾಡಿದನು. 13ಯೆಹೋಶುವನು ಸುಟ್ಟ
ಹಾಚೋರ್ ಒಂದನ್ನು ಬಿಟ್ಟರೆ ಇಸ್ರಯೇಲರು ಮಲೆನಾಡಿನ ಬೇರೆ ಯಾವ ನಗರವನ್ನೂ ಸುಡಲಿಲ್ಲ.
14ಅವುಗಳಲ್ಲಿದ್ದ ಪಶುಪ್ರಾಣಿಗಳನ್ನೂ ಸಾಮಾನು ಸರಂಜಾಮುಗಳನ್ನೂ ಇಸ್ರಯೇಲರು ಕೊಳ್ಳೆಹೊಡೆದರು.
ಜನರನ್ನಾದರೋ ಒಬ್ಬರನ್ನೂ ಬಿಡದೆ ಕತ್ತಿಯಿಂದ ನಿರ್ಮೂಲಮಾಡಿದರು. 15ಸರ್ವೇಶ್ವರನ ದಾಸ ಮೋಶೆ,
ದೇವರು ತನಗೆ ಹೇಳಿದ್ದನ್ನೆಲ್ಲಾ ಯೆಹೋಶುವಿಗೆ ಹೇಳಿದ್ದನು. ಅದರಂತೆಯೇ ಯೆಹೋಶುವ ಮಾಡಿದನು.
ಸರ್ವೇಶ್ವರ ಮೋಶೆಯ ಮುಖಾಂತರ ಆಜ್ಞಾಪಿಸಿದ್ದರಲ್ಲಿ ಯೆಹೋಶುವ ಒಂದನ್ನೂ ಮೀರಲಿಲ್ಲ.

## ಮೋಶೆಯಿತ್ತ ಆಜ್ಞಾಪಾಲನೆ

16 ಹೀಗೆ ಮಲೆನಾಡಿನ ಪ್ರದೇಶ, ದಕ್ಷಿಣ ಪ್ರಾಂತ್ಯ, ಗೋಷೆನ್ ನಾಡು, ಇಳಿಜಾರಿನ ಪ್ರದೇಶ, ಕಣಿವೆ
ಪ್ರದೇಶ, ಇಸ್ರಯೇಲ್ ನಾಡಿನ ಪರ್ವತ ಪ್ರಾಂತ್ಯ, ಅದಕ್ಕೆ ಸೇರಿದ ಇಳಿಜಾರಿನ ಪ್ರದೇಶ ಇವೆಲ್ಲವೂ
ಯೆಹೋಶುವನಿಗೆ ಸ್ವಾಧೀನವಾದವು. 17ಅವನು ಸೇಯೀರಿನ ಹಾದಿಯಲ್ಲಿದ್ದ ಹಾಲಾಕ್ ಬೆಟ್ಟದಿಂದ
ಹೆರ್ಮೋನಿನ ಬುಡದಲ್ಲಿ ಲೆಬನೋನ್ ಕಣಿವೆಯಲ್ಲಿರುವ ಬಾಲ್ಗಾದ್ ನಗರದವರೆಗೂ ಇರುವ
ಪ್ರದೇಶವನ್ನೆಲ್ಲಾ ತೆಗೆದುಕೊಂಡು ಅದರ ಅರಸರನ್ನೆಲ್ಲಾ ಹಿಡಿದು ಸಂಹರಿಸಿಬಿಟ್ಟನು. 18ಯೆಹೋಶುವ ಈ
ಎಲ್ಲಾ ಅರಸರೊಡನೆ ಬಹು ದಿನಗಳ ತನಕ ಯುದ್ಧ ಮಾಡಿದನು. 19ಗಿಬ್ಯೋನಿನ ನಿವಾಸಿಗಳಾದ ಹಿವ್ವಿಯರ
ಹೊರತು ಯಾವ ನಗರದವರೂ ಇಸ್ರಯೇಲರೊಡನೆ ಒಪ್ಪಂದ ಮಾಡಿಕೊಳ್ಳಲಿಲ್ಲ. ಎಲ್ಲರನ್ನೂ
ಯುದ್ಧದಿಂದಲೇ ವಶಮಾಡಿಕೊಳ್ಳಬೇಕಾಯಿತು. 20ಏಕೆಂದರೆ ಸರ್ವೇಶ್ವರ ಅವರ ಹೃದಯಗಳನ್ನು

ಕಠಿಣಪಡಿಸಿ ಯುದ್ಧಕ್ಕೆ ಬರಮಾಡಿದ್ದರು. ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದಂತೆ ಇಸ್ರಯೇಲರು
ಅವರೆಲ್ಲರನ್ನು ಕರುಣೆ ಇಲ್ಲದೆ ಸಂಹರಿಸಿದರು.
21 ಅದೇ ಕಾಲದಲ್ಲಿ ಯೆಹೋಶುವನು ಹೆಬ್ರೋನ್, ದೆಬೀರ್ ಹಾಗೂ ಅನಾಬ್ ಎಂಬ
ಊರುಗಳಲ್ಲೂ, ಜುದೇಯ ಮತ್ತು ಇಸ್ರಯೇಲ್ ಪ್ರಾಂತ್ಯಗಳ ಬೆಟ್ಟಗುಡ್ಡಗಳಲ್ಲೂ ಇದ್ದ 'ಅನಾಕಿಮ್'
ಜನರನ್ನು ನಾಶಮಾಡಿ ಅವರ ನಗರಗಳನ್ನು ಹಾಳುಮಾಡಿದನು. 22ಇಸ್ರಯೇಲರ ಪ್ರಾಂತ್ಯದಲ್ಲಿ ಜನರಾರೂ
ಉಳಿಯಲಿಲ್ಲ. ಗಾಜಾ, ಗತೂರು, ಅಷ್ಡೋದ್ ಎಂಬ ಊರುಗಳಲ್ಲಿ ಮಾತ್ರ ಕೆಲವರು ಉಳಿದರು.
23ಸರ್ವೇಶ್ವರ ಮೋಶೆಯ ಮುಖಾಂತರ ವಾಗ್ದಾನ ಮಾಡಿದ್ದ ಪ್ರದೇಶವನ್ನೆಲ್ಲಾ ಯೆಹೋಶುವ
ಹಿಡಿದುಕೊಂಡನು ಇಸ್ರಯೇಲ್ ಕುಲಭಾಗಗಳಿಗನುಸಾರ ಅದನ್ನು ಹಂಚಿಕೊಟ್ಟನು. ಯುದ್ಧ ನಿಂತಿತು.
ದೇಶದಲ್ಲೆಲ್ಲಾ ಶಾಂತಿಸಮಾಧಾನ ನೆಲೆಸಿತು.

### ಇಸ್ರಯೇಲರು ಸೋಲಿಸಿದ ಅರಸರ ಪಟ್ಟಿ ಮೋಶೆ ಸೋಲಿಸಿದ ಅರಸರು

**12** ಇಸ್ರಯೇಲರು ಜೋರ್ಡನ್ ನದಿಯ ಪೂರ್ವದಿಕ್ಕಿನಲ್ಲಿ ಅರ್ನೋನ್ ಕಣಿವೆ ಮೊದಲುಗೊಂಡು
ಹೆರ್ಮೋನ್ ಪರ್ವತದವರೆಗಿದ್ದ ಪ್ರದೇಶವನ್ನು ಮತ್ತು ಕಣಿವೆ ಪ್ರದೇಶದ ಪೂರ್ವಭಾಗವನ್ನು
ಸ್ವಾಧೀನಮಾಡಿಕೊಂಡರು. ಅವುಗಳಲ್ಲಿದ್ದ ಅರಸರನ್ನು ಸಂಹರಿಸಿದರು. 2ಅವರಲ್ಲಿ ಮೊದಲನೆಯವನು
ಹೆಷ್ಬೋನಿನಲ್ಲಿದ್ದ ಅಮೋರಿಯರ ಅರಸ ಸೀಹೋನ್ ಎಂಬವನು. ಇವನ ರಾಜ್ಯ, ಅರ್ನೋನ್ ಕಣಿವೆಯ
ಅಂಚಿನಲ್ಲಿ ಇರುವ ಅರೋಯೇರ್ ನಗರವನ್ನು ಮತ್ತು ಆ ಕಣಿವೆಯಲ್ಲೇ ಇರುವ ನಗರವನ್ನು
ಮೊದಲುಗೊಂಡು ಅಮ್ಮೋನಿಯರ ಮೇರೆಯಾಗಿರುವ ಯಬ್ಬೋಕ್‌ನದಿಯ ತನಕವಿರುವ ಗಿಲ್ಯಾದಿನ
ಅರ್ಧಪ್ರಾಂತ್ಯ, 3ಹಾಗೂ ಜೋರ್ಡನ್ ನದಿಯ ಪೂರ್ವದಲ್ಲಿ ಕಿನ್ನೆರೋತ್ ಸಮುದ್ರದಿಂದ ಲವಣ ಸಮುದ್ರ
(ಮೃತ್ಯುಕಡಲು) ಎನಿಸಿಕೊಳ್ಳುವ ಅರಾಬಾ ಸಮುದ್ರದ ಹತ್ತಿರವಿರುವ ಬೇತ್ ಯೆಷಿಮೋತಿನವರೆಗೂ
ದಕ್ಷಿಣದಲ್ಲಿರುವ ಪಿಸ್ಗಾ ಬೆಟ್ಟದ ಬುಡದವರೆಗೂ ಇರುವ ಕಣಿವೆ ಪ್ರದೇಶ ಇವುಗಳಿಂದ ಕೂಡಿತ್ತು.
4 ಅಷ್ಟರೋತ್ ಹಾಗೂ ಎದ್ರೈ ಎಂಬ ಊರುಗಳಲ್ಲಿ ವಾಸವಾಗಿದ್ದ ರೆಫಾಯರ ವಂಶಸ್ಥನೂ
ಭಾಷಾನಿನ ಅರಸನೂ ಆದ ಓಗನು ವಧಿತರಾದವರಲ್ಲಿ ಎರಡನೆಯವನು. 5ಇವನ ರಾಜ್ಯ, ಹೆರ್ಮೋನ್
ಮಲೆನಾಡು, ಸಲ್ಕಾನಗರ, ಗೆಷೂರ್‍ಯರ ಮತ್ತು ಮಾಕತೀಯರ ಮೇರೆಯವರೆಗಿದ್ದ ಬಾಷಾನ್ ನಾಡು,
ಹೆಷ್ಬೋನಿನ ಅರಸನಾದ ಸೀಹೋನನ ಮೇರೆಯವರೆಗಿದ್ದ ಗಿಲ್ಯಾದಿನ ಅರ್ಧಪ್ರಾಂತ್ಯ ಇವುಗಳಿಂದ ಕೂಡಿತ್ತು.
6ಸರ್ವೇಶ್ವರನ ದಾಸ ಮೋಶೆ ಇಸ್ರಯೇಲರ ಸಹಿತವಾಗಿ ಈ ಇಬ್ಬರನ್ನು ಸೋಲಿಸಿ ಅವರ
ರಾಜ್ಯಗಳನ್ನು ರೂಬೇನ್ಯರಿಗೂ ಗಾದ್ಯರಿಗೂ ಮತ್ತು ಮನಸ್ಸೆಕುಲದ ಅರ್ಧಜನರಿಗೂ ಶಾಶ್ವತ ಸೊತ್ತಾಗಿ
ಕೊಟ್ಟನು.

### ಯೆಹೋಶುವ ಸೋಲಿಸಿದ ಅರಸರು

7 ಯೆಹೋಶುವನು ಇಸ್ರಯೇಲರ ಸಮೇತ, ಜೋರ್ಡನ್ ನದಿಯ ಪಶ್ಚಿಮದಲ್ಲಿ ಲೆಬನೋನ್
ಕಣಿವೆಯಲ್ಲಿದ್ದ ಬಾಲ್ಗಾದಿನಿಂದ ಸೇಯಿರಿನ ದಾರಿಯಲ್ಲಿದ್ದ ಹಾಲಾಕ್ ಪರ್ವತದವರೆಗೂ ವಿಸ್ತರಿಸಿಕೊಂಡಿದ್ದ
ಮಲೆನಾಡಿನ ಪ್ರದೇಶ, 8ಇಳಿಜಾರಿನ ಪ್ರದೇಶ, ಕಣಿವೆ ಪ್ರದೇಶ, ತಪ್ಪಲು ಪ್ರದೇಶ, ಮರುಭೂಮಿ ಹಾಗೂ
ದಕ್ಷಿಣಪ್ರಾಂತ್ಯ ಇವುಗಳನ್ನೂ ಇವುಗಳನ್ನು ಆಳುತ್ತಿದ್ದ ಹಿತ್ತೀಯ, ಅಮೋರಿಯ, ಕಾನಾನ್, ಪೆರಿಜ್ಜೀಯ,
ಹಿವ್ವಿಯ ಹಾಗೂ ಯೆಬೂಸಿಯ ಅರಸರನ್ನೂ ಸೋಲಿಸಿ ಅವರ ನಾಡುಗಳನ್ನು ಇಸ್ರಯೇಲ್ ಕುಲಭಾಗಗಳಿಗೆ
ಶಾಶ್ವತ ಸೊತ್ತಾಗಿ ಕೊಟ್ಟನು. ಆ ಅರಸರ ಪಟ್ಟಿ ಹೀಗಿದೆ:

9 ಜೆರಿಕೋವಿನ ಅರಸ – 1
ಬೇತೇಲಿನ ಹತ್ತಿರವಿರುವ ಆಯಿ ಎಂಬ
ಊರಿನ ಅರಸ – 1
10 ಜೆರೂಸಲೇಮಿನ ಅರಸ – 1

ಹೆಬ್ರೋನಿನ ಅರಸ – 1
ಯರ್ಮೂತಿನ ಅರಸ – 1
11 ಲಾಕೀಷಿನ ಅರಸ – 1
ಎಗ್ಲೋನಿನ ಅರಸ – 1
12 ಗೆಜೆರಿನ ಅರಸ – 1
13 ದೆಬೀರಿನ ಅರಸ – 1
14 ಗೆದೆರಿನ ಅರಸ – 1
ಹೊರ್ಮದ ಅರಸ – 1
ಅರಾದಿನ ಅರಸ – 1
15 ಲಿಬ್ನದ ಅರಸ – 1
ಅದುಲ್ಲಾಮದ ಅರಸ – 1
16 ಮಕ್ಕೇದದ ಅರಸ – 1
ಬೇತೇಲಿನ ಅರಸ – 1
17 ತಪ್ಪೂಹದ ಅರಸ – 1
ಹೇಫೆರಿನ ಅರಸ – 1
18 ಅಷ್ಪಾರೋನಿನ ಅರಸ – 1
ಅಫೇಕದ ಅರಸ – 1
19 ಮಾದೋನಿನ ಅರಸ – 1
ಹಾಚೋರಿನ ಅರಸ – 1
ಶಿಮ್ರೋನ್ಮೆರೋನಿನ ಅರಸ – 1
20 ಅಕ್ಷಾಫಿನ ಅರಸ – 1
ತಾನಕದ ಅರಸ – 1
21 ಮೆಗಿದ್ದೋವಿನ ಅರಸ – 1
ಕೆದೆಷಿನ ಅರಸ – 1
22 ಕರ್ಮೆಲ್ ಬೆಟ್ಟದ ಮೇಲಿರುವ
ಯೊಕ್ನೆಯಾಮದ ಅರಸ – 1
23 ದೋರ್ ಬೆಟ್ಟದ ಮೇಲಿರುವ
ದೋರಿನ ಅರಸ – 1
ಗಿಲ್ಗಾಲಿನವರ ಅರಸ – 1
ತಿರ್ಚದ ಅರಸ – 1
24 ಒಟ್ಟು ಅರಸರು 31 ಮಂದಿ.

### ಸ್ವಾಧೀನವಾಗಬೇಕಿದ್ದ ಭೂಮಿ

**13** ಯೆಹೋಶುವ ಹಣ್ಣುಹಣ್ಣು ಮುದುಕನಾದ. ಆಗ ಸರ್ವೇಶ್ವರ ಆತನಿಗೆ, “ನೀನೀಗ ಮುದುಕ. ಸ್ವಾಧೀನ ಮಾಡಿಕೊಳ್ಳಬೇಕಾದ ನಾಡುಗಳು ಇನ್ನೂ ಬಹಳ ಇವೆ. 2–3ಅವು ಯಾವುವೆಂದರೆ – ಈಜಿಪ್ಟಿನ ಈಚೆಯಿರುವ ಶೀಹೋರ್ ನದಿಯಿಂದ ಕಾನಾನ್ಯರಿಗೆ ಸೇರಿದ ಉತ್ತರ ಮೇರೆಯಾದ ಎಕ್ರೋನಿನವರೆಗಿರುವ ಗಾಜಾ, ಅಷ್ಡೋದ್, ಅಷ್ಕೆಲೋನ್, ಗತೂರು, ಎಕ್ರೋನ್ ಎಂಬ ನಗರಗಳ ಐದು ಮಂದಿ ಫಿಲಿಷ್ಟಿಯ ಪ್ರಭುಗಳ ಸ್ವಾಧೀನದಲ್ಲಿದ್ದಂಥ ಫಿಲಿಷ್ಟಿಯ ಪ್ರಾಂತ್ಯ; 4ಗೆಷೂರ್ಯರ ನಾಡು, ದಕ್ಷಿಣದಲ್ಲಿದ್ದ ಅವ್ವೀಯರ ನಾಡು; ಸಿದೋನ್ಯರಿಗೆ ಸೇರಿದ ಮೆಯರಾದಿಂದ ಅಮೋರಿಯರ ಮೇರೆಯಾದ ಅಫೇಕದವರೆಗಿರುವ ಕಾನಾನ್ಯರ

ನಾಡು; [5]ಗೆಬಾಲ್ಯರ ಸೀಮೆ, ಹೆರ್ಮೋನ್ ಬೆಟ್ಟದ ತಪ್ಪಲಿನಲ್ಲಿರುವ ಬಾಲ್ಗಾದಿನಿಂದ ಹಾಮಾತಿನ ಹಾದಿಯವರೆಗಿರುವ ಲೆಬನೋನಿನ ಪೂರ್ವ ಪ್ರದೇಶ; [6]ಒಟ್ಟಾರೆ ಲೆಬನೋನಿನಿಂದ ಮಿಸ್ರೆಫೋತ್ಮಯಿಮಿನವರೆಗಿರುವ ಸಿದೋನ್ಯರ ಎಲ್ಲ ಪರ್ವತ ಪ್ರಾಂತ್ಯಗಳು.

7 "ನಾನೇ ಈ ಎಲ್ಲಾ ಜನಾಂಗಗಳನ್ನು ಇಸ್ರಯೇಲರ ಸಮ್ಮುಖದಿಂದ ಹೊರಡಿಸಿ ಬಿಡುವೆನು. ನೀನಾದರೋ ನಾನು ಮೊದಲೇ ಆಜ್ಞಾಪಿಸಿದಂತೆ ಇಸ್ರಯೇಲರಿಗೆ ನಾಡನ್ನು ಹಂಚಿಕೊಡುವಾಗ ಇವುಗಳನ್ನು ಕೂಡ ಸೇರಿಸಿ ನಾಡನ್ನೆಲ್ಲಾ ಒಂಬತ್ತು ಕುಲಗಳಿಗೂ ಮನಸ್ಸೆ ಕುಲದ ಅರ್ಧಜನರಿಗೂ ಪಾಲುಮಾಡಿಕೊಡು," ಎಂದರು.

## ನಾಡಿನ ವಿಭಜನೆ

8 ಮನಸ್ಸೆಕುಲದ ಉಳಿದ ಅರ್ಧಜನರಿಗೆ, ರೂಬೇನ್ಯರಿಗೆ ಹಾಗೂ ಗಾದ್ಯರಿಗೆ ಜೋರ್ಡನಿನ ಆಚೆಕಡೆ ಈಗಾಗಲೇ ಮೋಶೆಯಿಂದ ಸ್ವಂತ ಭೂಮಿ ದೊರಕಿತ್ತು. ಸರ್ವೇಶ್ವರನ ದಾಸ ಮೋಶೆ ಅವರಿಗೆ ಕೊಟ್ಟ ಪ್ರಾಂತ್ಯಗಳು ಇವು: [9]ಅರ್ನೋನ್ ಕಣಿವೆಯ ಅಂಚಿನಲ್ಲಿದ್ದ ಅರೋಯೇರ್ ನಗರ ಮತ್ತು ಅದೇ ಕಣಿವೆಯಲ್ಲಿದ್ದ ಮತ್ತೊಂದು ನಗರ, ಇವುಗಳಿಂದ ದೀಬೋನಿನವರೆಗೆ ವಿಸ್ತರಿಸಿಕೊಂಡಿದ್ದ ಮೇದಬದ ತಪ್ಪಲ ನಾಡು; [10]ಹೆಷ್ಬೋನಿನಲ್ಲಿ ಆಳುತ್ತಿದ್ದ ಅಮೋರಿಯ ಅರಸ ಸೀಹೋನನಿಗೆ ಸೇರಿದ ಅಮ್ಮೋನಿಯರ ಎಲ್ಲೆಗೆ ಈಚೆಕಡೆ ಇದ್ದಂಥ ಎಲ್ಲ ನಗರಗಳು; [11]ಗಿಲ್ಯಾದ್ ನಾಡು, ಗೆಷ್ಯೂರ ಮತ್ತು ಮಾಕತೀಯರ ಪ್ರಾಂತ್ಯಗಳು, ಹೆರ್ಮೋನ್ ಬೆಟ್ಟದ ಮೇಲಿನ ಪ್ರದೇಶ [12]ಅಷ್ಟರೋತ್, ಎದ್ರೈ ಎಂಬ ಊರುಗಳಲ್ಲಿ ಆಳುತ್ತಿದ್ದ ರೆಫಾಯರ ವಂಶಸ್ಥನಾದ ಓಗನ ರಾಜ್ಯವಾಗಿದ್ದು ಸಲ್ಕಾ ನಗರದವರೆಗೆ ವಿಸ್ತರಿಸಿಕೊಂಡಿದ್ದ ಬಾಷಾನಿನ ಎಲ್ಲಾ ಪ್ರಾಂತ್ಯಗಳು. ಮೋಶೆಯೇ ಅವರನ್ನು ಜಯಿಸಿ ಅವರ ನಾಡುಗಳನ್ನು ಸ್ವಾಧೀನಮಾಡಿಕೊಂಡಿದ್ದನು. [13]ಇಸ್ರಯೇಲರು ಗೆಷೂರ್ಯರನ್ನೂ ಮಾಕತೀಯರನ್ನೂ ನಾಡಿನೊಳಗಿಂದ ಅಟ್ಟಿಬಿಡಲಿಲ್ಲ. ಅವರು ಇಂದಿನವರೆಗೂ ಇಸ್ರಯೇಲರ ಮಧ್ಯದಲ್ಲೇ ಇದ್ದಾರೆ.

14 ಲೇವಿ ಕುಲದವರಿಗೆ ಮಾತ್ರ ಯಾವ ಪಾಲೂ ಸಿಕ್ಕಲಿಲ್ಲ. ಏಕೆಂದರೆ ಇಸ್ರಯೇಲಿನ ದೇವರಾದ ಸರ್ವೇಶ್ವರನು ಆಜ್ಞಾಪಿಸಿದಂತೆ ಯಜ್ಞಶೇಷವೇ ಅವರ ಸೊತ್ತಾಗಿತ್ತು.

## ರೂಬೇನ್ಯರ ಗೋತ್ರಗಳಿಗೆ ಕೊಡಲಾದ ಸೊತ್ತು

15 ಮೋಶೆ ರೂಬೇನ್ಯರ ಗೋತ್ರಗಳಿಗೆ ಸ್ವಂತ ಆಸ್ತಿಯಾಗಿ ಕೊಟ್ಟ ಪ್ರದೇಶಗಳು ಇವು: [16]ಅರ್ನೋನ್ ಕಣಿವೆಯ ಅಂಚಿನಲ್ಲಿದ್ದ ಅರೋಯೇರ್ ನಗರ, ಅದೇ ಕಣಿವೆಯ ಮಧ್ಯೆಯಿದ್ದ ನಗರ; [17]ಮೇದೆಬದ ಬಯಲುನಾಡಿಗೆ ಸೇರಿದ ಹೆಷ್ಬೋನ್ ನಗರ, ಅಲ್ಲೆ ಎತ್ತರವಾದ ಬಯಲಿನಲ್ಲಿರುವ ದೀಬೋನ್, ಬಾಮೋತ್ ಬಾಳ್, ಬೇತ್ಬಾಳ್ಮೆಯೋನ್ ಯಹಜಾ, [18]ಕೆದೇಮೋತ್, ಮೆಫಾಯತ್, [19]ಕಿರ್ಯಾತಯಿಮ್, ಸಿಬ್ಮಾ ಎಂಬ ಹೆಷ್ಬೋನಿನ ಉಪಗ್ರಾಮಗಳು, ಕಣಿವೆಯಲ್ಲಿ ಇರುವ ಗುಡ್ಡದ ಮೇಲಿನ ಚೆರೆತ್‍ಶಹರ್, ಬೇತ್ಪೆ ಗೋರ್ ಎಂಬ ನಗರಗಳು, [20]ಪಿಸ್ಗದ ಬುಡದಲ್ಲಿ ಇರುವ ಪ್ರದೇಶ, ಬೇತ್‍ಯೆಷಿಮೋತ್ ನಗರ, [21]ಒಟ್ಟಾರೆ ಮೀಶೋರೆಂಬ ಎತ್ತರವಾದ ಬಯಲಿನಲ್ಲಿದ್ದ ಎಲ್ಲ ನಗರಗಳು, ಹೆಷ್ಬೋನಿನಲ್ಲಿ ಆಳುತ್ತಿದ್ದ ಅಮೋರಿಯರ ಅರಸ ಸೀಹೋನನ ಸಮಸ್ತ ರಾಜ್ಯ.

ಮೋಶೆ ಈ ನಾಡಿನಲ್ಲಿ ವಾಸವಾಗಿದ್ದ ಸೀಹೋನನನ್ನೂ ಎವೀ, ರೆಕೆಮ್, ಚೂರ್, ಹೂರ್, ರೆಬಾ ಎಂಬ ಮಿದ್ಯಾನ್ ಪ್ರಭುಗಳಾಗಿದ್ದ ಅವನ ಸರದಾರರನ್ನೂ ಸದೆಬಡಿದನು. [22]ಇಸ್ರಯೇಲರು ಕತ್ತಿಗೆ ಉತ್ತಾಗಿಸಿದವರಲ್ಲಿ ಬೆಯೋರನ ಮಗನೂ ಶಕುನ ನೋಡುವವನೂ ಆಗಿದ್ದ ಬಿಳಾಮನೂ ಸೇರಿದ್ದನು. [23]ಜೋರ್ಡನ್ ನದಿ ರೂಬೇನ್ಯರ (ಪಡುವಣ) ಮೇರೆಯಾಗಿತ್ತು. ರೂಬೇನ್ ಗೋತ್ರಗಳಿಗೆ ಸ್ವಂತ ಆಸ್ತಿಯಾಗಿ ಸಿಕ್ಕದ ಗ್ರಾಮನಗರಗಳು ಇವೇ.

## ಗಾದ್‍ಕುಲದ ಗೋತ್ರಗಳಿಗೆ ಕೊಡಲಾದ ಸೊತ್ತು

24 ಮೋಶೆ ಗಾದ್ ಕುಲದ ಗೋತ್ರಗಳಿಗೆ ಸ್ವಂತ ಆಸ್ತಿಯಾಗಿ ಕೊಟ್ಟ ಪ್ರದೇಶಗಳು ಇವು:
[25]ಹೆಷ್ಬೋನಿನ ಅರಸ ಸೀಹೋನನ ರಾಜ್ಯದ ಉಳಿದ ಭಾಗವಾಗಿರುವ ಯಗ್ಜೇರ್, ಗಿಲ್ಯಾದಿನ ಎಲ್ಲ
ನಗರಗಳು, ರಬ್ಬಾ ಊರಿನ ಪೂರ್ವದಲ್ಲಿ ಇರುವ ಅರೋಯೇರ್ ನಗರದವರೆಗೆ ವಿಸ್ತರಿಸಿ ಕೊಂಡಿರುವ
ಅಮ್ಮೋನಿಯರ ಅರ್ಧರಾಜ್ಯ, [26]ಹೆಷ್ಬೋನಿನಿಂದ ರಾಮತ್‍ಮಿಚ್ಫೆ, ಬೆಟೋನೀಮ್ ಎಂಬ ಊರುಗಳವರೆಗೆ
ಇರುವ ಪ್ರದೇಶ, ಮಹನಯಿಮಿನಿಂದ ದೇಬೀರ್ ಪ್ರಾಂತ್ಯದವರೆಗೆ ಇರುವ ನಾಡು, [27]ಜೋರ್ಡನ್
ಕಣಿವೆಯಲ್ಲಿರುವ ಬೇತ್‍ಹಾರಾಮ್, ಬೇತ್ ನಿಮ್ರಾ, ಸುಕ್ಕೋತ್, ಚಾಫೋನ್ ಎಂಬ ನಗರಗಳು, ಕಿನ್ನೆರೆತ್
ಸರೋವರ, (ದಕ್ಷಿಣ ದಿಕ್ಕಿನ) ಮೂಲೆಯವರೆಗೆ ವಿಸ್ತರಿಸಿಕೊಂಡಿರುವ ಜೋರ್ಡನ್ ಪೂರ್ವಪ್ರದೇಶ. [28]ಈ
ಎಲ್ಲ ಗ್ರಾಮನಗರಗಳು ಗಾದ್ ಕುಲದ ಆಸ್ತಿಪಾಸ್ತಿ ಆದವು.

## ಮನಸ್ಸೆಕುಲದ ಅರ್ಧಗೋತ್ರಗಳಿಗೆ ಕೊಡಲಾದ ಸೊತ್ತು

29 ಮಹನಯಿಮಿನ (ಉತ್ತರದಲ್ಲಿದ್ದ) ಹಾಗೂ ಮೊದಲು ಬಾಷಾನಿನ ಅರಸ ಓಗನ ರಾಜ್ಯವಾಗಿದ್ದ
ಬಾಷಾನ್ ನಾಡನ್ನು [30]ಮನಸ್ಸೆ ಕುಲದ ಅರ್ಧಗೋತ್ರಗಳಿಗೆ ಮೋಶೆ ಕೊಟ್ಟನು. ಯಾಯಿರನ
ಗ್ರಾಮಗಳೆನಿಸಿಕೊಳ್ಳುವ ಅರವತ್ತು ಊರುಗಳು ಇದರಲ್ಲೆ ಇವೆ. [31]ಗಿಲ್ಯಾದಿನ ಅರ್ಧಭಾಗ ಓಗನ
ರಾಜಧಾನಿಗಳಾಗಿದ್ದ ಬಾಷಾನಿನ ಅಷ್ಟರೋತ್ ಹಾಗೂ ಎದ್ರೈ ಎಂಬ ನಗರಗಳು ಮನಸ್ಸೆಯ ಮಗ
ಮಾಕೀರನ ಗೋತ್ರದ ಅರ್ಧ ಜನರಿಗೆ ಸಿಕ್ಕಿದವು.

32 ಮೋಶೆ ಜೋರ್ಡನಿನ ಆಚೆ ಜೆರಿಕೋವಿನ ಎದುರಿನಲ್ಲಿರುವ ಮೋವಾಬ್ಯರ ಬಯಲು
ಪ್ರದೇಶದಲ್ಲಿದ್ದಾಗ ಇವುಗಳನ್ನು ಅವರಿಗೆ ಸ್ವಂತ ಆಸ್ತಿಯಾಗಿ ಕೊಟ್ಟನು. [33]ಆದರೆ ಲೇವಿಯ ಕುಲಕ್ಕೆ ಮೋಶೆ
ಯಾವ ಸೊತ್ತನ್ನೂ ಕೊಡಲಿಲ್ಲ. ಏಕೆಂದರೆ ಇಸ್ರಯೇಲಿನ ದೇವರಾದ ಸರ್ವೇಶ್ವರನೇ ಅವರ ಸೊತ್ತೆಂದು
ವಾಗ್ದಾನ ಮಾಡಲಾಗಿತ್ತು.

## ಜೋರ್ಡನಿನ ಪಶ್ಚಿಮದಿಕ್ಕಿನ ಭೂಮಿಯ ವಿಭಜನೆ

**14** ಯಾಜಕ ಎಲ್ಲಾಜಾರನು, ನೂನನ ಮಗ ಯೆಹೋಶುವನು ಹಾಗೂ ಇಸ್ರಯೇಲ್ ಕುಲಾಧಿಪತಿಗಳು
[2]ಸರ್ವೇಶ್ವರ ಸ್ವಾಮಿ ಮೋಶೆಯ ಮೂಲಕ ಆಜ್ಞಾಪಿಸಿದಂತೆ ಜೋರ್ಡನಿನ ಪಶ್ಚಿಮದ ಕಾನಾನ್ ನಾಡನ್ನು
ಚೀಟು ಹಾಕಿ ಇಸ್ರಯೇಲರ ಒಂಬತ್ತುವರೆ ಕುಲದವರಿಗೆ ಸ್ವಂತ ಆಸ್ತಿಯಾಗಿ ಹಂಚಿಕೊಟ್ಟರು. [3]ಉಳಿದ
ಎರಡುವರೆ ಕುಲಗಳ ಜನರಿಗೆ ಜೋರ್ಡನಿನ ಆಚೆಯಲ್ಲಿ ಮೋಶೆಯೇ ಸೊತ್ತನ್ನು ಕೊಟ್ಟಿದ್ದನು. ಲೇವಿಯರಿಗೆ
ಮಾತ್ರ ಕೊಡಲಿಲ್ಲ. [4]ಜೋಸೆಫ್ಯರರು ಮನಸ್ಸೆ ಮತ್ತು ಎಫ್ರಯಿಮ್ ಎಂಬ ಎರಡು ಕುಲಗಳಾಗಿ
ಎಣಿಸಲ್ಪಟ್ಟಿದ್ದರು. ಲೇವಿಯರಿಗೆ, ತಂಗುವುದಕ್ಕೆ ಕೆಲವು ನಗರಗಳು ಹಾಗು ಅವರ ದನಕುರಿಗಳಿಗೆ ಅಲ್ಲಿನ
ಕೆಲವು ಹುಲ್ಲುಗಾವಲುಗಳನ್ನು ಬಿಟ್ಟರೆ ಬೇರೇನೂ ಸಿಕ್ಕಲಿಲ್ಲ. [5]ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದಂತೆಯೇ
ಇಸ್ರಯೇಲರು ನಾಡನ್ನು ಹಂಚಿಕೊಂಡರು.

## ಕಾಲೇಬನ ಪಾಲಿಗೆ ಬಂದ ಆಸ್ತಿ

6 ಯೆಹೋಶುವನು ಗಿಲ್ಗಾಲಿನಲ್ಲಿದ್ದಾಗ ಯೆಹೂದ ಕುಲದವರು ಅವನ ಬಳಿಗೆ ಬಂದರು. ಅವರಲ್ಲಿ
ಕೆನಿಜ್ಜೀಯನೂ ಯೆಫುನ್ನೆಯ ಮಗನೂ ಆದ ಕಾಲೇಬನು ಯೆಹೋಶುವನಿಗೆ, “ಸರ್ವೇಶ್ವರ ಕಾದೇಶ್
ಬರ್ನೇಯದಲ್ಲಿ ನಮ್ಮಿಬ್ಬರ ವಿಷಯವಾಗಿ ದೇವರ ಭಕ್ತನಾದ ಮೋಶೆಗೆ ಹೇಳಿದ್ದು ನಿಮಗೆ ಚೆನ್ನಾಗಿ ಗೊತ್ತಿದೆ.
[7]ಸರ್ವೇಶ್ವರನ ದಾಸನಾದ ಮೋಶೆ ಈ ನಾಡನ್ನು ಸಂಚರಿಸಿ ನೋಡುವುದಕ್ಕೆ ಕಾದೇಶ್ ಬರ್ನೇಯದಿಂದ
ನನ್ನನ್ನು ಕಳಿಸಿದಾಗ ನನಗೆ ನಾಲ್ವತ್ತು ವರುಷ. [8]ನನ್ನ ಜೊತೆಯಲ್ಲಿ ಬಂದಿದ್ದ ಸಹೋದರರು ಜನರನ್ನು
ಎದೆಗೆಡಿಸಿದರು. ನಾನಾದರೋ ನನ್ನ ದೇವರಾದ ಸರ್ವೇಶ್ವರನನ್ನೇ ಸಂಪೂರ್ಣವಾಗಿ ನಂಬಿ ಶ್ರದ್ಧೆಯಿಂದ
ಅನುಸರಿಸಿದೆ. [9]ಮೋಶೆ ಅಂದು ನನಗೆ, ‘ನೀನು ಪೂರ್ಣ ಮನಸ್ಸಿನಿಂದ ನನ್ನ ದೇವರಾದ ಸರ್ವೇಶ್ವರನನ್ನೇ

ಶ್ರದ್ಧೆಯಿಂದ ಅನುಸರಿಸಿದ ಕಾರಣ ನೀನು ಸಂಚರಿಸಿದ ಪ್ರದೇಶ ನಿನಗೂ ನಿನ್ನ ಸಂತಾನದವರಿಗೂ ಶಾಶ್ವತ
ಸೊತ್ತಾಗುವುದು,' ಎಂದು ಪ್ರಮಾಣಮಾಡಿ ಹೇಳಿದನು. 10ಸರ್ವೇಶ್ವರ ಈ ಮಾತುಗಳನ್ನು ಮೋಶೆಗೆ
ಹೇಳಿದಂದಿನಿಂದ ಇಸ್ರಯೇಲರು ಅರಣ್ಯದಲ್ಲಿ ಅಲೆಯುತ್ತಿದ್ದ ವರ್ಷಗಳೂ ಸೇರಿ ನಾಲ್ವತ್ತೈದು ವರ್ಷಗಳು
ದಾಟಿದವು. ಸರ್ವೇಶ್ವರ ತಾವು ನುಡಿದಂತೆಯೇ ಈ ಕಾಲವೆಲ್ಲ ನನ್ನನ್ನು ಜೀವದಿಂದುಳಿಸಿದ್ದಾರೆ. ಈಗ ನನಗೆ
ಎಂಬತ್ತೈದು ವರ್ಷ. 11ಮೋಶೆ ನನ್ನನ್ನು ಕಳಿಸಿದಾಗ ನನಗೆಷ್ಟು ಬಲವಿತ್ತೋ ಈಗಲೂ ಅಷ್ಟೇ ಬಲವಿದೆ.
ಯುದ್ಧಮಾಡುವುದಕ್ಕೂ ವಿಶೇಷ ಕಾರ್ಯಗಳನ್ನು ನಿರ್ವಹಿಸುವುದಕ್ಕೂ ನನಗೆ ಮುಂಚಿನಂತೆಯೇ ಶಕ್ತಿಯಿದೆ.
12ಹೀಗಿರಲು ಸರ್ವೇಶ್ವರ ಆ ದಿನದಂದು ಸೂಚಿಸಿದಂತೆ ಈ ಮಲೆನಾಡನ್ನು ನನಗೆ ಕೊಡು. 'ಇದರಲ್ಲಿ
ಎತ್ತರದ ವ್ಯಕ್ತಿಗಳಿದ್ದಾರೆ, ದೊಡ್ಡ ದೊಡ್ಡ ನಗರಗಳಿವೆ, ಕೋಟೆಕೊತ್ತಲಗಳಿವೆ' ಎಂದು ಆ ಕಾಲದಲ್ಲಿ ನೀನು
ಕೇಳಿದ್ದುಂಟು. ಅವರೆಲ್ಲರನ್ನು ಓಡಿಸಿಬಿಡಲು ಸರ್ವೇಶ್ವರ ತಮ್ಮ ಮಾತಿಗನುಸಾರ ನನಗೆ
ಸಹಾಯಮಾಡುವರೆಂಬ ನಂಬಿಕೆ ನನಗಿದೆ," ಎಂದನು.

13 ಆಗ ಯೆಹೋಶುವನು ಯೆಫುನ್ನೆಯ ಮಗನಾದ ಕಾಲೇಬನನ್ನು ಆಶೀರ್ವದಿಸಿ, ಹೆಬ್ರೋನ್
ನಗರವನ್ನು ಅವನಿಗೆ ಸೊತ್ತಾಗಿ ಕೊಟ್ಟನು. 14ಕೆನಿಜ್ಜೀಯನಾದ ಯೆಫುನ್ನೆಯ ಮಗ ಕಾಲೇಬನು ಇಸ್ರಯೇಲಿನ
ದೇವರಾದ ಸರ್ವೇಶ್ವರನನ್ನು ಸಂಪೂರ್ಣವಾಗಿ ಶ್ರದ್ಧೆಯಿಂದ ಅನುಸರಿಸಿದ್ದ ರಿಂದ ಹೆಬ್ರೋನ್ ಅವನಿಗೆ
ಸೊತ್ತಾಗಿ ಸಿಕ್ಕಿತು. ಅದು ಇಂದಿನವರೆಗೂ ಅವನದೇ ಆಗಿದೆ. ಅದರ ಹಿಂದಿನ ಹೆಸರು 'ಕಿರ್ಯತ್ ಅರ್ಬ'
ಎಂದು. ಅರ್ಬ ಎಂಬವನು ಈ ಎತ್ತರದ ವ್ಯಕ್ತಿಗಳಲ್ಲಿ ಪ್ರಮುಖನು. ಯುದ್ಧವು ನಿಂತಿತು. ನಾಡನಲ್ಲಿ
ಶಾಂತಿಸಮಾಧಾನ ನೆಲೆಸಿತು.

## ಯೆಹೂದ್ಯ ಕುಲಕ್ಕೆ ದೊರಕಿದ ಆಸ್ತಿ

**15** ಎದೋಮ್ ನಾಡು ಹಾಗೂ ಚಿನ್ ಮರುಭೂಮಿಯ ಎಲ್ಲೆಯಾಗಿರುವ ಕಾನಾನ್ ನಾಡಿನ ದಕ್ಷಿಣ
ಭಾಗವು ಯೆಹೂದ ಕುಲದ ಗೋತ್ರಗಳಿಗೆ ದೊರಕಿದ ಸೊತ್ತು. 2ಅದರ ದಕ್ಷಿಣದ ಎಲ್ಲೆ, ಲವಣ ಸಮುದ್ರದ
ತೆಂಕಣ ತುದಿಯಿಂದ ತೊಡಗಿ 3ಅಕ್ರಬ್ಬೀಮ್ ಎಂಬ ಕೊಲ್ಲಿಯ ದಕ್ಷಿಣಮಾರ್ಗವಾಗಿ ಚಿನ್‍ಗೆ ಹೋಗುತ್ತದೆ.
4ಅಲ್ಲಿಂದ ಕಾದೇಶ್ ಬರ್ನೇಯದ ದಕ್ಷಿಣ ಮಾರ್ಗವಾಗಿ ಹೆಬ್ರೋನಿಗೂ ಅಲ್ಲಿಂದ ಏರುತ್ತಾ ಅದ್ದಾರಿಗೂ
ಹೋಗಿ ಕರ್ಕದ ಕಡೆಗೆ ತಿರುಗಿಕೊಳ್ಳುತ್ತದೆ. ಅಚ್ಮೋನಿನ ಮೇಲೆ ಈಜಿಪ್ಟಿನ ನದಿಗೆ ಬಂದು ಸಮುದ್ರತೀರದಲ್ಲಿ
ಮುಕ್ತಾಯಗೊಳ್ಳುತ್ತದೆ. ಇದು ಅದರ ತೆಂಕಣ ಎಲ್ಲೆ.

5 ಜೋರ್ಡನ್ ನದಿಯ ಮುಖದಿಂದ ಲವಣಸಮುದ್ರವೆಲ್ಲ ಅದರ ಪೂರ್ವದಿಕ್ಕಿನ ಎಲ್ಲೆ ಆಗಿದೆ.
6ಅದರ ಉತ್ತರ ದಿಕ್ಕಿನ ಎಲ್ಲೆ ಜೋರ್ಡನ್ ನದಿಯು ಲವಣಸಮುದ್ರವನ್ನು ಕೂಡುವ ಸ್ಥಳದಿಂದ ತೊಡಗಿ
ಬೇತ್ ಹೊಗ್ಲಾ, ಬೇತ್ ಅರಾಬದ ಉತ್ತರ ಪ್ರಾಂತ್ಯ, ರೂಬೇನನ ಮಗ ಬೋಹನನ ಬಂಡೆ, ಆಕೋರಿನ
ಕಣಿವೆ 7ಇವುಗಳ ಮೇಲೆ ದೆಬೀರಿಗೆ ಹೋಗುತ್ತದೆ. ಅದು ಅಲ್ಲಿಂದ ಉತ್ತರಕ್ಕೆ ತಿರುಗಿಕೊಂಡು ನದಿಯ
ದಕ್ಷಿಣದಲ್ಲಿರುವ ಅದುಮ್ಮಿಮಿಗೆ ಹೋಗುವ ದಾರಿಯ ಎದುರಿನಲ್ಲಿರುವ ಗಿಲ್ಗಾಲ್, ಏನ್ ಷೆಮೆಷ್ ಎನ್ನುವ
ಬುಗ್ಗೆ, ಏನ್‍ರೋಗೆಲ್ ಇವುಗಳ ಮೇಲೆ 8ಬೆನ್‍ಹಿನ್ನೋಮನ ಕಣಿವೆಗೆ ಹೋಗುತ್ತದೆ. ಅಲ್ಲಿಂದ ಅದು
ಜೆರುಸಲೇಮ್ ನಗರವು ಕಟ್ಟಲ್ಪಟ್ಟಿರುವ ಯೆಬೂಸಿಯರ ಬೆಟ್ಟದ ದಕ್ಷಿಣ ಮಾರ್ಗವಾಗಿ ಹಿನ್ನೋಮ್
ಕಣಿವೆಯ ಪಶ್ಚಿಮದಲ್ಲೂ ರೆಫಾಯಿಮ್ ಕಣಿವೆಯ ಉತ್ತರದಲ್ಲೂ ಇರುವ ಬೆಟ್ಟದ ತುದಿಗೆ ಹೋಗುತ್ತದೆ.
9ಅದು ಆ ಬೆಟ್ಟದ ತುದಿಯಿಂದ ಮುಂದೆ ನೆಫ್ತೋಹ ಬುಗ್ಗೆ, ಎಫ್ರೋನ್ ಬೆಟ್ಟದ ನಗರಗಳು ಇವುಗಳ ಮೇಲೆ
ಕಿರ್ಯತ್ಯಾರೀಮ್ ಎನಿಸಿಕೊಳ್ಳುವ ಬಾಲಾ ಎಂಬ ಊರಿಗೆ ಹೋಗುತ್ತದೆ. 10ಅಲ್ಲಿಂದ ಪಶ್ಚಿಮದಲ್ಲಿ ಇರುವ
ಸೇಯಿರ್ ಬೆಟ್ಟದ ಕಡೆಗೆ ತಿರುಗಿಕೊಂಡು ಕೆಸಾಲೋನ್ ಎನಿಸಿಕೊಳ್ಳುವ ಯಾರೀಮ್ ಬೆಟ್ಟದ
ಉತ್ತರಮಾರ್ಗವಾಗಿ ಇಳಿಯುತ್ತಾ ಬೇತ್‍ಷೆ ಮೆಷಿಗೂ ಅಲ್ಲಿಂದ ತಿಮ್ನಾ ಊರಿಗೂ ಬಂದು 11ಅಲ್ಲಿಂದ
ಉತ್ತರ ದಿಕ್ಕಿನಲ್ಲಿರುವ ಎಕ್ರೋನ್ ಗುಡ್ಡಕ್ಕೆ ಹೋಗಿ ಶಿಕ್ಕೆರೋನಿಗೆ ತಿರುಗಿಕೊಂಡು ಬಾಲಾಗುಡ್ಡದ ಮೇಲೆ
ಯೆಬ್ನೇಲಿಗೆ ಹೋಗಿ ಸಮುದ್ರ ತೀರದಲ್ಲಿ ಮುಗಿಯುತ್ತದೆ. 12ಮಹಾಸಾಗರದ ತೀರವೇ ಪಶ್ಚಿಮ ಎಲ್ಲೆ.
ಯೆಹೂದ ಗೋತ್ರಗಳ ನಾಡಿನ ಸುತ್ತಣ ಎಲ್ಲೆಗಳು ಇವೇ.

## ಕಾಲೇಬನಿಗೆ ಕೊಡಲಾದ ಹೆಬ್ರೋನ್

(ನ್ಯಾಯ. 1.11-15)

13 ಯೆಹೋಶುವನು ಸರ್ವೇಶ್ವರನ ಅಪ್ಪಣೆಯಂತೆ ಯೆಫುನ್ನೆಯ ಮಗ ಕಾಲೇಬನಿಗೆ ಯೆಹೂದ
ಕುಲದವರ ನಡುವೆ ಅನಾಕನ ತಂದೆ ಆದ ಅರ್ಬನ ನಗರವಾಗಿದ್ದ ಹೆಬ್ರೋನನ್ನು ಕೊಟ್ಟನು. 14ಕಾಲೇಬನು
ಶೇಷೈ, ಅಹೀಮನ್, ತಲ್ಮೈ ಎಂಬ ಅನಾಕನ ಮೂರು ಮಂದಿ ಮಕ್ಕಳನ್ನು ಅಲ್ಲಿಂದ ಹೊರಡಿಸಿಬಿಟ್ಟನು.
15ಅನಂತರ ಅವನು ಹೊರಟು ಕಿರ್ಯತ್‍ಸೇಫರ್ ಎನ್ನಿಸಿಕೊಳ್ಳುತ್ತಿದ್ದ ದೆಬೀರಿನ ನಿವಾಸಿಗಳೊಡನೆ
ಯುದ್ಧಮಾಡಿದನು. 16ಅವನು, "ಕಿರ್ಯತ್‍ಸೇಫೆರದ ಮೇಲೆ ದಾಳಿ ಮಾಡಿ ಹಿಡಿದುಕೊಳ್ಳುವವನಿಗೆ ನನ್ನ
ಮಗಳಾದ ಅಕ್ಸಾ ಎಂಬಾಕೆಯನ್ನು ಮದುವೆಮಾಡಿಕೊಡುತ್ತೇನೆ," ಎಂದನು. 17ಕೆನಜನ ಮಗನೂ ಕಾಲೇಬನ
ತಮ್ಮನೂ ಆದ ಒತ್ನಿಯೇಲನು ಅದರ ಮೇಲೆ ದಾಳಿಮಾಡಿ ತೆಗೆದುಕೊಂಡನು. ಅವನಿಗೆ ಕಾಲೇಬನು ತನ್ನ
ಮಗಳಾದ ಅಕ್ಸಾ ಎಂಬಾಕೆಯನ್ನು ಮದುವೆ ಮಾಡಿಕೊಟ್ಟನು. 18ಆಕೆ ಮನೆ ಸೇರಿದಾಗ ತನ್ನ ತಂದೆಯ ಬಳಿ
ಭೂಮಿಯನ್ನು ಕೇಳಬೇಕೆಂದು ಒತ್ನಿಯೇಲನು ಅವಳನ್ನು ಪ್ರೋತ್ಸಾಹಿಸಿದನು. ಅಂತೆಯೇ ಅವಳು ಹೊರಟು
ಹೇಸರಗತ್ತೆ ಮೇಲಿಂದ ಇಳಿದದ್ದೇ ಕಾಲೇಬನು, "ನಿನಗೇನು ಬೇಕು?" ಎಂದು ಕೇಳಿದನು. 19ಅವಳು,
"ನನಗೊಂದು ಕೊಡುಗೆ ಬೇಕು. ನನ್ನನ್ನು ಬೆಂಗಾಡಿಗೆ ಕೊಟ್ಟುಬಿಟ್ಟಿದ್ದೀರಲ್ಲವೆ? ಬುಗ್ಗೆಗಳಿರುವ ಸ್ಥಳವನ್ನು
ನನಗೆ ಕೊಡಿ," ಎಂದಳು. ಆಗ ಕಾಲೇಬನು ಅವಳಿಗೆ ಬುಗ್ಗೆಗಳಿದ್ದ ಮೇಲಣ ಹಾಗೂ ಕೆಳಗಣ ಸ್ಥಳಗಳನ್ನು
ಕೊಟ್ಟನು.

## ಯೆಹೂದ ಕುಲದವರಿಗೆ ದೊರೆತ ನಗರಗಳು ಹಾಗೂ ಗ್ರಾಮಗಳು

20 ಯೆಹೂದಕುಲದ ಗೋತ್ರಗಳಿಗೆ ಸಿಕ್ಕಿದ ಸೊತ್ತಿನ ವಿವರ: 21ಎದೋಮ್ ಪ್ರಾಂತ್ಯವು
ಮೇರೆಯಾಗಿರುವ ದಕ್ಷಿಣ ಭಾಗದಲ್ಲಿ ಕಬ್ಜೇಲ್, ಎದೆರ್, ಯಾಗೂರ್, 22-23ಕೀನಾ, ದೀಮೋನಾ, ಅದಾದಾ,
ಕೆದೆಷ್, ಹಾಚೋರ್, ಇತ್ನಾನ್, 24ಜೀಫ್, ಟೆಲೆಮ್, ಬೆಯಾಲೋತ್, 25ಹಾಚೋರ್ ಹದತ್ತಾ, ಹಾಚೋರ್
ಎಂಬವ 26ಕಿರ್ಯೋತ್, ಹೆಚ್ರೋನ್, ಅಮಾಮ್, ಶೆಮ, 27ಮೋಲಾದ, ಹಚರ್‍ಗದ್ದಾ, ಹೆಷ್ಮೋನ್,
ಬೆತ್ಪೆಲೆಟ್, ಹಚರ್‍ಷೂವಾಲ್, 28ಬೇರ್ಷೆಬ, ಬಿಜ್ಯೋತ್ಯಾ, 29-30ಬಾಲಾ, ಇಯ್ಯೀಮ್, ಎಚೆಮ್,
ಎಲ್ತೋಲದ್, ಕೆಸೀಲ್, ಹೊರ್ಮಾ, 31ಚಿಕ್ಲಗ್, ಮದ್ಮನ್ನಾ, ಸನ್ಸನ್ನಾ, 32ಲೆಬಾವೋತ್, ಶಿಲ್ಹೀಮ್, ಅಯಿನ್,
ರಿಮ್ಮೋನ್ ಎಂಬ ಇಪ್ಪತ್ತೊಂಬತ್ತು ನಗರಗಳು ಮತ್ತು ಅವುಗಳಿಗೆ ಸೇರಿದ ಗ್ರಾಮಗಳು.

33 ಇಳಿಜಾರು ಪ್ರದೇಶದಲ್ಲಿ 34ಎಷ್ಟಾವೋಲ್, ಚೊರ್ಗಾ, ಅಶ್ನಾ, ಜನೋಹ, ಎಂಗನ್ನೀಮ್,
35ತಪ್ಪೂಹ, ಏನಾಮ್, ಯರ್ಮೂತ್, 36ಅದು ಲ್ಲಾಮ್, ಸೋಕೋ, ಅಜೇಕಾ, ಶಾರಯಿಮ್,
ಅದೀತಯಿಮ್, ಗೆದೇರಾ, ಗೆದೆರೋತಯಿಮ್ ಎಂಬ ಹದಿನಾಲ್ಕು ನಗರಗಳು ಮತ್ತು ಅವುಗಳಿಗೆ ಸೇರಿದ
ಗ್ರಾಮಗಳು. 37-38ಚೆನಾನ್, ಹದಾಷಾ, ಮಿಗ್ದಲ್ಗಾದ್, ದಿಲಾನ್, ಮಿಚ್ಪೆ, ಯೊಕ್ತೇಲ್, 39ಲಾಕೀಷ್, ಬೊಚ್ಕತ್,
ಎಗ್ಲೋನ್, 40ಕಬ್ಬೋನ್, ಲಹ್ಮಾಮ್, ಕಿತ್ಲೀಷ್, ಗೆದೇರೋತ್, ಬೇತ್‍ದಾಗೋನ್, ನಾಮಾ, 41ಮಕ್ಕೇದಾ
ಎಂಬ ಹದಿನಾರು ನಗರಗಳು, ಅವುಗಳ ಗ್ರಾಮಗಳು; 42-43ಲಿಬ್ನಾ, ಎತೆರ್, ಅಷಾನ್, ಇಫ್ತಾಹ, 44ಆಶ್ನಾ,
ನೆಚೀಬ್, ಕೆಯೀಲಾ, ಅಕ್ಜೀಬ್, ಮಾರೇಷಾ ಎಂಬ ಒಂಬತ್ತು ನಗರಗಳು ಮತ್ತು ಅವುಗಳಿಗೆ ಸೇರಿದ
ಗ್ರಾಮಗಳು.

45 ಎಕ್ರೋನ್ ಸಂಸ್ಥಾನ ಮತ್ತು ಅದಕ್ಕೆ ಸೇರಿದ ಗ್ರಾಮ-ನಗರಗಳು; 46ಎಕ್ರೋನಿನಿಂದ
ಸಮುದ್ರದವರೆಗೆ ಅಷ್ಡೋದಿನ ಬಳಿಯಲ್ಲಿರುವ ಸಮಸ್ತ ಗ್ರಾಮಗಳು; 47ಅಷ್ಡೋದ್ ಸಂಸ್ಥಾನ ಮತ್ತು ಅದರ
ಗ್ರಾಮ-ನಗರಗಳು; ಗಾಜಾ ಸಂಸ್ಥಾನ ಹಾಗೂ ಈಜಿಪ್ಟಿನ ನದಿಯ ಹತ್ತಿರದಲ್ಲಿ ಮತ್ತು ಮಹಾಸಾಗರದ
ತೀರದಲ್ಲಿ ಇರುವ ಅದರ ಎಲ್ಲ ಗ್ರಾಮ, ನಗರಗಳು.

48 ಮಲೆನಾಡಿನ ಪ್ರದೇಶದಲ್ಲಿರುವ ಶಾಮೀರ್, ಯತ್ತೀರ್, ಸೋಕೋ, 49-50ದನ್ನಾ, ದೆಬೀರ್
ಎಂಬ ಕಿರ್ಯತ್‍ಸನ್ನಾ, ಅನಾಬ್, 51ಎಷ್ಟೆಮೊ, ಅನೀಮ್, ಗೊಷೆನ್, ಹೋಲೋನ್, ಗಿಲೋ ಎಂಬ
ಹನ್ನೊಂದು ನಗರಗಳು ಮತ್ತು ಅವುಗಳಿಗೆ ಸೇರಿದ ಗ್ರಾಮಗಳು.

52 ಅರಬ್, ದೂಮಾ, ಎಷಾನ್, [53–54]ಯಾನೂಮ್, ಬೇತ್‌ತಪ್ಪೂಹ, ಅಫೇಕಾ, ಹುಮ್ತಾ, ಹೆಬ್ರೋನ್ ಎಂಬ ಕಿರ್ಯತ್‌ಅರ್ಬ, ಚಿಯೋರ್ ಎಂಬ ಒಂಬತ್ತು ನಗರಗಳು, ಅವುಗಳ ಗ್ರಾಮಗಳು.

55 ಮಾವೋನ್, ಕರ್ಮೆಲ್, ಜೀಫ್, ಯುಟ್ಟಾ, [56–57]ಇಜ್ರೇಲ್, ಯೊಗ್ದೆಯಾಮ್, ಜನೋಹ, ಕಯಿನ್, ಗಿಬೆಯಾ, ತಿಮ್ನಾ ಎಂಬ ಹತ್ತು ನಗರಗಳು ಮತ್ತು ಅವುಗಳ ಗ್ರಾಮಗಳು.

58 ಹಲ್ಹೂಲ್, ಬೇತ್‌ಚೂರ್, ಗೆದೋರ್, [59]ಮಾರಾತ್, ಬೇತನೋತ್ ಎಲ್ಟೆಕೋನ್ ಎಂಬ ಆರು ನಗರಗಳು ಮತ್ತು ಅವುಗಳಿಗೆ ಸೇರಿದ ಗ್ರಾಮಗಳು.

60 ಕಿರ್ಯಾತ್ಯಾರಿಮ್ ಅನ್ನಿಸಿಕೊಳ್ಳುವ ಕಿರ್ಯತ್‌ಬಾಳ್, ರಬ್ಬಾ ಎಂಬ ಎರಡು ನಗರಗಳು ಮತ್ತು ಅವುಗಳ ಗ್ರಾಮಗಳು.

61 ಮರುಭೂಮಿಯಲ್ಲಿರುವ ಬೇತ್ ಅರಾಬಾ, [62]ಮಿದ್ದೀನ್, ಸೆಕಾಕಾ, ನಿಬಾನ್ ಉಪ್ಪಿನಪಟ್ಟಣ, ಏಂಗೆದೀ ಎಂಬ ಆರು ನಗರಗಳು ಮತ್ತು ಅವುಗಳ ಗ್ರಾಮಗಳು.

63 ಜೆರುಸಲೇಮಿನಲ್ಲಿ ವಾಸವಾಗಿದ್ದ ಯೆಬೂಸಿಯರನ್ನು ಹೊರಡಿಸಲು ಯೆಹೂದ ಕುಲದವರಿಂದ ಆಗದೆ ಹೋಯಿತು. ಆದುದರಿಂದ ಅವರು ಇಂದಿನವರೆಗೂ ಯೆಹೂದ ಕುಲದವರೊಡನೆ ಜೆರುಸಲೇಮಿನಲ್ಲೇ ವಾಸವಾಗಿದ್ದಾರೆ.

### ಎಫ್ರಯಿಮ್, ಮನಸ್ಸೆ ಕುಲಗಳ ಸೊತ್ತು

**16** ಜೋಸೆಫನ ವಂಶದವರಿಗೆ ದೊರಕಿದ ಆಸ್ತಿಪಾಸ್ತಿಯ ಎಲ್ಲೆಯು ಜೆರಿಕೋವಿನ ಬಳಿಯಲ್ಲಿ ಜೋರ್ಡನ್ ತೀರದಿಂದ ತೊಡಗಿ ಜೆರಿಕೋವಿನ ಪೂರ್ವದಲ್ಲಿದ್ದ ನದಿ, ಜೆರಿಕೋವಿಗೂ ಬೇತೇಲಿಗೂ ನಡುವೆ ಇರುವ ಮಲೆನಾಡಿನ ಮರುಭೂಮಿ ಹಾಗೂ ಬೇತೇಲ್ ಇವುಗಳ ಮೇಲೆ ಲೂಜಿಗೆ ಹೋಗುತ್ತದೆ. [2]ಅಲ್ಲಿಂದ ಅರ್ಕೀಯರ ಎಲ್ಲೆಯನ್ನು ಅನುಸರಿಸಿ ಅಟಾರೋತಿಗೆ ಹೋಗುತ್ತದೆ. [3]ಅಲ್ಲಿಂದ ಇಳಿದು ಪಶ್ಚಿಮ ದಿಕ್ಕಿನಲ್ಲಿರುವ ಯಫ್ಲೇಟ್ಯರ ಪ್ರಾಂತ್ಯವನ್ನು ಮುಟ್ಟಿ ಕೆಳಗಿನ ಬೇತ್‌ಹೋರೋನಿನ ಮೇಲೆ ಗೆಜೆರಿಗೆ ಹೋಗಿ ಸಮುದ್ರ ತೀರದಲ್ಲಿ ಮುಕ್ತಾಯಗೊಳ್ಳುತ್ತದೆ.

4 ಇದು ಜೋಸೆಫನ ಮಕ್ಕಳಾದ ಮನಸ್ಸೆ–ಎಫ್ರಯಿಮ್ ಎಂಬ ಕುಲಗಳಿಗೆ ದೊರೆತ ಸೊತ್ತಿನ ಎಲ್ಲೆ.

### ಎಫ್ರಯಿಮ್ ಕುಲದ ಆಸ್ತಿ

5 ಎಫ್ರಯಿಮ್ ಗೋತ್ರಗಳ ನಾಡಿನ ದಕ್ಷಿಣ ದಿಕ್ಕಿನ ಎಲ್ಲೆ ಆಟಾರೋತದ್ದಾರಿನ ಪೂರ್ವ ದಿಕ್ಕಿನಿಂದ ತೊಡಗಿ ಮೇಲಿನ ಬೇತ್‌ಹೋರೋನಿನ ಮೇಲೆ ಸಮುದ್ರ ತೀರಕ್ಕೆ ಹೋಗಿ ಅಲ್ಲಿ ಮುಕ್ತಾಯಗೊಳ್ಳುತ್ತದೆ. ಅದರ ಉತ್ತರ ದಿಕ್ಕಿನ ಎಲ್ಲೆ ಮಿಕ್ಮೆತಾತ್ ಎಂಬಲ್ಲಿ ತೊಡಗಿ ಪೂರ್ವಕ್ಕೆ ತಿರುಗಿಕೊಂಡು ತಾನತ್‌ಶೀಲೋ ಎಂಬಲ್ಲಿಗೆ ಹೋಗುತ್ತದೆ. [6–7]ಅಲ್ಲಿಂದ ಯಾನೋಹ ಊರಿನ ಪೂರ್ವಮಾರ್ಗವಾಗಿ ಅಟಾರೋತ್, ನಾರಾ ಎಂಬ ಊರುಗಳ ಮೇಲೆ ಇಳಿಯುತ್ತಾ ಜೆರಿಕೋ ಪ್ರಾಂತ್ಯಕ್ಕೆ ಸೋಂಕಿ ಜೋರ್ಡನ್ ನದಿಯ ತೀರದಲ್ಲಿ ಮುಕ್ತಾಯಗೊಳ್ಳುತ್ತದೆ. [8]ಅದರ ಎಲ್ಲೆ ತಪ್ಪೂಹದಿಂದ ಪಶ್ಚಿಮ ಕಡೆಗೆ ಹೋಗುವ ಕಾನಾ ನದಿಯನ್ನು ಅನುಸರಿಸಿ ಸಮುದ್ರ ತೀರದಲ್ಲಿ ಮುಕ್ತಾಯಗೊಳ್ಳುತ್ತದೆ. ಎಫ್ರಯಿಮ್ ಕುಲದ ಗೋತ್ರಗಳಿಗೆ ಸಿಕ್ಕಿದ ಸೊತ್ತು ಇದೇ. [9]ಇದಲ್ಲದೆ, ಎಫ್ರಯಿಮ್ ಕುಲದವರಿಗೆ ಮನಸ್ಸೆ ಕುಲದವರ ಮಧ್ಯೆ ಪ್ರತ್ಯೇಕವಾದ ಕೆಲವು ನಗರಗಳೂ ಅವಕ್ಕೆ ಸೇರಿದ ಗ್ರಾಮಗಳೂ ದೊರಕಿದವು. [10]ಅವರು ಗೆಜೆರಿನಲ್ಲಿದ್ದ ಕಾನಾನ್ಯರನ್ನು ಹೊರಡಿಸದೆ ಹೋದುದರಿಂದ ಅವರು ಇಂದಿಗೂ ಎಫ್ರಯಿಮ್ಯರ ನಡುವೆ ಊಳಿಗದವರಾಗಿದ್ದುಕೊಂಡು ಅವರಿಗೆ ಸೇವೆ ಮಾಡುತ್ತಾರೆ.

### ಮನಸ್ಸೆ ಕುಲದ ಆಸ್ತಿಪಾಸ್ತಿ

**17** ಜೋಸೆಫನ ಚೊಚ್ಚಲ ಮಗ ಮನಸ್ಸೆಯ ವಂಶದವರಿಗೆ ದೊರಕಿದ ಸೊತ್ತಿನ ವಿವರ ಇದು: ಮನಸ್ಸೆಯ ಹಿರಿಯ ಮಗನೂ ಗಿಲ್ಯಾದನ ತಂದೆಯೂ ಆದ ಮಾಕೀರನು ಯುದ್ಧವೀರನು. ಆದ್ದರಿಂದ ಅವನಿಗೆ

ಗಿಲ್ಯಾದ, ಬಾಷಾನ ಎಂಬ ಪ್ರಾಂತ್ಯಗಳು ಸಿಕ್ಕಿದವು. 2ಜೋಸೆಫನ ಮಗ ಮನಸ್ಸೆಯ ಉಳಿದ ಗಂಡು
ಮಕ್ಕಳಾದ ಅಬೀಯೆಜೆರ್, ಹೇಲೆಕ್, ಅಸ್ರೀಯೇಲ್, ಶೆಕೆಮ್, ಹೇಫೆರ್, ಶಮೀದಾ, ಎಂಬವರ
ವಂಶದವರಿಗೆ ಜೋರ್ಡನಿನ ಈಚೆಕಡೆ ಪಾಲು ಸಿಕ್ಕಿತು. 3ಮನಸ್ಸೆಗೆ ಹುಟ್ಟಿದ ಮಾಕೀರನ ಮರಿಮಗನೂ
ಗಿಲ್ಯಾದನ ಮೊಮ್ಮಗನೂ ಹೇಫೆರನ ಮಗನೂ ಆದ ಚಲ್ಪಹಾದನಿಗೆ ಹೆಣ್ಣು ಮಕ್ಕಳು ಹುಟ್ಟಿದರೇ ಹೊರತು
ಗಂಡು ಮಕ್ಕಳು ಆಗಲಿಲ್ಲ. ಮಹ್ಲಾ, ನೋವಾ, ಹೊಗ್ಲಾ, ಮಿಲ್ಕಾ, ತಿರ್ಚಾ ಎಂಬವರು ಅವನ ಹೆಣ್ಣುಮಕ್ಕಳು.
4ಇವರು ಮಹಾಯಾಜಕನಾದ ಎಲ್ಲಾಜಾರ್, ನೂನನ ಮಗ ಯೆಹೋಶುವ ಹಾಗೂ ಕುಲಾಧಿಪತಿಗಳ ಬಳಿಗೆ
ಬಂದು, "ನಮ್ಮ ಅಣ್ಣತಮ್ಮಂದಿರೊಡನೆ ನಮಗೂ ಪಾಲುಕೊಡಬೇಕೆಂದು ಸರ್ವೇಶ್ವರ ಮೋಶೆಗೆ
ಆಜ್ಞಾಪಿಸಿದ್ದಾರಲ್ಲವೆ?" ಎಂದು ಹೇಳಿದರು. ಯೆಹೋಶುವನು ಸರ್ವೇಶ್ವರನ ಅಪ್ಪಣೆಯಂತೆ ಅವರಿಗೆ ಅವರ
ತಂದೆಯ ಅಣ್ಣತಮ್ಮಂದಿರ ಜೊತೆಗೆ ಸೊತ್ತನ್ನು ಪಾಲಾಗಿ ಕೊಟ್ಟನು. 5ಮನಸ್ಸೆ ಕುಲದ ಹೆಣ್ಣುಮಕ್ಕಳಿಗೆ
ಗಂಡುಮಕ್ಕಳ ಸಮೇತ ಸೊತ್ತು ದೊರಕಿದ್ದರಿಂದ ಮನಸ್ಸೆಯವರಿಗೆ ಜೋರ್ಡನಿನ ಆಚೆಯಿದ್ದ ಬಾಷಾನ್
ಮತ್ತು ಗಿಲ್ಯಾದ್ ಪ್ರಾಂತ್ಯಗಳ ಜೊತೆಗೆ ಈಚೆಯಲ್ಲೂ ಹತ್ತು ಪಾಲು ಸಿಕ್ಕಿದವು. 6ಗಿಲ್ಯಾದ್ ನಾಡು ಮನಸ್ಸೆಯ
ಉಳಿದ ಗೋತ್ರಗಳಿಗೆ ಸಿಕ್ಕಿತು.

7 ಮನಸ್ಸೆಯವರ ಸೊತ್ತಿನ ಎಲ್ಲೆ ಆಶೇರ್ ಊರಿನಿಂದ ತೊಡಗಿ ಶೆಕೆಮಿನ ಪೂರ್ವದಲ್ಲಿ ಇರುವ
ಮಿಕ್ಮೆತಾತಿನ ಮೇಲೆ ದಕ್ಷಿಣದಲ್ಲಿರುವ ತಪ್ಪೂಹದ ಬುಗ್ಗೆಗೆ ಹೋಗುತ್ತದೆ. 8ತಪ್ಪೂಹ ನಗರಕ್ಕೆ ಸೇರುವ ಭೂಮಿ
ಮನಸ್ಸೆಯವರದು; ಆದರೆ ಅವರ ಸರಹದ್ದಿನಲ್ಲಿರುವ ತಪ್ಪೂಹ ನಗರ ಎಫ್ರಯಿಮ್ಯರದು. 9ಅಲ್ಲಿಂದ ಅವರ
ಎಲ್ಲೆ ಇಳಿಯುತ್ತಾ ಕಾನಾ ಹಳ್ಳದ ದಕ್ಷಿಣಕ್ಕೆ ಹೋಗುತ್ತದೆ. ಅಲ್ಲಿ ಮನಸ್ಸೆಯವರಿಗೆ ಇರುವಂತೆ
ಎಫ್ರಯಿಮ್ಯರಿಗೂ ಕೆಲವು ಪಟ್ಟಣಗಳಿವೆ. ಮನಸ್ಸೆಯವರ ಮುಂದಿನ ಎಲ್ಲೆಯು ಹಳ್ಳದ ಉತ್ತರ ತೀರವನ್ನು
ಅನುಸರಿಸಿ ಹೋಗಿ ಸಮುದ್ರದ ದಡದಲ್ಲಿ ಮುಕ್ತಾಯಗೊಳ್ಳುತ್ತದೆ. 10ಆ ಹಳ್ಳದ ದಕ್ಷಿಣ ತೀರ
ಎಫ್ರಯಿಮ್ಯರದು; ಉತ್ತರ ತೀರ ಮನಸ್ಸೆಯವರದು. ಸಮುದ್ರವೇ ಇವರ ಪಶ್ಚಿಮದ ಎಲ್ಲೆ. ಉತ್ತರಕ್ಕೆ ಆಶೇರ
ಕುಲದವರ ಪ್ರಾಂತ್ಯವೂ ಪೂರ್ವಕ್ಕೆ ಇಸ್ಸಾಕಾರ್ ಕುಲದವರ ನಾಡೂ ಇರುತ್ತವೆ.

11 ಇದಲ್ಲದೆ ಮನಸ್ಸೆಯವರಿಗೆ ಇಸ್ಸಾಕಾರ್, ಆಶೇರ್ ಎಂಬುವರ ಪ್ರಾಂತ್ಯಗಳಲ್ಲಿ ಬೇತ್‍ಷೆಯಾನ್,
ಇಬ್ಲೆಯಾಮ್, ದೋರ್ ಎಂಬ ನಗರಗಳೂ ಅವುಗಳ ಗ್ರಾಮಗಳೂ ದುರ್ಗತ್ರಯವಾದ ಎಂದೋರ್,
ತಾನಕ್, ಮೆಗಿದ್ದೋ ಎಂಬ ನಗರಗಳೂ ಅವುಗಳಿಗೆ ಸೇರಿದ ಊರುಗಳೂ ಸಿಕ್ಕಿದವು. 12ಆದರೆ
ಮನಸ್ಸೆಯವರು ಆ ನಗರಗಳ ನಿವಾಸಿಗಳನ್ನು ಹೊರದೂಡಲಾಗಲಿಲ್ಲ. ಕಾನಾನ್ಯರಿಗೆ ಅಲ್ಲೇ ವಾಸಿಸಲು
ಅನುಕೂಲವಾಯಿತು. 13ಇಸ್ರಯೇಲರು ಬಲಗೊಂಡ ಮೇಲೂ ಕಾನಾನ್ಯರನ್ನು ಹೊರದೂಡದೆ ಅವರನ್ನು
ಜೀತದಾರರನ್ನಾಗಿಸಿಕೊಂಡರು.

**ಹೆಚ್ಚಿನ ಭೂಮಿಗಾಗಿ ಎಫ್ರಯಿಮ್ ಮತ್ತು ಮನಸ್ಸೆಯವರ ಮನವಿ**

14 ಜೋಸೆಫ್ಯರು ಯೆಹೋಶುವನಿಗೆ, "ನೀವು ಚೀಟು ಹಾಕಿ, ನಮಗೆ ಒಂದೇ ಒಂದು ಭಾಗವನ್ನು
ಕೊಟ್ಟಿದ್ದೀರಿ, ಇದು ಸರಿಯೆ? ಸರ್ವೇಶ್ವರಸ್ವಾಮಿ ನಮ್ಮನ್ನು ಇಂದಿನವರೆಗೂ ಆಶೀರ್ವದಿಸಿ ನಮ್ಮನ್ನು
ಮಹಾಜನಾಂಗವಾಗಿಸಿದ್ದಾರಲ್ಲವೆ?" ಎಂದು ಕೇಳಿಕೊಂಡರು.

15 ಅದಕ್ಕೆ ಯೆಹೋಶುವನು, "ಮಹಾ ಜನಾಂಗವಾದ ನಿಮಗೆ ಎಫ್ರಯಿಮ್ ಮಲೆನಾಡು
ಸಾಲದಿದ್ದರೆ ಪೆರಿಜ್ಜೀಯರ ಮತ್ತು ರೆಫಾಯರ ನಾಡುಗಳಿಗೆ ಹೋಗಿ ಅಲ್ಲಿನ ಕಾಡು ಕಡಿದು ಸ್ಥಳ
ಮಾಡಿಕೊಳ್ಳಿ," ಎಂದನು.

16 ಅವರು ಮತ್ತೆ ಯೆಹೋಶುವನಿಗೆ, "ನಮ್ಮ ಮಲೆನಾಡು ನಮಗೆ ಸಾಲುವುದಿಲ್ಲ. ಬೇತ್‍ಷೆಯಾನ್
ಮತ್ತು ಅದಕ್ಕೆ ಸೇರಿದ ಊರುಗಳಿರುವ ಕಣಿವೆಯಲ್ಲೂ ಹಾಗೂ ಇಜ್ರೇಲಿನ ಕಣಿವೆಯಲ್ಲೂ ವಾಸಮಾಡುವ
ಕಾನಾನ್ಯರೆಲ್ಲರು ಕಬ್ಬಿಣದ ರಥವುಳ್ಳವರು," ಎಂದರು.

17 ಯೆಹೋಶುವನು ಜೋಸೆಫ್ಯರಾದ ಎಫ್ರಯಿಮ್ – ಮನಸ್ಸೆಕುಲದ ಆ ಜನರಿಗೆ, "ನೀವು
ಮಹಾಜನಾಂಗ ಹಾಗೂ ಶಕ್ತಿಶಾಲಿಗಳೆಂಬುದೇನೋ ನಿಜ. ನೀವು ಒಂದು ಪಾಲಿಗಿಂತ ಹೆಚ್ಚು
ತೆಗೆದುಕೊಳ್ಳಬಹುದಾಗಿದೆ. 18ಆ ಮಲೆ ನಾಡನ್ನು ನಿಮಗೆ ಕೊಟ್ಟಿರುತ್ತೇನೆ. ಅದರಲ್ಲಿ ಕಾಡುಗಳಿದ್ದರೂ ನೀವು

ಅವುಗಳನ್ನು ಕಡಿದು ಹಾಕಬಹುದು. ಅದಕ್ಕೆ ಸೇರಿರುವ ಬಯಲುಭೂಮಿ ನಿಮ್ಮದೇ ಕಾನಾನ್ಯರು ಬಲಿಷ್ಠರು ಹಾಗೂ ಕಬ್ಬಿಣದ ರಥಗಳುಳ್ಳವರು. ಆದರೂ ನೀವು ಅವರನ್ನು ಹೊರದೂಡಬಲ್ಲಿರಿ," ಎಂದು ಉತ್ತರ ಕೊಟ್ಟನು.

### ಉಳಿದ ಪ್ರದೇಶಗಳ ಪಟ್ಟಿ

**18** ನಾಡೆಲ್ಲವು ತಮ್ಮ ವಶವಾದ ಮೇಲೆ ಇಸ್ರಯೇಲ್ ಜನಾಂಗವೆಲ್ಲ ಶಿಲೋವಿನಲ್ಲಿ ಕೂಡಿ ದೇವದರ್ಶನದ
ಗುಡಾರವನ್ನು ನಿಲ್ಲಿಸಿದರು. [2]ಇಸ್ರಯೇಲರಲ್ಲಿ ಇನ್ನೂ ಏಳು ಕುಲಗಳಿಗೆ ಪಾಲು ಸಿಕ್ಕಿರಲಿಲ್ಲ. [3]ಆದುದರಿಂದ
ಯೆಹೋಶುವ ಅವರಿಗೆ, "ನಿಮ್ಮ ಪೂರ್ವಜರ ದೇವರಾದ ಸರ್ವೇಶ್ವರ ನಿಮಗೆ ಕೊಟ್ಟ ನಾಡನ್ನು ಸ್ವಾಧೀನ
ಮಾಡಿಕೊಳ್ಳಲು ಇನ್ನೆಷ್ಟು ತಡ ಮಾಡುತ್ತಿರುವಿರಿ? [4]ಪ್ರತಿಯೊಂದು ಕುಲದಿಂದ ಮೂರುಮೂರು
ಮಂದಿಯನ್ನು ನೇಮಿಸಿರಿ. ನಾನು ಅವರನ್ನು ಕಳುಹಿಸುವೆನು. ಅವರು ಹೋಗಿ ನಾಡಿನಲ್ಲೆಲ್ಲಾ ಸಂಚಾರ
ಮಾಡಿ ತಮ್ಮ ತಮ್ಮ ಕುಲಗಳಿಗನುಸಾರ ಎಲ್ಲಾ ಪ್ರದೇಶಗಳ ಪಟ್ಟಿಯನ್ನು ಬರೆದುಕೊಂಡು ನನ್ನ ಬಳಿಗೆ
ಬರಲಿ. [5]ತರುವಾಯ ಅವರು ಏಳು ಪಾಲುಗಳನ್ನು ಮಾಡಿ ತಮ್ಮ ತಮ್ಮೊಳಗೆ ಹಂಚಿಕೊಳ್ಳಲಿ. ದಕ್ಷಿಣದಲ್ಲಿ
ಯೆಹೂದ ಕುಲದವರಿಗೆ ಉತ್ತರದಲ್ಲಿ ಜೋಸೆಫನ ಕುಲದವರಿಗೆ ಸೊತ್ತು ಸಿಕ್ಕಿದೆ. ಅದು ಅವರಿಗೇ ಇರಲಿ.
[6]ನೀವು ನಾಡನ್ನು ಏಳು ಪಾಲಾಗಿ ವಿಂಗಡಿಸಿ ನನ್ನ ಬಳಿಗೆ ತರಬೇಕು. ನಾನು ನಮ್ಮ ದೇವರಾದ ಸರ್ವೇಶ್ವರನ
ಸನ್ನಿಧಿಯಲ್ಲಿ ನಿಮಗೋಸ್ಕರ ಚೀಟು ಹಾಕುತ್ತೇನೆ. [7]ಲೇವಿಯರಿಗೆ ನಿಮ್ಮ ಹಾಗೆ ಪಾಲು ಸಿಕ್ಕುವುದಿಲ್ಲ,
ಸರ್ವೇಶ್ವರನಿಗೆ ಸಲ್ಲಿಸುವ ಯಾಜಕ ಸೇವೆಯೇ ಅವರ ಸೊತ್ತು. ಗಾದ್ ಹಾಗೂ ರೂಬೇನ್ ಕುಲಗಳಿಗೂ
ಮನಸ್ಸೆ ಕುಲದ ಅರ್ಧ ಜನರಿಗೂ ಜೋರ್ಡನಿನ ಪೂರ್ವದಿಕ್ಕಿನಲ್ಲಿ ಸರ್ವೇಶ್ವರನ ದಾಸ ಮೋಶೆಯಿಂದಲೇ
ಸೊತ್ತು ಸಿಕ್ಕಿದೆ," ಎಂದನು.

8 ನಾಡಿನ ಅಳತೆಯನ್ನು ಮಾಡತಕ್ಕ ಜನರು ಹೊರಡುವುದಕ್ಕೆ ಮುಂಚೆ ಯೆಹೋಶುವನು ಅವರಿಗೆ,
"ಹೋಗಿ ನಾಡಿನಲ್ಲೆಲ್ಲಾ ಸಂಚರಿಸಿ ಅಳತೆಮಾಡಿ ನನ್ನ ಬಳಿ ಶೀಲೋವಿಗೆ ತನ್ನಿ. ನಾನು ಸರ್ವೇಶ್ವರನ
ಮುಂದೆ ನಿಮಗೋಸ್ಕರ ಚೀಟು ಹಾಕುತ್ತೇನೆ," ಎಂದು ಹೇಳಿ ಕಳುಹಿಸಿದನು. [9]ಆ ಜನರು ಹೊರಟು
ನಾಡಿನಲ್ಲೆಲ್ಲಾ ಸಂಚರಿಸಿ ಒಂದು ಪುಸ್ತಕದಲ್ಲಿ ಗ್ರಾಮ–ನಗರಗಳನ್ನೆಲ್ಲಾ ಬರೆದು ಏಳು ಭಾಗಗಳನ್ನಾಗಿ ಮಾಡಿ
ಶೀಲೋವಿನಲ್ಲಿದ್ದ ಯೆಹೋಶುವನ ಪಾಳೆಯಕ್ಕೆ ಹಿಂದಿರುಗಿ ಬಂದರು. [10]ಯೆಹೋಶುವನು
ಶೀಲೋವಿನಲ್ಲಿಯೇ ಸರ್ವೇಶ್ವರನ ಮುಂದೆ ಅವರಿಗೋಸ್ಕರ ಚೀಟು ಹಾಕಿ ನಾಡನ್ನು ಅವರವರ
ಪಂಗಡಗಳಿಗೆ ಹಂಚಿಕೊಟ್ಟನು.

### ಬೆನ್ಯಾಮೀನ್ ಕುಲಕ್ಕೆ ಬಂದ ಪಾಲು

11 ಚೀಟು ಮೊದಲು ಬೆನ್ಯಾಮೀನ್ ಕುಲದವರಿಗೆ ಬಿದ್ದಿತು. ಅವರ ಗೋತ್ರಗಳಿಗೆ ಸಿಕ್ಕಿದ ಸೊತ್ತು
ಯೆಹೂದಾ ಮತ್ತು ಜೋಸೆಫ್ ವಂಶಸ್ಥರ ಪ್ರಾಂತ್ಯಗಳಿಗೆ ಮಧ್ಯೆಯಿದೆ. [12]ಅದರ ಉತ್ತರ ದಿಕ್ಕಿನ ಎಲ್ಲೆ
ಜೋರ್ಡನ್ ನದಿಯಿಂದ ತೊಡಗಿ ಜೆರಿಕೋವಿನ ಉತ್ತರದಲ್ಲಿರುವ ಗುಡ್ಡದ ಮೇಲಿಂದ ಪಶ್ಚಿಮಕ್ಕೆ ಹೋಗಿ,
ದಿಣ್ಣೆ ಹತ್ತಿ ಬೆತಾವೆನಿನ ಬಯಲಿನಲ್ಲಿ ಕೊನೆಗೊಳ್ಳುತ್ತದೆ. [13]ಅಲ್ಲಿಂದ ದಕ್ಷಿಣಕ್ಕೆ ತಿರುಗಿಕೊಂಡು ಈಗ ಬೇತೇಲ್
ಎನಿಸಿಕೊಳ್ಳುವ ಲೂಜ್ ಊರಿರುವ ಬೆಟ್ಟಕ್ಕೆ ಹೋಗಿ ಅಲ್ಲಿಂದ ಇಳಿದು ಅಟಾರೋತದ್ದಾರಿನ ಮೇಲೆ ಕೆಲಗಿನ
ಬೇತ್ ಹೋರೋನಿನ ಬಳಿಯಲ್ಲಿರುವ ಬೆಟ್ಟಕ್ಕೆ ಹೋಗುತ್ತದೆ. [14]ಈ ಎಲ್ಲೆಯ ಪಶ್ಚಿಮದ ಮೂಲೆಯಾಗಿರುವ
ಈ ಬೆಟ್ಟದಿಂದ ಅದು ದಕ್ಷಿಣಕ್ಕೆ ತಿರುಗಿಕೊಂಡು, ಕಿರ್ಯತ್‌ಬಾಳ್ ಎನಿಸಿಕೊಳ್ಳುತ್ತಿದ್ದ ಯೆಹೂದ್ಯರ
ಕಿರ್ಯತ್ಯಾರೀಮ್ ಎಂಬ ನಗರದಲ್ಲಿ ಕೊನೆಗೊಳ್ಳುತ್ತದೆ. ಇದೇ ಅವರ ವಂಶಸ್ಥರ ಪಶ್ಚಿಮದ ಎಲ್ಲೆ.
[15]ದಕ್ಷಿಣದಿಕ್ಕಿನ ಎಲ್ಲೆ ಪಶ್ಚಿಮದ ಮೂಲೆಯಾಗಿರುವ ಕಿರ್ಯತ್ಯಾರೀಮಿನ ಪ್ರಾಂತ್ಯದಿಂದ ತೊಡಗಿ [16]ನೆಫ್ತೋಹ
ಬುಗ್ಗೆಯ ಮೇಲೆ ಬೆನ್‌ಹಿನ್ನೋಮ್ ಕಣಿವೆಯ ಈಚೆಗೂ ರೆಫಾಯಿಮ್ ಕಣಿವೆಯ ಉತ್ತರದಲ್ಲೂ ಇರುವ
ಬೆಟ್ಟದ ಅಂಚಿಗೆ ಹೋಗಿ ಅಲ್ಲಿಂದ ಯೆಬೂಸಿಯರ ಬೆಟ್ಟದ ದಕ್ಷಿಣದಲ್ಲಿದ್ದ ಬೆನ್‌ಹಿನ್ನೋಮ್ ಕಣಿವೆಯ
ಮಾರ್ಗವಾಗಿ ಏನ್‌ರೋಗೆಲಿಗೆ ಬರುತ್ತದೆ. [17]ಅದು ಅಲ್ಲಿಂದ ಉತ್ತರಕ್ಕೆ ತಿರುಗಿಕೊಂಡು, ಇಳಿಯುತ್ತಾ

ಏನ್‌ಷೆಮೆಸ್, ಮಿಾಮಿನ ದಾರಿಯ ಎದುರಿನಲ್ಲಿರುವ ಗೆಲೀಲೊತ್, [18]ರೂಬೇನನ ಮಗನಾದ ಬೋಹನನ
ಬಂಡೆ, ಅರಾಬಾದ ಉತ್ತರದಲ್ಲಿರುವ ಬೆಟ್ಟ ಇವುಗಳ ಮೇಲೆ ಅರಾಬಾ ಎಂಬ ಕಣಿವೆ ಪ್ರದೇಶಕ್ಕೆ
ಹೋಗುತ್ತದೆ. [19]ಅಲ್ಲಿಂದ ಆ ಎಲ್ಲೆ ಬೇತ್‌ಹೊಗ್ಲಾ ಎಂಬ ಊರಿನ ಉತ್ತರದಲ್ಲಿರುವ ಗುಡ್ಡದ ಮೇಲೆ
ಲವಣಸಮುದ್ರದ ಉತ್ತರ ಮೂಲೆಗೆ ಹೋಗಿ ಜೋರ್ಡನ್ ನದಿಯು ಆ ಸಮುದ್ರಕ್ಕೆ ಕೂಡುವ ಸ್ಥಳದಲ್ಲಿ
ಮುಗಿಯುತ್ತದೆ. ಇದೇ ದಕ್ಷಿಣದಿಕ್ಕಿನ ಸರಹದ್ದು. [20]ಜೋರ್ಡನ್ ನದಿಯೇ ಅವರ ಪೂರ್ವದಿಕ್ಕಿನ ಸರಹದ್ದು.
ಬೆನ್ಯಾಮಿನ್ ಗೋತ್ರಗಳ ಸೊತ್ತಿನ ಸುತ್ತಣ ಎಲ್ಲೆ ಇದೇ.

21 ಬೆನ್ಯಾಮಿನ್ ಗೋತ್ರಗಳಿಗೆ ದೊರಕಿದ ನಗರಗಳು ಯಾವುವೆಂದರೆ: ಜೆರಿಕೊ, ಬೇತ್ ಹೊಗ್ಲಾ,
ಏಮೆಕ್ಕೆಚ್ಚೀಚ್, ಬೇತ್‌ಅರಾಬಾ, [22]ಚಮಾರಯಿಮ್, ಬೇತೇಲ್, ಅವ್ವೀಮ್, ಪಾರಾ, [23–24]ಒಫ್ರಾ, ಅಮ್ಮೋನ್ಯ,
ಕೆಫೆರ್, ಒಫ್ನೀ, ಗೆಬಾ ಎಂಬ ಹನ್ನೆರಡು ನಗರಗಳು ಮತ್ತು ಅವುಗಳಿಗೆ ಸೇರಿದ ಗ್ರಾಮಗಳು; [25]ಗಿಬ್ಯೋನ್,
ರಾಮಾ, ಬೇರೋತ್, [26–27]ಮಿಚ್ಫೆ, ಕೆಫೀರಾ, ಮೋಚಾ, ರೆಕೆಮ್, ಇರ್ಪೇಲ್, ತರಲಾ, ಚೇಲ, [28]ಎಲೆಫ್,
ಯೆಬೂಸಿಯರು ಇದ್ದಂಥ ಜೆರೂಸಲೇಮ್, ಗಿಬೆಯತ್, ಕಿರ್ಯತ್ ಎಂಬ ಹದಿನಾಲ್ಕು ನಗರಗಳೂ ಮತ್ತು
ಅವುಗಳಿಗೆ ಸೇರಿದ ಗ್ರಾಮಗಳು. ಬೆನ್ಯಾಮಿನ್ ಗೋತ್ರಗಳಿಗೆ ದೊರಕಿದ ಆಸ್ತಿಪಾಸ್ತಿ ಇವೇ.

### ಸಿಮೆಯೋನ್ ಕುಲದವರಿಗೆ ಬಂದ ಪಾಲು

**19** ಎರಡನೇ ಸಾರಿಯ ಚೀಟು ಸಿಮೆಯೋನ್ ಕುಲದವರಿಗೆ ಬಿದ್ದಿತು. ಈ ಸಿಮೆಯೋನ್ ಕುಲದ
ಗೋತ್ರಗಳ ಸೊತ್ತು ಯೂದಕುಲದವರ ಸೊತ್ತಿನ ಮಧ್ಯದಲ್ಲಿತ್ತು. [2]ಅದರ ಊರುಗಳು ಇವು: ಬೇರ್ಷೆಬ,
[3]ಶೆಬ, ಮೋಲಾದಾ, ಹಚರ್‌ಷೂವಾಲ್, ಬಾಲಾ, [4]ಎಚೆಮ್, ಎಲ್ತೋಲದ್, ಬೆತೂಲ್, [5]ಹೊರ್ಮಾ, ಚಿಕ್ಲಗ್,
ಬೇತ್‌ಮಾರ್ಕಾಬೋತ್, [6]ಹಚರ್ ಸೂಸಾ, ಬೇತ್‌ಲೆಬಾವೋತ್, ಶಾರೂಹೆನ್ ಎಂಬ ಹದಿಮೂರು
ನಗರಗಳು ಮತ್ತು ಅವುಗಳ ಗ್ರಾಮಗಳು. [7]ಆಯಿನ್, ರಿಮ್ಮೋನ್, ಏತೆರ್, ಅಷಾನ್ ಎಂಬ ನಾಲ್ಕು ನಗರಗಳು
ಮತ್ತವುಗಳ ಗ್ರಾಮಗಳು; [8]ಅವುಗಳ ಸುತ್ತಣ ಪ್ರದೇಶದಲ್ಲಿ ಬಾಲತ್‌ಬೇರ್ ಎಂಬ ಊರಿನವರೆಗೆ ಇತರ
ಗ್ರಾಮಗಳು ಇವೆ. ಬಾಳತ್‌ಬೇರ್ ಎಂಬುದು ದಕ್ಷಿಣದ ರಾಮ ಎನಿಸಿಕೊಳ್ಳುತ್ತದೆ. ಸಿಮೆಯೋನ್ ಕುಲದ
ಗೋತ್ರಗಳಿಗೆ ಸಿಕ್ಕಿದ ಆಸ್ತಿ ಇದೇ. [9]ಈ ಆಸ್ತಿ ಯೂದವಂಶದ ಆಸ್ತಿಯಲ್ಲಿ ಒಂದು ಭಾಗ.
ಯೂದವಂಶದವರಿಗೆ ದೊರಕಿದ ಪ್ರದೇಶ ಹೆಚ್ಚಾಗಿದ್ದುದರಿಂದ ಸಿಮೆಯೋನ್ಯರಿಗೆ ಅದರಲ್ಲೆ ಪಾಲು ಸಿಕ್ಕಿತು.

### ಜೆಬುಲೂನ್ಯರಿಗೆ ಬಂದ ಪಾಲು

10 ಮೂರನೇ ಸಾರಿಯ ಚೀಟು ಜೆಬುಲೂನ್ಯರಿಗೆ ಬಿದ್ದಿತು. ಈ ಕುಲದ ಗೋತ್ರಗಳಿಗೆ ಸಿಕ್ಕಿದ
ಸೊತ್ತಿನ ಎಲ್ಲೆ [11]ಸಾರೀದಿನಿಂದ ತೊಡಗಿ ಪಶ್ಚಿಮ ದಿಕ್ಕಿನಲ್ಲಿರುವ ಮರ್ಗಲಾ, ದಬ್ಬೆಷೆತ್ ಇವುಗಳ ಮೇಲೆ
ಯೊಕ್ನೆಯಾಮ್ ಊರಿನ ಈಚೆಯಲ್ಲಿರುವ ಹಳ್ಳಕ್ಕೆ ಹೋಗುತ್ತದೆ. [12]ಅದೇ ಸಾರೀದಿನಿಂದ ಅದು
ಪೂರ್ವದಿಕ್ಕಿನಲ್ಲಿ ಕಿಸ್ಲೋತ್ ತಾಬೋರಿನ ಎಲ್ಲೆಗೆ ಹತ್ತಿ ದಾಬೆರತಿಗೆ ಹೋಗುತ್ತದೆ. ಅಲ್ಲಿಂದ ಏರುತ್ತಾ
ಯಾಫೀಯಕ್ಕೆ ಹೋಗುತ್ತದೆ. [13]ಅಲ್ಲಿಂದ ಮತ್ತೂ ಪೂರ್ವಕ್ಕೆ ಮುಂದುವರೆದು ಗತ್‌ಹೇಫೆರ್, ಎತ್‌ಕಾಚೀನ್
ಇವುಗಳ ಮೇಲೆ ನೇಯದ ಮಗ್ಗಲಲ್ಲಿರುವ ರಿಮ್ಮೋನಿಗೆ ಹೋಗುತ್ತದೆ. [14]ಅಲ್ಲಿಂದ ಅದು ಉತ್ತರಕ್ಕೆ
ತಿರುಗಿಕೊಂಡು ಹನ್ನಾತೋನಿನ ಮೇಲೆ ಇಪ್ತಹೇಲಿನ ಕಣಿವೆಗೆ ಹೋಗಿ ಅಲ್ಲಿ ಮುಕ್ತಾಯಗೊಳ್ಳುತ್ತದೆ.
[15]ಕಟ್ಟಾತ್, ನಹಲ್ಲಾಲ್, ಶಿಮ್ರೋನ್, ಇದಲಾ, ಬೆತ್ಲೆಹೇಮ್ ಇವೇ ಮೊದಲಾದ ಹನ್ನೆರಡು ನಗರಗಳೂ
ಅವುಗಳಿಗೆ ಸೇರಿದ ಗ್ರಾಮಗಳು– [16]ಜೆಬುಲೂನ್ ಕುಲದ ಗೋತ್ರಗಳಿಗೆ ಸೊತ್ತಾಗಿ ದೊರಕಿದವು.

### ಇಸ್ಸಾಕಾರ್ ಕುಲದವರಿಗೆ ಬಂದ ಪಾಲು

17 ನಾಲ್ಕನೇ ಸಾರಿಯ ಚೀಟು ಇಸ್ಸಾಕಾರ್ ಕುಲದವರಿಗೆ ಬಿದ್ದಿತು. ಅವರ ಗೋತ್ರಗಳಿಗೆ ಸಿಕ್ಕಿದ
ನಾಡಿನಲ್ಲಿರುವ ನಗರಗಳು ಯಾವುವು ಎಂದರೆ – [18]ಇಜ್ರೇಲ್, ಕೆಸುಲ್ಲೋತ್ [19]ಶೂನೇಮ್, ಹಫಾರಯಿಮ್,
ಶೀಯೋನ್ [20]ಅನಾಹರತ್, ರಬ್ಬೀತ್, ಕಿಷ್ಯೋನ್, ಎಬೆಜ್, [21]ರೆಮೆತ್, ಏಂಗನ್ನೀಮ್, ಏನ್‌ಹದ್ದಾ,

ಬೇತ್‌ಪಚ್ಚೇಚ್, [22]ತಾಬೋರ್, ಶಹಚೀಮಾ, ಬೇತ್‌ಷೆಮೆಷ್ ಎಂಬ ಊರುಗಳೂ ಅದರ ಮೇರೆಯೊಳಗಿದ್ದವು. ಈ ಮೇರೆಯು ಜೋರ್ಡನ್ ನದಿಯ ತೀರದಲ್ಲಿ ಮುಗಿಯುತ್ತದೆ. [23]ಒಟ್ಟಾರೆ ಹದಿನಾರು ನಗರಗಳೂ ಅವುಗಳ ಗ್ರಾಮಗಳೂ ಇಸ್ಸಾಕಾರ್ ಕುಲದ ಗೋತ್ರಗಳಿಗೆ ದೊರಕಿದವು.

## ಅಶೇರ್ ಕುಲದವರಿಗೆ ಬಂದ ಪಾಲು

24 ಐದನೇ ಸಾರಿಯ ಚೀಟು ಅಶೇರ್ ಕುಲದವರಿಗೆ ಬಿದ್ದಿತು. ಅವರ ಗೋತ್ರಗಳಿಗೆ ಸಿಕ್ಕಿದ ಊರುಗಳು ಇವು: [25]ಹೆಲ್ಕತ್, ಹಲೀ, ಬೆಟೆನ್, ಅಕ್ಷಾಫ್, [26]ಅಲಮ್ಮೆಲೆಕ್, ಅಮಾದ್, ಮಿಷಾಲ್. ಇವರ ನಾಡಿನ ಎಲ್ಲೆ ಪಶ್ಚಿಮದಲ್ಲಿ ಕರ್ಮೆಲ್ ಬೆಟ್ಟಕ್ಕೂ ಶೀಹೋರ್‌ಲಿಬ್ನತ್ ಎಂಬ ಹಳ್ಳಕ್ಕೂ ತಾಕಿ [27]ಅಲ್ಲಿಂದ ಪೂರ್ವಕ್ಕೆ ತಿರುಗಿ ಬೇತ್‌ದಾಗೋನಿಗೆ ಹೋಗುತ್ತದೆ. ಅಲ್ಲಿಂದ ಜೆಬುಲೂನ್ಯರ ಎಲ್ಲೆಗೂ ಇಫ್ತಹೇಲ್ ಕಣಿವೆಯ ಉತ್ತರದಿಕ್ಕಿನ ಮೂಲೆಗೂ ಹೊಂದಿಕೊಂಡು ಬೇತ್ ಏಮೆಕ್, ನೆಗೀಯೆಲ್ ಇವುಗಳ ಮೇಲೆ ಉತ್ತರಕ್ಕೆ ಮುಂದುವರೆದು [28]ಕಾಬೂಲ್, ಎಬ್ರೋನ್, ರೆಹೋಬ್, ಹಮ್ಮೋನ್, ಕಾನಾ ಇವುಗಳ ಮೇಲೆ ಸಿದೋನ್ ಎಂಬ ಮಹಾ ನಗರಕ್ಕೆ ಹೋಗುತ್ತದೆ. [29]ಅಲ್ಲಿಂದ ಅದು ತಿರುಗಿಕೊಂಡು ರಾಮಾ, ಟೈರ್ ಕೋಟೆ, ಹೋಸಾ ಇವುಗಳ ಮೇಲೆ ಅಕ್ಜೀಬ್ ಪ್ರಾಂತ್ಯಕ್ಕೆ ಹೋಗಿ ಸಮುದ್ರತೀರದಲ್ಲಿ ಕೊನೆಗೊಳ್ಳುತ್ತದೆ. [30]ಉಮ್ಮಾ, ಅಫೇಕ್, ರೆಹೊಬ್ ಇವೇ ಮೊದಲಾದ ಇಪ್ಪತ್ತೆರಡು ನಗರಗಳೂ ಅವುಗಳ ಗ್ರಾಮಗಳೂ [31]ಅಶೇರ್ ಕುಲದ ಗೋತ್ರಗಳ ಸೊತ್ತಾಗಿವೆ.

## ನಫ್ತಾಲಿ ಕುಲದವರಿಗೆ ಬಂದ ಪಾಲು

32 ಆರನೇ ಸಾರಿಯ ಚೀಟು ನಫ್ತಾಲಿ ಕುಲದವರಿಗೆ ಬಿದ್ದಿತು. ಆ ಕುಲದ ಗೋತ್ರಗಳಿಗೆ ಸಿಕ್ಕಿದ ಸೊತ್ತಿನ ಎಲ್ಲೆ ಹೀಗಿದೆ: [33]ಚಾನನ್ನೀಮಿನಲ್ಲಿರುವ ಹೇಲೆಫಿನ ಅಲ್ಲೋನ್ ಮರದಿಂದ ತೊಡಗಿ ಅದಾಮಿನೆಕೆಬ್, ಯೆಬ್ನೆಯೇಲ್ ಇವುಗಳ ಮೇಲೆ ಲಕ್ಕೂಮಿಗೆ ಹೋಗಿ ಜೋರ್ಡನ್ ನದಿಯ ತೀರದಲ್ಲಿ ಮುಗಿಯುತ್ತದೆ. [34]ಮತ್ತೆ ಅದೇ ಸ್ಥಳದಿಂದ ತೊಡಗಿ ಅಜ್ನೋತ್–ತಾಬೋರಿನ ಮೇಲೆ ಹುಕ್ಕೋಕಿಗೆ ಹೋಗುತ್ತದೆ. ದಕ್ಷಿಣದಲ್ಲಿ ಜೆಬುಲೂನ್ಯರ ಎಲ್ಲೆಗೂ ಪಶ್ಚಿಮದಲ್ಲಿ ಆಶೇರ್ಯರ ಮತ್ತು ಯೂದವಂಶದವರ ಎಲ್ಲೆಗೂ ಪೂರ್ವದಲ್ಲಿ ಜೋರ್ಡನ್ ನದಿಗೂ ಹೊಂದಿಕೊಂಡಿರುತ್ತದೆ. [35]ಚಿದ್ದೀಮ್, ಚೇರ್, ಹಮ್ಮತ್, [36]ರಕ್ಕತ್, ಕಿನ್ನೆರೆತ್, ಅದಾಮಾ, ರಾಮಾ, ಹಾಚೋರ್, [37–38]ಕೆದೆಷ್, ಎದ್ರೈ, ಏನ್ ಹಾಚೋರ್, ಇರೋನ್, ಮಿಗ್ದಲೇಲ್, ಹೊರೇಮ್, ಬೇತನಾತ್, ಬೇತ್‌ಷೆಮೆಷ್ ಇವೇ ಮೊದಲಾದ ಹತ್ತೊಂಬತ್ತು ಕೋಟೆಕೊತ್ತಲಗಳುಳ್ಳ ನಗರಗಳೂ ಅವುಗಳ ಗ್ರಾಮಗಳೂ [39]ನಫ್ತಾಲಿ ಕುಲದ ಗೋತ್ರಗಳಿಗೆ ಸಿಕ್ಕಿದ ಸೊತ್ತಾಗಿವೆ.

## ದಾನ್‌ಕುಲದವರಿಗೆ ಬಂದ ಪಾಲು

40 ಏಳನೇ ಸಾರಿಯ ಚೀಟು ದಾನ್ ಕುಲದವರಿಗೆ ಬಿದ್ದಿತು. ಅವರ ಗೋತ್ರಗಳಿಗೆ ಸೊತ್ತಾಗಿ ದೊರಕಿದ ಊರುಗಳು ಇವು: [41]ಚೊರ್ಗಾ, ಎಷ್ಟಾ ವೋಲ್, [42]ಈರ್ಷೆಮೆಷ್, ಶಾಲಬ್ಬೀನ್, ಅಯ್ಯಾಲೋನ್, [43–44]ಇತ್ಲಾ, ಏಲೋನ್, ತಿಮ್ನಾ, ಎಕ್ರೋನ್, ಎಲ್ತೆಕೇ, [45]ಗಿಬ್ಬೆತೋನ್, ಬಾಲತ್, ಯೆಹುದ್, ಬೆನೇಬೆರಕ್, [46]ಗತ್‌ರಿಮ್ಮೋನ್, ಮೇಯರ್ಕೋನ್, ರಕ್ಕೋನ್, ಮತ್ತು ಜೊಪ್ಪಕ್ಕೆ ಎದುರಿಗಿರುವ ಪ್ರದೇಶವೂ ಇವರಿಗೆ ದೊರಕಿತು. [47]ದಾನ್ ಕುಲದವರು ತಮ್ಮ ಪ್ರಾಂತ್ಯವನ್ನು ವಿಸ್ತರಿಸುವುದಕ್ಕಾಗಿ ಹೊರಟು ಲೆಷೆಮಿನವರೊಡನೆ ಯುದ್ಧಮಾಡಿ ಜಯಿಸಿದರು. ಆ ಜನರನ್ನು ಕತ್ತಿಯಿಂದ ಸಂಹರಿಸಿ ಅವರ ನಗರವನ್ನು ಸ್ವಾಧೀನಮಾಡಿಕೊಂಡು ಅದರಲ್ಲಿ ವಾಸಿಸಿದರು. ಅಲ್ಲದೆ, ಅದಕ್ಕೆ ತಮ್ಮ ಮೂಲ ಪುರುಷನ ಹೆಸರಾದ ದಾನ್ ಎಂಬ ಹೆಸರನ್ನಿಟ್ಟರು. [48]ದಾನ್ ಕುಲದ ಗೋತ್ರಗಳಿಗೆ ದೊರಕಿದ ಸೊತ್ತು ಹಾಗೂ ಅದರಲ್ಲಿದ್ದ ನಗರ ಹಾಗೂ ಗ್ರಾಮಗಳು ಇವೇ.

## ಯೆಹೋಶುವನಿಗೆ ಕೊಟ್ಟ ಪಾಲು

49 ಇಸ್ರಯೇಲರು ನಾಡನ್ನು ಎಲ್ಲೆಎಲ್ಲೆಗಳ ಪ್ರಕಾರ ತಮ್ಮೊಳಗೆ ಹಂಚಿಕೊಂಡ ಮೇಲೆ ನೂನನ ಮಗ ಯೆಹೋಶುವನಿಗೂ ತಮ್ಮದರಲ್ಲಿ ಪಾಲುಕೊಟ್ಟರು. 50ಆತ ತನಗೋಸ್ಕರ ಎಫ್ರಯಿಮರ ಮಲೆನಾಡಿನಲ್ಲಿರುವ 'ತಿಮ್ನತ್ ಸೆರಹ' ಎಂಬ ನಗರವನ್ನು ಕೇಳಿಕೊಂಡನು. ಸರ್ವೇಶ್ವರನ ಆಜ್ಞೆಯಂತೆ ಅವರು ಅದನ್ನು ಅವನಿಗೆ ಕೊಟ್ಟರು. ಅವನು ಅದನ್ನು ಹೊಸದಾಗಿ ಕಟ್ಟಿ ಅದರಲ್ಲೇ ವಾಸಮಾಡಿದನು.

51 ಹೀಗೆ ಯಾಜಕ ಎಲ್ಲಾಜಾರನು, ನೂನನ ಮಗ ಯೆಹೋಶುವ ಮತ್ತು ಇಸ್ರಯೇಲ್ ಕುಲ ಮುಖ್ಯಸ್ಥರೂ ಶೀಲೋವಿನಲ್ಲಿದ್ದ ದೇವದರ್ಶನದ ಗುಡಾರದ ದ್ವಾರದಲ್ಲಿ ಸರ್ವೇಶ್ವರನ ಸನ್ನಿಧಿಯಲ್ಲೇ ಚೀಟುಹಾಕಿ ಪ್ರಾಂತ್ಯಗಳನ್ನು ಹಂಚಿಕೊಟ್ಟರು; ನಾಡಿನ ವಿಭಜನಾಕಾರ್ಯ ಮುಗಿಯಿತು.

## ಆಶ್ರಯ ನಗರಗಳ ಸ್ಥಾಪನೆ

**20** ಸರ್ವೇಶ್ವರಸ್ವಾಮಿ ಯೆಹೋಶುವನಿಗೆ, "ನೀನು ಇಸ್ರಯೇಲರಿಗೆ 2'ಸರ್ವೇಶ್ವರಸ್ವಾಮಿ ಮೋಶೆಯ ಮುಖಾಂತರ ಆಜ್ಞಾಪಿಸಿರುವಂತೆ ನೀವು ಆಶ್ರಯನಗರಗಳನ್ನು ಗೊತ್ತುಮಾಡಿಕೊಳ್ಳಿ; 3ನಿಮ್ಮಲ್ಲಿ ಯಾರಾದರು ಅರಿಯದೆ ಅಕಸ್ಮಾತ್ತಾಗಿ ನರಹತ್ಯೆ ಮಾಡಿದ್ದೇ ಆದರೆ ಅಂಥವನು ಅಲ್ಲಿಗೆ ಓಡಿಹೋಗಲಿ. ಹತನಾದವನ ಹತ್ತಿರದ ಬಂಧು ಮುಯ್ಯಿತೀರಿಸದಂತೆ ಆ ನಗರಗಳು ನಿಮಗೆ ಆಶ್ರಯಸ್ಥಾನಗಳಾಗಿರಲಿ. 4ಅಂಥ ನಗರಕ್ಕೆ ಓಡಿಹೋದವನು ಮೊದಲು ಊರಬಾಗಿಲಲ್ಲೇ ನಿಂತುಕೊಂಡು ಅಲ್ಲಿನ ಹಿರಿಯರಿಗೆ ತನ್ನ ಸಂಗತಿಯನ್ನು ತಿಳಿಯಪಡಿಸಲಿ. ಅವರು ಅವನನ್ನು ಊರೊಳಗೆ ಸೇರಿಸಿಕೊಳ್ಳಲಿ; ವಾಸಕ್ಕೆ ಸ್ಥಳಕೊಡಲಿ. 5ಹತನಾದವನ ಹತ್ತಿರದ ಬಂಧು, ಕೊಂದವನನ್ನು ಹಿಂದಟ್ಟಿಕೊಂಡು ಅಲ್ಲಿಗೆ ಬಂದರೆ, ಅವರು ಅವನನ್ನು ಅವನ ಕೈಗೆ ಒಪ್ಪಿಸಬಾರದು. ಏಕೆಂದರೆ ಅವನು ನೆರೆಯವನನ್ನು ಕೊಂದದ್ದು ಅಕಸ್ಮಾತ್ತಾಗಿ, ಹಳೆಯ ದ್ವೇಷದಿಂದೇನೂ ಅಲ್ಲ. 6ಅಂಥವನನ್ನು ಒಂದು ಸಭೆಸೇರಿಸಿ ವಿಚಾರಿಸಬೇಕು. ಅವನು ಆಗಿನ ಪ್ರಧಾನ ಯಾಜಕನ ಜೀವಮಾನವೆಲ್ಲಾ ಅದೇ ನಗರದಲ್ಲಿರಬೇಕು. ಆಮೇಲೆ ತಾನು ಬಿಟ್ಟು ಬಂದ ಊರಿಗೆ, ಮನೆಗೆ ಹಿಂದಿರುಗಬಹುದು' ಎಂದು ತಿಳಿಸು," ಎಂದರು.

7 ಅಂತೆಯೇ ಇಸ್ರಯೇಲರು ನಫ್ತಾಲಿ ಕುಲದವರ ಮಲೆನಾಡಿನ ಪ್ರದೇಶವಾದ ಗಲಿಲೇಯ ಪ್ರಾಂತದಲ್ಲಿನ ಕೆದೆಷ್, ಎಫ್ರಯಿಮ್ ಮಲೆನಾಡಿನ ಪ್ರದೇಶದಲ್ಲಿನ ಶೆಕೆಮ್ ಹಾಗೂ ಯೂದ ವಂಶದ ಮಲೆನಾಡಿನ ಹೆಬ್ರೋನ್ ಎನಿಸಿಕೊಳ್ಳುವ ಕಿರ್ಯತರ್ಬ ಎಂಬ ನಗರಗಳನ್ನು ನೇಮಿಸಿದರು. 8ಇವುಗಳನ್ನು ಮಾತ್ರವಲ್ಲ, ಜೆರಿಕೋವಿನ ಪೂರ್ವದಲ್ಲಿರುವ ಜೋರ್ಡನಿನ ಆಚೆಯಲ್ಲಿ ರೂಬೇನ್ಯರ ಬೆಟ್ಟದ ಮೇಲಿನ ಮರುಭೂಮಿಯಲ್ಲಿರುವ ಬೆಚೆರ್, ಗಾದ್ಯರಿಗೆ ಸೇರಿದ ಗಿಲ್ಯಾದ್ ಪ್ರಾಂತ್ಯದ ರಾಮೋತ್, ಮನಸ್ಸೆಯವರಿಗೆ ಸೇರಿದ ಬಾಷಾನಿನಲ್ಲಿರುವ ಗೋಲಾನ್ ಎಂಬ ನಗರಗಳನ್ನೂ ನೇಮಿಸಿದರು. 9ಇಸ್ರಯೇಲರೆಲ್ಲರಿಗೂ ಹಾಗೂ ಅವರ ನಡುವೆ ವಾಸಮಾಡುತ್ತಿದ್ದ ಹೊರನಾಡಿನವರಿಗೂ ಇವು ಆಶ್ರಯನಗರಗಳಾಗಿ ನೇಮಕ ಆಗಿದ್ದವು. ಅಕಸ್ಮಾತಾಗಿ ಬೇರೊಬ್ಬನನ್ನು ಕೊಂದವನು ಓಡಿಹೋಗಿ ಹತನಾದವನ ಹತ್ತಿರ ಬಂಧುವಿನಿಂದ ತಲೆ ತಪ್ಪಿಸಿಕೊಳ್ಳಬಹುದಿತ್ತು. ನ್ಯಾಯಸಭೆಯ ಮುಂದೆ ನಿಲ್ಲುವ ತನಕ ಅಲ್ಲೇ ಇರಬಹುದಿತ್ತು.

## ಲೇವಿಕುಲಕ್ಕೆ ದೊರಕಿದ ನಗರಗಳು

**21** ಲೇವಿ ಕುಲಾಧಿಪತಿಗಳು ಕಾನಾನ್ ನಾಡಿನ ಶೀಲೋವಿನಲ್ಲಿದ್ದ ಯಾಜಕ ಎಲ್ಲಾಜಾರ್, ನೂನನ ಮಗ ಯೆಹೋಶುವ ಮತ್ತು ಇಸ್ರಯೇಲ್ ಕುಲಾಧಿಪತಿಗಳ ಬಳಿಗೆ ಬಂದರು. 2"ನಮ್ಮ ನಿವಾಸಕ್ಕೆ ನಗರಗಳನ್ನೂ ನಮ್ಮ ಪಶು ಪ್ರಾಣಿಗಳಿಗೆ ಗೋಮಾಳಗಳನ್ನೂ ಕೊಡಬೇಕೆಂದು ಸರ್ವೇಶ್ವರಸ್ವಾಮಿ ಮೋಶೆಯ ಮುಖಾಂತರ ಆಜ್ಞಾಪಿಸಿದ್ದಾರಲ್ಲವೆ?" ಎಂದು ವಿನಂತಿಸಿದರು. 3ಸರ್ವೇಶ್ವರನ ಆಜ್ಞೆಯಂತೆಯೇ ಅವರಿಗೆ ಸೊತ್ತಾಗಿ ಈ ಕೆಳಕಂಡ ನಗರಗಳನ್ನೂ ಅವುಗಳಿಗೆ ಸೇರಿದ ಗೋಮಾಳಗಳನ್ನೂ ಕೊಡಲಾಯಿತು.

4 ಕೆಹಾತ್ಯರಿಗಾಗಿ ಚೀಟು ಹಾಕಿದಾಗ ಆರೋನನ ವಂಶದವರಾದ ಲೇವಿಯರಿಗೆ ಯೆಹೂದ, ಸಿಮೆಯೋನ್ ಮತ್ತು ಬೆನ್ಯಾಮೀನ್ ಕುಲಗಳಿಂದ ಹದಿಮೂರು ನಗರಗಳು ದೊರಕಿದವು. 5ಮಿಕ್ಕ ಕೆಹಾತ್ಯರಿಗೆ

ಎಫ್ರಯಿಮ್ ಹಾಗೂ ದಾನ್ ಕುಲಗಳಿಂದ ಮತ್ತು ಮನಸ್ಸೆಯ ಅರ್ಧ ಕುಲಗಳಿಂದ ಹತ್ತುನಗರಗಳು ಸಿಕ್ಕಿದವು.

6 ಮತ್ತೆ ಚೀಟು ಹಾಕಿದಾಗ ಗೇರ್ಷೋನ್ಯರಿಗೆ ಇಸ್ಸಾಕಾರ್, ಆಶೇರ್, ನಫ್ತಾಲಿ ಎಂಬ ಕುಲಗಳಿಂದ ಮತ್ತು ಬಾಷಾನಿನಲ್ಲಿರುವ ಮನಸ್ಸೆಯ ಅರ್ಧ ಕುಲದಿಂದ ಹದಿಮೂರು ನಗರಗಳು ದೊರೆತವು.

7 ಮೆರಾರಿ ಗೋತ್ರದವರಿಗೆ ರೂಬೇನ್, ಗಾದ್ ಹಾಗೂ ಜೆಬುಲೂನ್ ಕುಲಗಳಿಂದ ಹನ್ನೆರಡು ನಗರಗಳು ಸಿಕ್ಕಿದವು.

8 ಸರ್ವೇಶ್ವರಸ್ವಾಮಿ ಮೋಶೆಯ ಮುಖಾಂತರ ಆಜ್ಞಾಪಿಸಿದಂತೆ ಇಸ್ರಯೇಲರು ಚೀಟುಹಾಕಿ ಲೇವಿಯರಿಗೆ ಇಷ್ಟು ನಗರಗಳನ್ನೂ ಅವುಗಳಿಗೆ ಸೇರಿದ ಗೋಮಾಳಗಳನ್ನೂ ಕೊಟ್ಟರು.

## ಕೆಹಾತನ ಗೋತ್ರದ ಲೇವಿಯರಿಗೆ ದೊರೆತ ನಗರಗಳು

9 ಲೇವಿಕುಲದವರು ಹಾಗೂ ಕೆಹಾತನ ಗೋತ್ರದವರು ಆದ ಆರೋನನ ಕುಟುಂಬದವರಿಗೆ ಚೀಟು ಮೊದಲು ಬಿದ್ದಿತು. [10]ಆದ್ದರಿಂದ ಇಸ್ರಯೇಲರು ಅವರಿಗೆ ಯೆಹೂದ ಮತ್ತು ಸಿಮೆಯೋನ ಕುಲಗಳಿಂದ ಕೆಳಗೆ ಹೇಳಿರುವ ನಗರಗಳನ್ನು ಕೊಟ್ಟರು. [11]ಇವುಗಳಲ್ಲಿ ಯೆಹೂದ ಮಲೆನಾಡಿನ ಹೆಬ್ರೋನೆಂಬ ಗೋಮಾಳ ಸಹಿತವಾದ ಕಿರ್ಯತರ್ಬವೂ ಸೇರಿರುತ್ತದೆ. (ಕಿರ್ಯತರ್ಬ ಎಂದರೆ ಅನಾಕನ ತಂದೆಯಾದ ಅರ್ಬನನಗರ). [12]ಆದರೆ ಇದಕ್ಕೆ ಸೇರಿದ ಹೊಲಗಳನ್ನು ಮತ್ತು ಗ್ರಾಮಗಳನ್ನು ಯೆಫುನ್ನೆಯ ಮಗ ಕಾಲೇಬನಿಗೆ ಕೊಟ್ಟರು.

13 ಯಾಜಕ ಆರೋನನ ವಂಶದವರಿಗೆ ಮೇಲೆ ಹೇಳಿದ ಎರಡು ಕುಲಗಳಿಂದ ಹೆಬ್ರೋನ್ ಎಂಬ ಆಶ್ರಯ ನಗರ [14]ಲಿಬ್ನಾ, ಯತ್ತೀರ್, ಎಷ್ಟೆಮೋಹ, [15–16]ಹೋಲೋನ್, ದೆಬೀರ್, ಅಯಿನ್, ಯುಟ್ಟಾ, ಬೇತ್‍ಷೆಮೆಷ್ ಎಂಬ ಒಂಬತ್ತು ಗೋಮಾಳ ಸಹಿತವಾದ ನಗರಗಳು [17]ಹಾಗೂ ಬೆನ್ಯಾಮೀನ್ ಕುಲದಿಂದ [18]ಗಿಬ್ಯೋನ್, ಗೆಬ, ಅನಾತೋತ್, ಅಲ್ಮೋನ್ ಎಂಬ ನಾಲ್ಕು ಗೋಮಾಳ ಸಹಿತವಾದ ನಗರಗಳು ದೊರೆತವು. [19]ಯಾಜಕನಾದ ಆರೋನನ ವಂಶದವರ ಪಾಲಿಗೆ ಬಂದಂಥ ಗೋಮಾಳ ಸಹಿತವಾದ ನಗರಗಳು ಹದಿಮೂರು.

20 ಲೇವಿಯರಾದ ಕೆಹಾತ್ಯರ ಉಳಿದ ಕುಟುಂಬಗಳಿಗೆ [21]ಎಫ್ರಯಿಮ್ ಸೊತ್ತಿನಿಂದ ಬೆಟ್ಟದಲ್ಲಿರುವ ಶೆಕೆಮೆಂಬ ಆಶ್ರಯನಗರ, [22]ಗೆಜೆರ್, ಕಿದ್‍ಬೈಮ್ ಹಾಗೂ ಬೇತ್‍ಹೋರೋನ್ ಎಂಬ ಗೋಮಾಳ ಸಹಿತವಾದ ನಾಲ್ಕು ನಗರಗಳು, [23]ದಾನ್ಯರ ಸೊತ್ತಿನಿಂದ ಎಲ್ತೆಕೇ, ಗಿಬ್ಬೆತೋನ್, [24]ಅಯ್ಯಾಲೋನ್, ಗತ್‍ರಿಮ್ಮೋನ್ ಎಂಬ ಗೋಮಾಳ ಸಹಿತವಾದ ನಾಲ್ಕು ಪಟ್ಟಣಗಳು, [25]ಮನಸ್ಸೆಕುಲದ ಅರ್ಧಜನರ ಸೊತ್ತಿನಿಂದ ತಾನಾಕ್, ಗತ್‍ರಿಮ್ಮೋನ್ ಎಂಬ ಎರಡು ಗೋಮಾಳ ಸಹಿತವಾದ ನಗರಗಳು ಚೀಟಿನಿಂದ ದೊರಕಿದವು. [26]ಒಟ್ಟಾರೆ ಕೆಹಾತ್ಯರಿಗೆ ಸಿಕ್ಕಿದಂಥ ಗೋಮಾಳ ಸಹಿತವಾದ ನಗರಗಳು ಹತ್ತು.

## ಗೇರ್ಷೋನ್ಯರ ಕುಟುಂಬದ ಲೇವಿಯರಿಗೆ ದೊರೆತ ನಗರಗಳು

27 ಗೇರ್ಷೋನ್ಯರ ಕುಟುಂಬಗಳಿಗೆ ಅರ್ಧ ಮನಸ್ಸೆಯವರ ಸೊತ್ತಿನಿಂದ ದೊರಕಿದವುಗಳು ಇವು: ಕೊಲೆ ಮಾಡಿದವನಿಗೆ ಆಶ್ರಯನಗರವಾದ ಬಾಷಾನಿನ ಗೋಲಾನ್, ಬೆಯೆಷ್ಟೆರಾ ಎಂಬ ಗೋಮಾಳ ಸಹಿತವಾದ ಎರಡು ನಗರಗಳು; [28]ಇಸ್ಸಾಕಾರ್ ಸೊತ್ತಿನಿಂದ ಕಿಷ್ಯೋನ್, ದಾಬೆರತ್, [29]ಯರ್ಮೂತ್, ಎಂಗನ್ನೀಮ್ ಎಂಬ ನಾಲ್ಕು ಗೋಮಾಳ ಸಹಿತವಾದ ನಗರಗಳು; [30]ಆಶೇರ್ ಕುಲದಿಂದ ಮಿಷಾಲ್, ಅಬ್ದೋನ್, [31]ಹೆಲ್ಕಾತ್, ರೆಹೋಬ್ ಎಂಬ ನಾಲ್ಕು ಗೋಮಾಳ ಸಹಿತವಾದ ನಗರಗಳು; [32]ನಫ್ತಾಲಿ ಸೊತ್ತಿನಿಂದ, ಕೊಲೆ ಮಾಡಿದವನಿಗೆ ಆಶ್ರಯನಗರವಾದ ಗಲಿಲೇಯದ ಕೆದೆಷ್, ಹಮ್ಮೋತ್‍ದೋರ್, ಕರ್ತಾನ್ ಎಂಬ ಗೋಮಾಳ ಸಹಿತವಾದ ಮೂರು ನಗರಗಳು. [33]ಹೀಗೆ ಗೇರ್ಷೋನ್ಯರಿಗೆ ಸಿಕ್ಕಿದ ಗೋಮಾಳ ಸಹಿತವಾದ ಒಟ್ಟು ನಗರಗಳು ಹದಿಮೂರು.

## ಮೆರಾರೀ ಗೋತ್ರದ ಲೇವಿಯರಿಗೆ ದೊರೆತ ನಗರಗಳು

34 ಮಿಕ್ಕ ಲೇವಿಯರಾದ ಮೆರಾರೀ ಗೋತ್ರದವರಿಗೆ ಜೆಬುಲೂನ್ ಸೊತ್ತಿನಿಂದ ಯೊಕ್ನೆಯಾಮ್,
ಕರ್ತಾ, 35ದಿಮ್ನಾ ಹಾಗೂ ನಹಲಾಲ್ ಎಂಬ ಗೋಮಾಳ ಸಹಿತವಾದ ನಾಲ್ಕು ನಗರಗಳು; 36ರೂಬೇನ್ಯರ
ಸೊತ್ತಿನಿಂದ ಬೆಚೆರ್, ಯಹಚಾ, 37ಕೆದೇಮೋತ್ ಹಾಗೂ ಮೇಫಾಗತ್ ಎಂಬ ಗೋಮಾಳ ಸಹಿತವಾದ
ನಾಲ್ಕು ನಗರಗಳು; 38ಗಾದ್ಯರ ಸೊತ್ತಿನಿಂದ ಕೊಲೆಮಾಡಿದವನಿಗೆ ಆಶ್ರಯನಗರವಾಗಿರುವ ಗಿಲ್ಯಾದಿನ
ರಾಮೋತ್, ಮಹನಯಿಮ್, 39ಹೆಷ್ಬೋನ್ ಹಾಗು ಯಗ್ಜೇರ್ ಎಂಬ ಗೋಮಾಳ ಸಹಿತವಾದ ನಾಲ್ಕು
ನಗರಗಳು ಸಿಕ್ಕಿದವು. 40ಮಿಕ್ಕ ಲೇವಿಯರಾದ ಮೆರಾರೀ ಗೋತ್ರಗಳಿಗೆ ಚೀಟಿನಿಂದ ಹೀಗೆ ದೊರೆತ ನಗರಗಳು
ಒಟ್ಟು ಹನ್ನೆರಡು.

41 ಲೇವಿಯರಿಗೆ ಇಸ್ರಯೇಲರ ನಡುವೆ ದೊರಕಿದ ಗೋಮಾಳ ಸಹಿತವಾದ ನಗರಗಳು ಒಟ್ಟು
ನಾಲ್ವತ್ತೆಂಟು. 42ಈ ನಗರಗಳಲ್ಲಿ ಪ್ರತಿ ಒಂದಕ್ಕೂ ಗೋಮಾಳವಿರುತ್ತದೆ. ಎಲ್ಲ ನಗರಗಳಲ್ಲೂ ಹೀಗೆಯೇ
ಇದೆ.

## ನಾಡಿನ ವಿಭಜನೆಯ ಮುಕ್ತಾಯ

43 ಸರ್ವೇಶ್ವರಸ್ವಾಮಿ ಇಸ್ರಯೇಲರ ಪೂರ್ವಜರಿಗೆ ಪ್ರಮಾಣಪೂರ್ವಕವಾಗಿ ವಾಗ್ದಾನ ಮಾಡಿದ
ನಾಡನ್ನು ಹೀಗೆ ಅವರಿಗೆ ಕೊಟ್ಟರು. ಇಸ್ರಯೇಲರು ಅದನ್ನು ವಶಪಡಿಸಿಕೊಂಡು ಅದರಲ್ಲಿ ವಾಸಮಾಡಿದರು.
44ಸರ್ವೇಶ್ವರ ಅವರ ಪೂರ್ವಜರಿಗೆ ಆಣೆಯಿಟ್ಟು ಹೇಳಿದಂತೆ ಅವರಿಗೆ ಎಲ್ಲೆಡೆಯಲ್ಲೂ
ಶಾಂತಿಸಮಾಧಾನವನ್ನು ಅನುಗ್ರಹಿಸಿದರು. ಶತ್ರುಗಳಾರು ಅವರನ್ನು ಪ್ರತಿಭಟಿಸಿ ನಿಲ್ಲಲಿಲ್ಲ. ಎಲ್ಲರೂ ಅವರ
ಕೈವಶವಾದರು. 45ಸರ್ವೇಶ್ವರ ಇಸ್ರಯೇಲರಿಗೆ ಮಾಡಿದ ಅತ್ಯುನ್ನತ ವಾಗ್ದಾನಗಳಲ್ಲಿ ಒಂದೂ ತಪ್ಪಿ
ಹೋಗಲಿಲ್ಲ. ಎಲ್ಲವೂ ನೆರವೇರಿದವು.

## ಪ್ರಾಚ್ಯ ಗೋತ್ರದವರಿಂದ ಬಲಿಪೀಠ ನಿರ್ಮಾಣ

**22** ಯೆಹೋಶುವನು ರೂಬೇನ್ಯರನ್ನು, ಗಾದ್ಯರನ್ನು ಹಾಗೂ ಮನಸ್ಸೆಕುಲದ ಅರ್ಧಜನರನ್ನು ಕರೆಸಿ
ಅವರಿಗೆ, 2"ನೀವು ಸರ್ವೇಶ್ವರನ ದಾಸನಾದ ಮೋಶೆಯು ವಿಧಿಸಿದ್ದ ಎಲ್ಲವನ್ನು ಕೈಗೊಂಡಿದ್ದೀರಿ. ನಾನು
ಆಜ್ಞಾಪಿಸಿದ್ದನ್ನು ನೆರವೇರಿಸಿದಿರಿ. 3ಈ ಕಾಲವೆಲ್ಲ ನೀವು ನಿಮ್ಮ ಸಹೋದರರನ್ನು ಕೈಬಿಡಲಿಲ್ಲ. 4ಅವರು
ತಮ್ಮ ವಾಗ್ದಾನಕ್ಕನುಸಾರ ನಿಮ್ಮ ಸಹೋದರರಿಗೆ ಈಗ ನೆಮ್ಮದಿಯನ್ನು ದಯಪಾಲಿಸಿದ್ದಾರೆ. ಆದುದರಿಂದ
ಸರ್ವೇಶ್ವರನ ದಾಸನಾದ ಮೋಶೆ ಜೋರ್ಡನಿನ ಆಚೆಕಡೆ ನಿಮಗೆ ಕೊಟ್ಟ ಆಸ್ತಿಯನ್ನು ಅನುಭವಿಸುತ್ತಿರುವ
ನಿಮ್ಮ ನಿಮ್ಮ ನಿವಾಸಿಗಳ ಬಳಿಗೆ ನೀವು ಹೋಗಬಹುದು. 5ಆದರೆ ಸರ್ವೇಶ್ವರನ ದಾಸ ಮೋಶೆಯು ನಿಮಗೆ
ಕೊಟ್ಟ ಧರ್ಮಶಾಸ್ತ್ರವನ್ನೂ ವಿಧಿಗಳನ್ನೂ ಜಾಗರೂಕತೆಯಿಂದ ಕೈಗೊಳ್ಳಿರಿ; ನಿಮ್ಮ ದೇವರಾದ
ಸರ್ವೇಶ್ವರನನ್ನು ಪ್ರೀತಿಸಿ ಅವರ ಮಾರ್ಗದಲ್ಲಿ ನಡೆಯಿರಿ; ಅವರ ಆಜ್ಞೆಗಳನ್ನು ಕೈಗೊಂಡು ಅವರನ್ನೇ
ನೆಚ್ಚಿಕೊಂಡು ಪೂರ್ಣ ಮನಸ್ಸಿನಿಂದಲೂ ಪೂರ್ಣ ಪ್ರಾಣದಿಂದಲೂ ಅವರಿಗೆ ಸೇವೆ ಸಲ್ಲಿಸಿರಿ," ಎಂದು
ಹೇಳಿದನು. 6ಇದಲ್ಲದೆ, ಅವರನ್ನು ಆಶೀರ್ವದಿಸಿ ಕಳಿಸಿದನು. ಅವರು ತಮ್ಮ ತಮ್ಮ ನಿವಾಸಗಳಿಗೆ ಹೋದರು.
7(ಮೋಶೆ ಮನಸ್ಸೆಕುಲದ ಅರ್ಧ ಜನರಿಗೆ ಬಾಷಾನಿನಲ್ಲಿ ಪಾಲನ್ನು ಕೊಟ್ಟಿದ್ದನು. ಉಳಿದ ಅರ್ಧಜನರಿಗೆ
ಯೆಹೋಶುವನು ಜೋರ್ಡನಿನ ಪಶ್ಚಿಮದಲ್ಲಿ ಬೇರೆ ಕುಲದವರೊಂದಿಗೆ ಪಾಲುಕೊಟ್ಟಿದ್ದನು). ಯೆಹೋಶುವ
ಅವರನ್ನು ಹೀಗೆ ಆಶೀರ್ವದಿಸಿ ತಮ್ಮ ಸ್ವಂತ ಸ್ಥಳಗಳಿಗೆ ಕಳಿಸುವಾಗ ಅವರಿಗೆ, 8"ನೀವು ಬಹಳ
ಆಸ್ತಿಯುಳ್ಳವರಾಗಿ ದನಕರು, ಬೆಳ್ಳಿಬಂಗಾರ, ಕಂಚು ಕಬ್ಬಿಣ, ವಸ್ತ್ರ ಮೊದಲಾದ ವಸ್ತುಗಳನ್ನು ತೆಗೆದುಕೊಂಡು
ನಿಮ್ಮ ನಿಮ್ಮ ನಿವಾಸಗಳಿಗೆ ತೆರಳಿರಿ. ನೀವು ಶತ್ರುಗಳಿಂದ ಪಡೆದ ಕೊಳ್ಳೆಯಲ್ಲಿ ನಿಮ್ಮ ಸಹೋದರರಿಗೂ
ಪಾಲುಕೊಡಿ," ಎಂದನು. 9ಆಗ ರೂಬೇನ್ಯರು, ಗಾದ್ಯರು ಹಾಗೂ ಮನಸ್ಸೆಕುಲದ ಅರ್ಧಜನರು ಕಾನಾನ್
ನಾಡಿನ ಶಿಲೋವಿನಲ್ಲಿದ್ದ ಇಸ್ರಯೇಲರನ್ನು ಬಿಟ್ಟು ಸರ್ವೇಶ್ವರನ ಆಜ್ಞೆಗನುಸಾರ ಮೋಶೆಯಿಂದ ತಮಗೆ
ದೊರಕಿದ ಸೊತ್ತಾದ ಗಿಲ್ಯಾದ್‍ನಾಡಿಗೆ ಹೋದರು.

## ಬಲಿಪೀಠ ಸ್ಥಾಪನೆ

10 ರೂಬೇನ್ಯರು, ಗಾದ್ಯರು ಹಾಗೂ ಮನಸ್ಸೆಕುಲದ ಅರ್ಧಜನರು ಕಾನಾನ್ ನಾಡಿನಲ್ಲಿರುವ
ಜೋರ್ಡನ್ ತೀರಪ್ರದೇಶಕ್ಕೆ ಬಂದಾಗ ಅಲ್ಲಿ ಒಂದು ಮಹಾಬಲಿಪೀಠವನ್ನು ಕಟ್ಟಿದರು. 11ರೂಬೇನ್ಯರು,
ಗಾದ್ಯರು ಹಾಗು ಮನಸ್ಸೆಕುಲದ ಅರ್ಧಜನರು ಇಸ್ರಯೇಲ್ ನಾಡಾದ ಕಾನಾನಿನ ಪೂರ್ವಕ್ಕಿರುವ
ಜೋರ್ಡನ್ ನದಿಯ ತೀರ ಪ್ರದೇಶದಲ್ಲಿ ಬಲಿಪೀಠವನ್ನು ಕಟ್ಟಿದ್ದಾರೆಂಬ ಸುದ್ದಿ ಮಿಕ್ಕ ಇಸ್ರಯೇಲರಿಗೆ
ಮುಟ್ಟಿತು. 12ಅವರೆಲ್ಲರು ಶಿಲೋವಿನಲ್ಲಿ ಕೂಡಿಬಂದು ಬಲಿಪೀಠ ಸ್ಥಾಪಕರ ವಿರುದ್ಧ ಯುದ್ಧಕ್ಕೆ ಹೋರಾಡಲು
ಸಿದ್ಧರಾದರು. 13ಅದಕ್ಕೆ ಮೊದಲು ಗಿಲ್ಯಾದಿನಲ್ಲಿರುವ ರೂಬೇನ್ಯರ, ಗಾದ್ಯರ ಹಾಗು ಮನಸ್ಸೆ ಕುಲದ
ಅರ್ಧಜನರ ಬಳಿಗೆ ಯಾಜಕ ಎಲ್ಲಾಜಾರನ ಮಗ ಫೀನೆಹಾಸನನ್ನು 14ಮತ್ತು ಕುಲಕ್ಕೆ ಒಬ್ಬನಂತೆ ಹತ್ತುಮಂದಿ
ನಾಯಕರನ್ನೂ ಕಳಿಸಿದರು. ಇವರಲ್ಲಿ ಪ್ರತಿಯೊಬ್ಬನು ತನ್ನ ತನ್ನ ಕುಲಗೋತ್ರ –ಕುಟುಂಬಗಳಲ್ಲಿ
ಮುಖ್ಯಸ್ಥನಾಗಿದ್ದನು.

15 ಇವರು ಗಿಲ್ಯಾದಿನಲ್ಲಿದ್ದ ರೂಬೇನ್ಯರ, ಗಾದ್ಯರ ಹಾಗೂ ಮನಸ್ಸೆಕುಲದ ಅರ್ಧಜನರ ಬಳಿಗೆ
ಬಂದು, 16"ಸರ್ವೇಶ್ವರನ ಸರ್ವಸಭೆ ಹೇಳುವ ಮಾತಿದು: ನೀವು ಇಸ್ರಯೇಲ್ ದೇವರಿಗೆ ವಿರುದ್ಧ ಇಂಥ
ದ್ರೋಹ ಮಾಡಿದ್ದೇಕೆ? ನೀವು ನಿಮಗಾಗಿಯೇ ಒಂದು ಬಲಿಪೀಠವನ್ನು ಕಟ್ಟಿಕೊಂಡಿದ್ದೀರಿ. ಇದರಿಂದ ನೀವು
ಸರ್ವೇಶ್ವರನಿಗೆ ವಿಮುಖವಾದಂತಾಯಿತು; ನೀವು ಇಂದು ಸರ್ವೇಶ್ವರನಿಗೆ ವಿರುದ್ಧ ತಿರುಗಿಬಿದ್ದಂತಾಯಿತು.
17ನಾವು ಪೆಗೋರದಲ್ಲಿ ಅಪರಾಧಿಗಳಾದದ್ದು ಸಾಕಾಗಲಿಲ್ಲವೆ? ಅದರ ನಿಮಿತ್ತ ಸರ್ವೇಶ್ವರನ ಸಭೆಗೇ ಜಾಡ್ಯ
ತಗಲಿತು. ಆದ್ದರಿಂದ ನಾವು ಇಂದಿಗೂ ಶುದ್ಧರಾಗಲಿಲ್ಲ. 18ಇಂತಿರುವಲ್ಲಿ ನೀವು ಮತ್ತೆ ಸರ್ವೇಶ್ವರನನ್ನು
ಬಿಟ್ಟುಬಿಡುತ್ತೀರೋ? ನೀವು ಇಂದು ಸರ್ವೇಶ್ವರನಿಗೆ ವಿರುದ್ಧ ತಿರುಗಿಬಿದ್ದರೆ ನಾಳೆಯೇ ಅವರ ಕೋಪಾಗ್ನಿ
ಇಸ್ರಯೇಲ್ ಸರ್ವಸಭೆಯ ಮೇಲೆ ಉರಿಯತೊಡಗುವುದು. 19ನಿಮ್ಮ ನಾಡು ಅಶುದ್ಧವಾಗಿದೆಯೆಂದು
ತೋರಿದರೆ ಸರ್ವೇಶ್ವರನ ಗುಡಾರವಿರುವ ಅವರ ಸ್ವಂತ ನಾಡಿಗೆ ಬಂದು ನಮ್ಮ ಮಧ್ಯೆಯಿರುವ ಸೊತ್ತನ್ನು
ತೆಗೆದುಕೊಳ್ಳಿ. ನಮ್ಮ ದೇವರಾದ ಸರ್ವೇಶ್ವರನ ಬಲಿಪೀಠ ಒಂದನ್ನು ಬಿಟ್ಟು ನಿಮಗಾಗಿ ಇನ್ನೊಂದನ್ನು
ಕಟ್ಟಿಕೊಂಡು ಸರ್ವೇಶ್ವರನಿಗೂ ನಮಗೂ ವಿರುದ್ಧ ತಿರುಗಿಬೀಳಬೇಡಿ. 20ಜೆರಹನ ಮಗ ಆಕಾನನು
ಸರ್ವೇಶ್ವರನ ಸೊತ್ತನ್ನು ಕದ್ದುಕೊಂಡು ದ್ರೋಹಿಯಾದ. ಆಗ ಸರ್ವೇಶ್ವರನ ಕೋಪ ಇಸ್ರಯೇಲರ
ಸರ್ವಸಭೆಯ ಮೇಲೆ ಎರಗಿತು. ಅವನ ಪಾಪದ ನಿಮಿತ್ತ ಅವನೊಡನೆ ಅನೇಕರು ಸಾಯ
ಬೇಕಾಯಿತಲ್ಲವೆ?" ಎಂದು ಹೇಳಿದರು.

21 ಆಗ ರೂಬೇನ್ಯರು, ಗಾದ್ಯರು ಹಾಗು ಮನಸ್ಸೆಕುಲದ ಅರ್ಧಜನರು, ಇಸ್ರಯೇಲಿನ ಆ
ಕುಲಾಧಿಪತಿಗಳಿಗೆ ಹೀಗೆಂದು ಉತ್ತರಿಸಿದರು: 22"ದೇವಾಧಿದೇವರಾದ ಸರ್ವೇಶ್ವರ ಇದಕ್ಕೆ ಸಾಕ್ಷಿ; ಆ
ದೇವಾಧಿದೇವ ಸರ್ವೇಶ್ವರಸ್ವಾಮಿಗೆ ಇದು ಗೊತ್ತಿದೆ. ಇಸ್ರಯೇಲರಿಗೂ ಗೊತ್ತಾಗುವುದು. ನಾವು
ದ್ರೋಹಿಗಳು, ಸರ್ವೇಶ್ವರನಿಗೆ ವಿರುದ್ಧ ಪಾಪಮಾಡಿದವರು ಆಗಿದ್ದರೆ ಆ ಸ್ವಾಮಿ ನಮ್ಮನ್ನು ಇಂದೇ
ಜೀವದಿಂದುಳಿಸದಿರಲಿ. 23ನಾವು ಸರ್ವೇಶ್ವರನಿಂದ ವಿಮುಖರಾಗಿ ದಹನಬಲಿಯನ್ನಾಗಲಿ,
ಸಮಾಧಾನಬಲಿಯನ್ನಾಗಲಿ, ಧಾನ್ಯ ನೈವೇದ್ಯವನ್ನಾಗಲಿ ಸಮರ್ಪಿಸುವುದಕ್ಕಾಗಿ ಈ ಬಲಿಪೀಠವನ್ನು ಕಟ್ಟಿದ್ದರೆ
ಸರ್ವೇಶ್ವರನೇ ನಮ್ಮನ್ನು ಶಿಕ್ಷಿಸಲಿ. 24ನಾವು ಇದನ್ನು ಕಟ್ಟಿದ್ದು ಒಂದು ವಿಶೇಷ ಉದ್ದೇಶಕ್ಕಾಗಿ; ಮುಂದೆ
ನಿಮ್ಮ ಮಕ್ಕಳು ನಮ್ಮ ಮಕ್ಕಳಿಗೆ, 'ಇಸ್ರಯೇಲಿನ ದೇವರಾದ ಸರ್ವೇಶ್ವರನಲ್ಲಿ ನಿಮಗೇನು ಪಾಲಿದೆ?'
25ರೂಬೇನ್ಯರೇ, ಗಾದ್ಯರೇ, ಸರ್ವೇಶ್ವರ ನಿಮಗೂ ನಮಗೂ ನಡುವೆ ಈ ಜೋರ್ಡನ್ ನದಿಯನ್ನು
ಸರಹದ್ದಾಗಿ ಇಟ್ಟಿದ್ದಾರೆ. ಸರ್ವೇಶ್ವರನಲ್ಲಿ ನಿಮಗೆ ಯಾವ ಪಾಲೂ ಇಲ್ಲ, ಎಂದು ಹೇಳಿ ನಿಮ್ಮ ಮಕ್ಕಳು
ನಮ್ಮ ಮಕ್ಕಳನ್ನು ದೇವಭಕ್ತಿಯಿಂದ ಬೇರ್ಪಡಿಸಿಯಾರೆಂದು ಭಯಪಟ್ಟೆವು. 26ಈ ಕಾರಣದಿಂದಲೇ, 'ಬನ್ನಿ,
ಒಂದು ಬಲಿಪೀಠವನ್ನು ಕಟ್ಟೋಣ. ಅದು ದಹನಬಲಿ ಅಥವಾ ಬೇರೆ ಬಲಿಗಳನ್ನು ಸಮರ್ಪಿಸುವುದಕ್ಕಲ್ಲ,
27ಆದರೆ ಸರ್ವೇಶ್ವರನ ಸನ್ನಿಧಿಯಲ್ಲಿ ದಹನಬಲಿ, ಸಮರ್ಪಣಬಲಿ, ಶಾಂತಿಸಮಾಧಾನಬಲಿ
ಮುಂತಾದುವುಗಳನ್ನು ಅರ್ಪಿಸಿ ಆರಾಧಿಸುವುದಕ್ಕೆ ನಿಮಗೆ ಹಕ್ಕು ಉಂಟೆಂಬುದಕ್ಕೆ ಇದು ಗುರುತಾಗಿರಲಿ.
ನಮಗೂ ನಿಮಗೂ ನಮ್ಮ ಸಂತಾನಕ್ಕೂ ನಿಮ್ಮ ಸಂತಾನಕ್ಕೂ ಇದು ಸಾಕ್ಷಿಯಾಗಿರಲಿ.' ಇದರಿಂದ ಮುಂದೆ
ನಿಮ್ಮ ಮಕ್ಕಳು ನಮ್ಮ ಮಕ್ಕಳಿಗೆ, 'ಸರ್ವೇಶ್ವರನಲ್ಲಿ ನಿಮಗೆ ಪಾಲಿಲ್ಲ' ಎಂದು ಹೇಳುವುದಕ್ಕೆ ಆಸ್ಪದವಿರದು.

28ಒಂದು ವೇಳೆ ಅವರು ಮುಂದೆ ನಮಗಾಗಲಿ, ನಮ್ಮ ಸಂತಾನದವರಿಗಾಗಲಿ ಈ ಪ್ರಕಾರ ಹೇಳಿದ್ದೇ ಆದರೆ
ನಾವು ಅವರಿಗೆ 'ಸರ್ವೇಶ್ವರನ ಬಲಿಪೀಠವನ್ನು ಹೋಲುವ ಈ ವೇದಿಕೆಯನ್ನು ನೋಡಿ; ನಮ್ಮ
ಪೂರ್ವಜರು ಇದನ್ನು ದಹನಬಲಿ, ಸಮರ್ಪಣ ಬಲಿಗಳನ್ನು ಅರ್ಪಿಸುವುದಕ್ಕಾಗಿ ಕಟ್ಟಲಿಲ್ಲ; ಇದು ನಮಗೂ
ನಿಮಗೂ ಮಧ್ಯೆ ಸಾಕ್ಷಿಯಾಗಿದೆಯಷ್ಟೆ,' ಎಂದು ಹೇಳುವೆವು. 29ನಮ್ಮ ದೇವರಾದ ಸರ್ವೇಶ್ವರನ ಗುಡಾರದ
ಮುಂದಿರುವ ಬಲಿಪೀಠದ ಹೊರತು ದಹನಬಲಿ, ಧಾನ್ಯನೈವೇದ್ಯ, ಸಮಾಧಾನಬಲಿ ಮೊದಲಾದವುಗಳನ್ನು
ಸಮರ್ಪಿಸಲು ಬೇರೊಂದು ಬಲಿಪೀಠವನ್ನು ಕಟ್ಟಿ ಸರ್ವೇಶ್ವರನಿಗೆ ವಿಮುಖರಾಗಿ ದ್ರೋಹಿಗಳಾಗುವುದು
ನಮಗೆ ದೂರ ಆಗಿರಲಿ," ಎಂದರು.

**ಸಂಧಾನ**

30 ಯಾಜಕ ಫೀನೆಹಾಸನು ಮತ್ತು ಅವನ ಜೊತೆಯಲ್ಲಿ ಬಂದಿದ್ದ ಕುಲಾಧಿಪತಿಗಳು, ಇಸ್ರಯೇಲಿನ
ಮುಖ್ಯಸ್ಥರು ರೂಬೇನ್, ಗಾದ್ ಹಾಗೂ ಮನಸ್ಸೆಕುಲಗಳವರ ಈ ಮಾತುಗಳನ್ನು ಕೇಳಿ ಸಂತೋಷಪಟ್ಟರು.
31ಯಾಜಕ ಎಲ್ಲಾಜಾರನ ಮಗ ಫೀನೆಹಾಸನು ರೂಬೇನ್, ಗಾದ್, ಮನಸ್ಸೆ ಕುಲಗಳವರಿಗೆ, "ಸರ್ವೇಶ್ವರ
ನಿಮ್ಮ ಮಧ್ಯೆ ಇರುತ್ತಾರೆಂದು ಈಗ ಅರಿವಾಯಿತು. ನೀವು ಸರ್ವೇಶ್ವರಸ್ವಾಮಿಗೆ ವಿರುದ್ಧ ಅಂಥ ದ್ರೋಹವನ್ನು
ಮಾಡಲಿಲ್ಲವಾದ್ದರಿಂದ ಇಸ್ರಯೇಲರನ್ನು ಆತನ ಶಿಕ್ಷಾಹಸ್ತದಿಂದ ತಪ್ಪಿಸಿದಿರಿ," ಎಂದನು.
32 ಯಾಜಕ ಎಲ್ಲಾಜಾರನ ಮಗ ಫೀನೆಹಾಸನು ಮತ್ತು ಮುಖ್ಯಸ್ಥರು ಗಿಲ್ಯಾದ್ ನಾಡಿನಲ್ಲಿದ್ದ
ರೂಬೇನ್ಯರನ್ನು ಹಾಗೂ ಗಾದ್ಯರನ್ನು ಬೀಳ್ಕೊಟ್ಟು ಕಾನಾನ್ ನಾಡಿನಲ್ಲಿದ್ದ ಇಸ್ರಯೇಲರ ಬಳಿಗೆ ಬಂದು
ಅವರಿಗೆ ಈ ಸಮಾಚಾರವನ್ನು ತಿಳಿಸಿದರು. 33ಅವರು ಕೂಡ ಬಹಳ ಸಂತೋಷಪಟ್ಟು ದೇವರಿಗೆ ಧನ್ಯವಾದ
ಸಲ್ಲಿಸಿದರು. ರೂಬೇನ್ ಹಾಗೂ ಗಾದ್ ಕುಲಗಳೊಡನೆ ಯುದ್ಧಮಾಡಿ ಅವರ ನಾಡನ್ನು ಹಾಳು
ಮಾಡಬೇಕೆಂಬ ಆಲೋಚನೆಯನ್ನು ತೊರೆದು ಬಿಟ್ಟರು. 34ರೂಬೇನ್ಯರು ಹಾಗೂ ಗಾದ್ಯರು 'ಸರ್ವೇಶ್ವರನೇ
ದೇವರು' ಎಂಬುದಕ್ಕೆ ಈ ಬಲಿಪೀಠವೇ ಸಾಕ್ಷಿ ಎಂದು ಹೇಳಿ ಅದಕ್ಕೆ 'ಏದ್' ಎಂದು ಹೆಸರಿಟ್ಟರು.

**ಯೆಹೋಶುವನಿಂದ ಬೀಳ್ಕೊಡುಗೆಯ ಬುದ್ಧಿವಾದ**

**23** ಸರ್ವೇಶ್ವರಸ್ವಾಮಿ ಸುತ್ತಮುತ್ತಲಿನ ಶತ್ರುಗಳನ್ನು ನಿರ್ಮೂಲಮಾಡಿ ಇಸ್ರಯೇಲರಿಗೆ ನೆಮ್ಮದಿಯಿತ್ತರು.
ಬಹಳ ದಿನಗಳಾದ ತರುವಾಯ ಯೆಹೋಶುವ ಹಣ್ಣು ಹಣ್ಣು ಮುದುಕನಾದ. 2ಆತ ಇಸ್ರಯೇಲರೆಲ್ಲರನ್ನು,
ಅವರ ಹಿರಿಯರನ್ನು, ಮುಖ್ಯಸ್ಥರನ್ನು, ನ್ಯಾಯಾಧಿಪತಿಗಳನ್ನು ಹಾಗೂ ಅಧಿಕಾರಿಗಳನ್ನು ತನ್ನ ಬಳಿಗೆ
ಕರೆಯಿಸಿದನು. ಅವರಿಗೆ, "ನಾನು ಮುಪ್ಪಿನ ಮುದುಕನಾದೆ. 3ನಿಮ್ಮ ದೇವರಾದ ಸರ್ವೇಶ್ವರ ನಿಮ್ಮ
ಪರವಾಗಿದ್ದು, ಈ ಜನಾಂಗಗಳಿಗೆ ಮಾಡಿದ್ದೆಲ್ಲವನ್ನು ನೀವು ಕಣ್ಣಾರೆ ನೋಡಿದ್ದೀರಿ. ಹೌದು, ನಿಮ್ಮ ಪರವಾಗಿ
ಯುದ್ಧ ಮಾಡಿದಾತ ನಿಮ್ಮ ದೇವರಾದ ಸರ್ವೇಶ್ವರ ಸ್ವಾಮಿಯೇ. 4ನೋಡಿ, ಜೋರ್ಡನಿನಿಂದ ಪಶ್ಚಿಮ
ಮಹಾ ಸಮುದ್ರದವರೆಗೂ ಇರುವ ಜನಾಂಗಗಳಲ್ಲಿ ಸತ್ತವರ ಹಾಗೂ ಉಳಿದವರ ನಾಡನ್ನು ನಿಮಗೆ
ಸೊತ್ತಾಗಿಕೊಟ್ಟಿದ್ದೇನೆ, 5ನಿಮ್ಮ ದೇವರಾದ ಸರ್ವೇಶ್ವರ ತಾವೇ ಉಳಿದವರನ್ನು ನಿಮ್ಮ ಕಣ್ಮುಂದೆ
ಹೊರಡಿಸಿಬಿಡುವರು. ಅವರ ವಾಗ್ದಾನದಂತೆ ಆ ಜನರ ನಾಡನ್ನು ನೀವು ವಶಪಡಿಸಿಕೊಳ್ಳುವಿರಿ. 6ಮೋಶೆಯ
ಧರ್ಮಶಾಸ್ತ್ರವನ್ನೂ ಎಲ್ಲಾ ವಿಧಿಗಳನ್ನೂ ಕೈಗೊಳ್ಳುವುದರಲ್ಲಿ ಸ್ಥಿರ ಚಿತ್ತದಿಂದಿರಿ. ಎಡಕ್ಕಾಗಲಿ ಬಲಕ್ಕಾಗಲಿ
ಓರೆಯಾಗಬೇಡಿ. 7ಉಳಿದಿರುವ ಈ ಜನಾಂಗಗಳ ಜೊತೆ ಸೇರಿಕೊಳ್ಳಬೇಡಿ. ಅವರ ದೇವತೆಗಳ ಹೆಸರು
ಹೇಳಿ ಆರಾಧಿಸಬಾರದು, ಪ್ರಮಾಣ ಮಾಡಬಾರದು, ಅವುಗಳನ್ನು ಪೂಜಿಸಬಾರದು. ಅವುಗಳಿಗೆ ಸೇವೆ
ಮಾಡಬಾರದು. 8ಈವರೆಗೆ ಹೇಗೋ ಹಾಗೆಯೇ ಇನ್ನು ಮುಂದಕ್ಕೂ ನಿಮ್ಮ ದೇವರಾದ ಸರ್ವೇಶ್ವರನನ್ನೇ
ಅಂಟಿಕೊಂಡಿರಿ. 9ಸರ್ವೇಶ್ವರ ಮಹಾಪರಾಕ್ರಮಿಗಳಾದ ಜನಾಂಗಗಳನ್ನು ನಮ್ಮೆದುರಿನಿಂದ ಓಡಿಸಿಬಿಟ್ಟಿದ್ದಾರೆ.
ನಮ್ಮನ್ನು ಪ್ರತಿಭಟಿಸಿ ನಿಂತವನು ಒಬ್ಬನೂ ಇಲ್ಲ. 10ನಿಮ್ಮ ದೇವರಾದ ಸರ್ವೇಶ್ವರ ತಮ್ಮ ವಾಗ್ದಾನದಂತೆ
ನಿಮ್ಮ ಪರವಾಗಿ ಯುದ್ಧಮಾಡಿದರು. ಆದ್ದರಿಂದಲೇ ನಿಮ್ಮಲ್ಲಿ ಒಬ್ಬನು ಸಾವಿರ ಜನರನ್ನು ಓಡಿಸುವಷ್ಟು
ಶಕ್ತನಾದ. 11ಇಂತಿರಲು ಜಾಗರೂಕತೆಯಿಂದಿರಿ, ನಿಮ್ಮ ಪ್ರಾಣದಂತೆ ದೇವರಾದ ಸರ್ವೇಶ್ವರನನ್ನೇ ಪ್ರೀತಿಸಿರಿ.

[12]ದೇವರಿಗೆ ವಿಮುಖರಾಗಿ, ನಿಮ್ಮ ಮಧ್ಯೆ ಉಳಿದಿರುವ ಈ ಜನಾಂಗಗಳೊಡನೆ ಕೊಟ್ಟು ತಂದು
ಮಿಶ್ರವಾಗಬೇಡಿ. [13]ಮಿಶ್ರವಾದರೆ ನಿಮ್ಮ ದೇವರಾದ ಸರ್ವೇಶ್ವರ ಅವರನ್ನು ನಿಮ್ಮ ಮಧ್ಯೆಯಿಂದ
ಹೊರಡಿಸುವುದೇ ಇಲ್ಲವೆಂಬುದು ನಿಮಗೆ ತಿಳಿದಿರಲಿ. ಆ ಜನರೇ ನಿಮಗೆ ಉರುಳೂ ಬೋನೂ ಆಗುವರು;
ಪಕ್ಕೆಗೆ ಬಡಿಯುವ ಕೊರಡಾಗಿಯೂ ಇರಿಯುವ ಶೂಲವಾಗಿಯೂ ಕಣ್ಣಿಗೆ ಚುಚ್ಚುವ ಮುಳ್ಳಾಗಿಯೂ
ಮಾರ್ಪಡುವರು. ಕಡೆಗೆ ನಿಮ್ಮ ದೇವರಾದ ಸರ್ವೇಶ್ವರ ನಿಮಗೆ ಕೊಟ್ಟ ಈ ಚೆಲುವ ನಾಡಲ್ಲಿ ನೀವೇ
ಇಲ್ಲದಂತಾಗುವಿರಿ.

14 ಈಗ ನಾನು, ಭೂನಿವಾಸಿಗಳೆಲ್ಲರು ಹಿಡಿಯುವ ಹಾದಿಯನ್ನು ಹಿಡಿಯಬೇಕಾಗಿದೆ. ನಿಮ್ಮ
ದೇವರಾದ ಸರ್ವೇಶ್ವರ ನಿಮ್ಮ ವಿಷಯದಲ್ಲಿ ನುಡಿದ ಆಶೀರ್ವಚನಗಳಲ್ಲಿ ಒಂದೂ ವ್ಯರ್ಥವಾಗಲಿಲ್ಲ.
ಎಲ್ಲವೂ ತಪ್ಪದೆ ನೆರವೇರಿವೆ ಎಂಬುದು ನಿಮಗೆ ಮನದಟ್ಟಾಗಿರಲಿ. [15]ನಿಮ್ಮ ದೇವರಾದ ಸರ್ವೇಶ್ವರ ತಮ್ಮ
ವಾಗ್ದಾನಕ್ಕನುಸಾರ ಈಗ ನಿಮಗೆ ಎಲ್ಲಾ ವಿಧದ ಒಳಿತನ್ನೂ ಅನುಗ್ರಹಿಸಿದಂತೆಯೇ ನಿಮ್ಮ ಮೇಲೆ ಎಲ್ಲಾ
ತರದ ಕೇಡುಗಳನ್ನು ಬರಮಾಡಿ ತಾವು ಕೊಟ್ಟ ಈ ಚೆಲುವಾದ ನಾಡಿನಿಂದ ನಿಮ್ಮನ್ನು ನಿರ್ಮೂಲ
ಮಾಡುವರು. [16]ದೇವರಾದ ಸರ್ವೇಶ್ವರನ ನಿಬಂಧನೆಯನ್ನು ನೀವು ಮೀರಿ ಅನ್ಯದೇವತೆಗಳಿಗೆ ಸೇವೆ ಸಲ್ಲಿಸಿ,
ಅಡ್ಡಬಿದ್ದರೆ, ಸರ್ವೇಶ್ವರನ ಕೋಪಾಗ್ನಿ ನಿಮ್ಮ ಮೇಲೆ ಎರಗುವುದು; ಅವರು ನಿಮಗೆ ಕೊಟ್ಟ ಈ ಒಳ್ಳೆಯ
ನಾಡಿನಿಂದ ಹೊರ ದೂಡಲ್ಪಟ್ಟು ಬೇಗನೆ ನಾಶವಾಗುವಿರಿ," ಎಂದನು.

## ಶೆಕೆಮಿನಲ್ಲಿ ಒಪ್ಪಂದದ ನವೀಕರಣ

**24** ತರುವಾಯ ಯೆಹೋಶುವನು ಎಲ್ಲ ಇಸ್ರಯೇಲ ಕುಲದವರನ್ನು ಶೆಕೆಮಿನಲ್ಲಿ ಸಭೆ ಸೇರಿಸಿದನು.
ಹಿರಿಯರು, ನಾಯಕರು, ನ್ಯಾಯಾಧಿಪತಿಗಳು, ಅಧಿಕಾರಿಗಳು ಬಂದು ದೇವರ ಸನ್ನಿಧಿಯಲ್ಲಿ
ಉಪಸ್ಥಿತರಾದರು. [2]ಯೆಹೋಶುವ ಅವರೆಲ್ಲರನ್ನು ಉದ್ದೇಶಿಸಿ, "ನಿಮ್ಮ ದೇವರಾದ ಸರ್ವೇಶ್ವರಸ್ವಾಮಿ
ಹೇಳುವುದನ್ನು ಗಮನಿಸಿರಿ: 'ಅಬ್ರಹಾಮ್, ನಾಹೋರ್ ಎಂಬವರ ತಂದೆಯಾದ ತೆರಹ ಮೊದಲಾದ ನಿಮ್ಮ
ಮೂಲ ಪುರುಷರು ಪೂರ್ವದಲ್ಲಿ ಯೂಫ್ರೆಟಿಸ್ ನದಿಯ ಆಚೆ ಇದ್ದರು. ಅನ್ಯದೇವತೆಗಳನ್ನು
ಪೂಜಿಸುತ್ತಿದ್ದರು. [3]ನಾನು ನಿಮ್ಮ ಪಿತೃವಾದ ಅಬ್ರಹಾಮನನ್ನು ಅಲ್ಲಿಂದ ಕರೆತಂದು, ಕಾನಾನ್ ನಾಡಿನಲ್ಲೆಲ್ಲಾ
ಸಂಚಾರ ಮಾಡಿಸಿದೆ. ಇಸಾಕನೆಂಬ ಮಗನನ್ನು ಕೊಟ್ಟು ಅವನ ಸಂತಾನವನ್ನು ಹೆಚ್ಚಿಸಿದೆ. [4]ಇಸಾಕನಿಗೆ
ಯಾಕೋಬ್ ಮತ್ತು ಏಸಾವ್ ಎಂಬ ಇಬ್ಬರು ಮಕ್ಕಳನ್ನು ಅನುಗ್ರಹಿಸಿದೆ. ಏಸಾವನಿಗೆ ಸೇಯೀರ್ ಬೆಟ್ಟವನ್ನು
ಸ್ವಂತ ಸೊತ್ತಾಗಿ ದಯಪಾಲಿಸಿದೆ. ಯಕೋಬನಾದರೋ ತನ್ನ ಮಕ್ಕಳ ಸಮೇತ ಈಜಿಪ್ಟ್ ದೇಶಕ್ಕೆ ಹೋದ.
[5]ಬಳಿಕ ನಾನು ಮೋಶೆ ಹಾಗೂ ಆರೋನರನ್ನು ಕಳಿಸಿ, ಆ ಈಜಿಪ್ಟಿನಲ್ಲಿ ಅನೇಕ ಅದ್ಭುತಕಾರ್ಯಗಳನ್ನು
ನಡೆಸಿ, ಆ ಜನರನ್ನು ಬಾಧಿಸಿ, ನಿಮ್ಮನ್ನು ಹೊರಗೆ ಕರೆತಂದೆ. [6]ನಿಮ್ಮ ಪೂರ್ವಜರು ಈಜಪ್ಟಿನಿಂದ
ಬಿಡುಗಡೆಯಾಗಿ ಕೆಂಪುಸಮುದ್ರಕ್ಕೆ ಬರುತ್ತ ಇರುವಾಗ ಈಜಿಪ್ಟಿನವರ ರಥಾಶ್ವಬಲಗಳ ಸಹಿತ ಅವರನ್ನು ಆ
ಸಮುದ್ರದವರೆಗೂ ಹಿಂದಟ್ಟಿ ಬಂದರು. [7]ಆಗ ನಿಮ್ಮ ಪೂರ್ವಜರು ನನಗೆ ಮೊರೆಯಿಟ್ಟರು. ನಾನು
ಅವರಿಗೂ ಈಜಿಪ್ಟಿನವರಿಗೂ ಮಧ್ಯೆ ಕಾರ್ಗತ್ತಲೆಯನ್ನು ಉಂಟುಮಾಡಿದೆ. ಇದಲ್ಲದೆ ಈಜಿಪ್ಟಿನವರ ಮೇಲೆ
ಸಮುದ್ರವನ್ನು ಬರಮಾಡಿ ಅವರನ್ನು ಮುಳುಗಿಸಿಬಿಟ್ಟೆ. ನಾನು ಈಜಿಪ್ಟಿನಲ್ಲಿ ಏನೇನು ಮಾಡಿದೆನೆಂಬುದಕ್ಕೆ
ನೀವೇ ಸಾಕ್ಷಿಗಳು.

8 'ನೀವು ದೀರ್ಘಕಾಲ ಮರುಭೂಮಿಯಲ್ಲಿದ್ದಿರಿ. ಅನಂತರ ನಿಮ್ಮನ್ನು ಜೋರ್ಡನಿನ ಆಚೆ
ಅಮೋರಿಯರ ನಾಡಿಗೆ ಕರೆತಂದೆ. ನಿಮ್ಮೊಡನೆ ಯುದ್ಧಕ್ಕೆ ಬಂದ ಅವರನ್ನು ನಿಮ್ಮ ಕೈವಶ ಮಾಡಿದೆ. ನೀವು
ಅವರ ನಾಡನ್ನು ಸ್ವತಂತ್ರಿಸಿಕೊಂಡಿರಿ. ಅವರನ್ನು ನಿಮ್ಮೆದುರಿನಲ್ಲೇ ನಾಶ ಮಾಡಿದೆ. [9]ಆಮೇಲೆ ಮೋವಾಬ್ಯರ
ಅರಸನೂ ಚಿಪ್ಪೋರನ ಮಗನೂ ಆದ ಬಾಲಾಕನು ಇಸ್ರಯೇಲರಾದ ನಿಮ್ಮ ವಿರುದ್ದ ಯುದ್ಧಮಾಡಲು
ಎದ್ದ. ನಿಮ್ಮನ್ನು ಶಪಿಸಲು ಬೆಯೋರನ ಮಗ ಬಿಳಾಮನಿಗೆ ಕರೆ ಕಳುಹಿಸಿದ. [10]ಆದರೆ ನಾನು ಆ
ಬಿಳಾಮನಿಗೆ ಸಮ್ಮತಿ ಕೊಡಲಿಲ್ಲವಾದ್ದರಿಂದ ಅವನು ನಿಮ್ಮನ್ನು ಆಶೀರ್ವದಿಸುತ್ತಲೇ ಇರಬೇಕಾಯಿತು. ಹೀಗೆ
ನಿಮ್ಮನ್ನು ಅವನ ಕೈಗೆ ಬೀಳದಂತೆ ತಪ್ಪಿಸಿದೆ. [11]ನೀವು ಜೋರ್ಡನನ್ನು ದಾಟಿ ಜೆರಿಕೋವಿಗೆ ಬಂದಿರಿ. ಆಗ

ಜೆರಿಕೋವಿನವರು, ಅಮೋರಿಯರು, ಪೆರಿಜ್ಜೀಯರು, ಕಾನಾನ್ಯರು, ಹಿತ್ತಿಯರು, ಗಿರ್ಗಾಷ್ಟಿಯರು,
ಹಿವ್ವಿಯರು ಹಾಗೂ ಯೆಬೂಸಿಯರು ಇವರೆಲ್ಲರೂ ನಿಮಗೆ ವಿರುದ್ಧ ಯುದ್ಧಕ್ಕೆ ಬಂದರು. ನಾನು
ಅವರೆಲ್ಲರನ್ನು ನಿಮ್ಮ ಕೈವಶಮಾಡಿದೆ. 12ಇದಲ್ಲದೆ ಕಣಜದ ಹುಳುಗಳನ್ನು ನಿಮ್ಮ ಮುಂದಾಗಿ ಕಳುಹಿಸಿದೆ.
ಅವು ಅಮೋರಿಯರ ಅರಸರಿಬ್ಬರನ್ನು ಓಡಿಸಿ ಬಿಟ್ಟವು. ಇದು ನಿಮ್ಮ ಕತ್ತಿಬಿಲ್ಲುಗಳಿಂದ ಆದುದಲ್ಲ. 13ನೀವು
ಕೃಷಿ ಮಾಡದ, ಬೆಳೆ ತುಂಬಿದ ಭೂಮಿಯನ್ನು ನಿಮಗೆ ಕೊಟ್ಟೆ. ನೀವು ಕಟ್ಟದ ನಗರಗಳಲ್ಲಿ
ವಾಸಮಾಡುತ್ತಿದ್ದೀರಿ. ನೀವು ನೆಟ್ಟು ಬೆಳೆಸದ ದ್ರಾಕ್ಷಿ ಹಾಗೂ ಎಣ್ಣೆಮರಗಳ ತೋಟಗಳನ್ನು
ಅನುಭವಿಸುತ್ತಿದ್ದೀರಿ'.

14 "ಈ ಕಾರಣ ನೀವು ಸರ್ವೇಶ್ವರನಲ್ಲಿ ಭಯಭಕ್ತಿಯುಳ್ಳವರಾಗಿರಿ. ಪೂರ್ಣಮನಸ್ಸಿನಿಂದ
ಯಥಾರ್ಥಚಿತ್ತದಿಂದ ಅವರಿಗೆ ಸೇವೆಸಲ್ಲಿಸಿರಿ. ನಿಮ್ಮ ಪೂರ್ವಜರು ಯೂಫ್ರಟಿಸ್ ನದಿಯಾಚೆ ಯಲ್ಲೂ
ಈಜಿಪ್ಟಿನಲ್ಲೂ ಪೂಜಿಸುತ್ತಿದ್ದ ದೇವತೆಗಳನ್ನು ತೊರೆದುಬಿಡಿ. 15ಸರ್ವೇಶ್ವರನಿಗೆ ಸೇವೆ ಸಲ್ಲಿಸಿರಿ. ನಿಮಗೆ ಇದು
ಸರಿಕಾಣದಿದ್ದರೆ ಯಾರಿಗೆ ಸೇವೆಸಲ್ಲಿಸಬೇಕೆಂದಿದ್ದೀರಿ? ಇಂದೇ ಆರಿಸಿಕೊಳ್ಳಿ: ನಿಮ್ಮ ಪೂರ್ವಜರು
ಯೂಫ್ರಟಿಸ್ ನದಿಯ ಆಚೆಯಲ್ಲಿ ಪೂಜಿಸುತ್ತಿದ್ದ ದೇವತೆಗಳಿಗೋ? ಈ ನಾಡಿನ ಮೂಲನಿವಾಸಿಗಳಾದ
ಅಮೋರಿಯರ ದೇವತೆಗಳಿಗೋ? ಹೇಳಿ. ನಾನು ಮತ್ತು ನನ್ನ ಮನೆಯವರು ಮಾತ್ರ ಸರ್ವೇಶ್ವರನಿಗೇ
ಸೇವೆ ಸಲ್ಲಿಸುತ್ತೇವೆ," ಎಂದನು.

16 ಅದಕ್ಕೆ ಜನರು, "ಸರ್ವೇಶ್ವರನನ್ನು ಬಿಟ್ಟು ಅನ್ಯದೇವತೆಗಳಿಗೆ ಸೇವೆಸಲ್ಲಿಸುವುದು ನಮ್ಮಿಂದ
ದೂರವಿರಲಿ. 17ನಾವು ದಾಸತ್ವದಲ್ಲಿದ್ದ ಈಜಿಪ್ಟಿನಿಂದ ನಮ್ಮನ್ನೂ ನಮ್ಮ ಪೂರ್ವಜರನ್ನೂ ಹೊರತಂದವರು
ನಮ್ಮ ದೇವರಾದ ಸರ್ವೇಶ್ವರ ಸ್ವಾಮಿಯೇ. ನಮ್ಮೆದುರಿನಲ್ಲೇ ಅವರು ಮಾಡಿದ ಅದ್ಭುತಕಾರ್ಯಗಳನ್ನು
ನೋಡಿದ್ದೇವೆ. ನಮ್ಮ ಎಲ್ಲಾ ಪ್ರಯಾಣಗಳಲ್ಲೂ ನಾವು ದಾಟಿಬಂದ ಜನಾಂಗಗಳಿಂದ ನಮ್ಮನ್ನು
ಕಾಪಾಡಿದವರು ಅವರೇ. 18ಈ ನಾಡಿನ ನಿವಾಸಿಗಳಾಗಿದ್ದ ಅಮೋರಿಯರು ಮೊದಲಾದ ಎಲ್ಲಾ
ಜನಾಂಗಗಳನ್ನು ಇಲ್ಲಿಂದ ಹೊರಡಿಸಿಬಿಟ್ಟವರು ಅವರೇ. ಆದುದರಿಂದ ನಾವು ಕೂಡ ಸರ್ವೇಶ್ವರನಿಗೆ
ಸೇವೆಸಲ್ಲಿಸುತ್ತೇವೆ. ಅವರೇ ನಮ್ಮ ದೇವರು," ಎಂದು ಉತ್ತರಕೊಟ್ಟರು.

19 ಆಗ ಯೆಹೋಶುವನು ಅವರಿಗೆ, "ನೀವು ಸರ್ವೇಶ್ವರನಿಗೆ ಸೇವೆಸಲ್ಲಿಸಲು ಶಕ್ತರಲ್ಲ.
ಸರ್ವೇಶ್ವರಸ್ವಾಮಿ ಪರಿಶುದ್ಧರು; ತಮಗೆ ಸಲ್ಲಬೇಕಾದ ಗೌರವವನ್ನು ಮತ್ತೊಬ್ಬರಿಗೆ ಸಲ್ಲಗೊಡಿಸದ ದೇವರು;
ಅವರು ನಿಮ್ಮ ಪಾಪ, ಅಪರಾಧಗಳನ್ನು ಕ್ಷಮಿಸರು. 20ನೀವು ಅವರನ್ನು ಬಿಟ್ಟು ಅನ್ಯದೇವತೆಗಳಿಗೆ
ಸೇವೆಸಲ್ಲಿಸಿದರೆ ನಿಮಗೆ ವಿಮುಖರಾಗಿ, ಒಳಿತಿಗೆ ಬದಲಾಗಿ ಕೇಡನ್ನೇ ಬರಮಾಡಿ ನಿಮ್ಮನ್ನು ನಾಶಮಾಡಿ
ಬಿಡುವರು," ಎಂದನು.

21 ಜನರು ಯೆಹೋಶುವನಿಗೆ, "ಇಲ್ಲ ನಾವು ಸರ್ವೇಶ್ವರಸ್ವಾಮಿಗೇ ಸೇವೆಸಲ್ಲಿಸುತ್ತೇವೆ," ಎಂದರು.

22 ಯೆಹೋಶುವ ಅವರಿಗೆ, "ನೀವು ಸರ್ವೇಶ್ವರನಿಗೇ ಸೇವೆಸಲ್ಲಿಸುವುದನ್ನು ಆರಿಸಿ
ಕೊಂಡಿರುವುದಕ್ಕೆ ನೀವೇ ಸಾಕ್ಷಿಗಳು," ಎನ್ನಲು ಅವರು, "ಹೌದು, ನಾವೇ ಸಾಕ್ಷಿಗಳು," ಎಂದು
ಉತ್ತರಕೊಟ್ಟರು.

23 ಆಗ ಯೆಹೋಶುವ, "ಹಾಗಾದರೆ ನಿಮ್ಮಲ್ಲಿರುವ ಅನ್ಯದೇವತೆಗಳನ್ನು ತೊರೆದು ಬಿಟ್ಟು
ಇಸ್ರಯೇಲಿನ ದೇವರಾದ ಸರ್ವೇಶ್ವರನ ಕಡೆಗೆ ನಿಮ್ಮ ಹೃನ್ಮನಗಳನ್ನು ತಿರುಗಿಸಿಕೊಳ್ಳಿ," ಎಂದನು. 24ಅದಕ್ಕೆ
ಜನರು, "ನಮ್ಮ ದೇವರಾದ ಸರ್ವೇಶ್ವರನಿಗೇ ಸೇವೆಸಲ್ಲಿಸುತ್ತೇವೆ. ಅವರ ಮಾತನ್ನೇ ಕೇಳುತ್ತೇವೆ," ಎಂದರು.

25 ಹೀಗೆ ಯೆಹೋಶುವ ಶೆಕೆಮಿನಲ್ಲಿ ಇಸ್ರಯೇಲರೊಡನೆ ಒಪ್ಪಂದ ಮಾಡಿಕೊಂಡು ಅವರಿಗೆ
ವಿಧಿನಿಯಮಗಳನ್ನು ನೇಮಿಸಿದನು. 26ಇದು ಮಾತ್ರವಲ್ಲ, ಈ ಎಲ್ಲಾ ಮಾತುಕತೆಗಳನ್ನು ದೇವರ
ಧರ್ಮಶಾಸ್ತ್ರಗ್ರಂಥದಲ್ಲಿ ಬರೆದಿಟ್ಟನು. ಒಂದು ದೊಡ್ಡ ಕಲ್ಲನ್ನು ಸರ್ವೇಶ್ವರನ ಆಲಯದ ಹತ್ತಿರದಲ್ಲೇ ಇದ್ದ
ಓಕ್ ವೃಕ್ಷದ ಅಡಿಯಲ್ಲಿ ನಿಲ್ಲಿಸಿದನು. 27ಬಳಿಕ ಎಲ್ಲಾ ಜನರಿಗೆ, "ಇಗೋ, ನೋಡಿ ಈ ಕಲ್ಲು! ಇದು ನಿಮ್ಮ
ವಿಷಯದಲ್ಲಿ ಸಾಕ್ಷಿ ಹೇಳುವುದು. ಸರ್ವೇಶ್ವರ ನಮಗೆ ಹೇಳಿದ ಎಲ್ಲ ಮಾತುಗಳನ್ನು ಇದು ಕೇಳಿದೆ.
28ಆದ್ದರಿಂದ ನೀವು ನಿಮ್ಮ ದೇವರಾದ ಅವರನ್ನು ಅಲ್ಲಗಳೆದದ್ದೇ ಆದರೆ ಈ ಕಲ್ಲೇ ನಿಮಗೆ
ಸಾಕ್ಷಿಯಾಗಿರುವುದು," ಎಂದು ಹೇಳಿ ಆ ಜನರನ್ನು ಅವರವರ ಸೊತ್ತಿದ್ದಲ್ಲಿಗೆ ಕಳುಹಿಸಿಬಿಟ್ಟನು.

**ಯೆಹೋಶುವಿನ ನಿಧನ**

29 ಇದಾದ ಮೇಲೆ ಸರ್ವೇಶ್ವರನ ದಾಸನಾದ ನೂನನ ಮಗ ಯೆಹೋಶುವನು ನೂರಹತ್ತು
ವರ್ಷದವನಾಗಿ ಮರಣಹೊಂದಿದ. 30ಆತನ ಕಳೇಬರವನ್ನು ಎಫ್ರಯಿಮ್ ಮಲೆನಾಡಿನಲ್ಲಿ ಗಾಷ್ ಬೆಟ್ಟದ
ಉತ್ತರ ದಿಕ್ಕಿನಲ್ಲಿರುವ ತಿಮ್ನತ್ ಸೆರಹ ಎಂಬ ಅವನ ಸ್ವಂತ ಭೂಮಿಯಲ್ಲಿ ಸಮಾಧಿಮಾಡಿದರು.

31 ಯೆಹೋಶುವನ ದಿನಗಳಲ್ಲೂ ಅವನ ಕಾಲದಿಂದ ಇನ್ನೂ ಜೀವಿಸುತ್ತಿದ್ದ ಹಿರಿಯರ ದಿನಗಳಲ್ಲೂ
ಇಸ್ರಯೇಲರು, ಸರ್ವೇಶ್ವರ ಇಸ್ರಯೇಲರ ಹಿತಕ್ಕಾಗಿ ನಡೆಸಿದ ಅದ್ಭುತಕಾರ್ಯಗಳಿಗೆ ಸಾಕ್ಷಿಗಳಾಗಿದ್ದರು.

32 ಇಸ್ರಯೇಲರು ಈಜಿಪ್ಟಿನಿಂದ ತಂದ ಜೋಸೆಫನ ಎಲುಬುಗಳನ್ನು ಶೆಕೆಮ್ ಊರಿನ ಹೊಲದಲ್ಲಿ
ಹೂಳಿಟ್ಟರು. ಈ ಹೊಲವನ್ನು ಯಕೋಬನು ಶೆಕೆಮ್‍ನ ತಂದೆಯಾದ ಹಮೋರನ ಮಕ್ಕಳಿಂದ ನೂರು
ಬೆಳ್ಳಿನಾಣ್ಯ ಕೊಟ್ಟು ಕೊಂಡುಕೊಂಡಿದ್ದನು. ಅದು ಜೋಸೆಫ್ಯರ ಸೊತ್ತಾಗಿತ್ತು.

33 ಆರೋನನ ಮಗ ಎಲ್ಲಾಜಾರನೂ ಮರಣಹೊಂದಿದನು. ಅವನ ಶವವನ್ನು ಎಫ್ರಯಿಮ್
ಮಲೆನಾಡಿನಲ್ಲಿ ಅವನ ಮಗ ಫೀನೆಹಾಸನ ಪಾಲಿಗೆ ಬಂದ ಗುಡ್ಡದಲ್ಲಿ ಸಮಾಧಿಮಾಡಿದರು.